22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 107 | ನವದೆಹಲಿ | ಬೆಲೆ ₹10 | ಅಕ್ಟೋಬರ್ 18, 2024 ಶುಕ್ರವಾರ




## ಒಳಪುಟಗಳಲ್ಲಿ

ಅಸ್ಸಾಂನಲ್ಲಿ ವಲಸಿಗರಿಗೆ ಪೌರತ್ವ ಸೆಕ್ಷನ್ 6ಎ ಸಿಂಧುತ್ವ ಎತ್ತಿಹಿಡಿದ ಸುಪ್ರೀಂಕೋರ್ಟ್ ಪು.4

# ರಾಯಚೂರು ವಿ.ವಿ.ಗೆ ಮಹರ್ಷಿ ವಾಲ್ಮೀಕಿ ಹೆಸರು ನಾಮಕರಣ: ಸಿ.ಎಂ.

## ರಾಮಾಯಣ ಬರೆದ ಮಹರ್ಷಿ ವಾಲ್ಮೀಕಿ ತಳ ಸಮುದಾಯದವರು ❖ ತಳ ಸಮುದಾಯದವರು ಸಂಸ್ಕೃತ ಕಲಿತು ಕಾವ್ಯ ರಚಿಸಿದರೆ ಅಂಥವರ ಬಗ್ಗೆ ಕಥೆ ಕಟ್ಟುತ್ತಾರೆ: ಸಿದ್ದರಾಮಯ್ಯ

**ಬೆಂಗಳೂರು ಅ 17:** ಎಲ್ಲಾ ಎಸ್‌ಟಿ ವಸತಿ ಶಾಲೆಗಳಿಗೆ ಮತ್ತು ರಾಯಚೂರು ವಿವಿಗೆ ಮಹರ್ಷಿ ವಾಲ್ಮೀಕಿ ಹೆಸರು ಇಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಹತ್ವದ ಘೋಷಣೆ ಮಾಡಿದರು. ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ವಾಲ್ಮೀಕಿ ಜಯಂತಿ ಪ್ರಯುಕ್ತ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ, ಐದು ಮಹನೀಯರಿಗೆ ವಾಲ್ಮೀಕಿ ಪ್ರಶಸ್ತಿ ವಿತರಿಸಿ ಮಾತನಾಡಿದರು.







**ಶಾಕುಂತಲಾ ನಾಟಕ :** ಬರೆದ ಕಾಳಿದಾಸ ಕುರುಬ ಸಮುದಾಯದವರು. ಮಹಾಭಾರತ ಬರೆದ ವ್ಯಾಸರು ಬೆಸ್ತ ಸಮುದಾಯದವರು. ರಾಮಾಯಣ ಬರೆದ ಮಹರ್ಷಿ ವಾಲ್ಮೀಕಿ ಸಮುದಾಯದವರು. ದರೋಡೆ ಮಾಡ್ಕೊಂಡು ಓಡಾಡುತ್ತಿದ್ದ ವಾಲ್ಮೀಕಿ ರಾಮಾಯಣ ಬರೆಯಲು ಸಾಧ್ಯವಾ ಎಂದು ಕತೆ ಕಟ್ಟಿಬಿಟ್ಟರು. ತಳ ಸಮುದಾಯಗಳು, ಶೂದ್ರರು ಶಿಕ್ಷಣ, ಸಂಸ್ಕೃತ ಕಲಿಯುವುದು ನಿಷಿದ್ಧವಾಗಿತ್ತು. ಇಂಥಾ ಹೊತ್ತಲ್ಲೇ ಸಂಸ್ಕೃತ ಕಲಿತು ಶ್ಲೋಕಗಳ ಮೂಲಕ ಜಗತ್ಪ್ರಸಿದ್ಧ ರಾಮಾಯಣ ಮಹಾಕಾವ್ಯ ಬರೆದರಲ್ಲಾ ಇದು ಹೆಮ್ಮೆಯ ಮತ್ತು ಮಾದರಿ ಸಂಗತಿ ಎಂದರು. ಶಿಕ್ಷಣ ಕಲಿಯುವ ಅವಕಾಶ ಸಿಕ್ಕಾಗ ಇವರೆಲ್ಲಾ ಕಲಿತರು. ಬರೆದರು. ಜಗತ್ತಿಗೇ ಪ್ರೇರಣೆ ಆದರು. ವಾಲ್ಮೀಕಿ ಅವರು ಸಮಪಾಲು, ಸಮಬಾಳು, ಸಮಾನ ಅವಕಾಶಗಳ ಬಗ್ಗೆ ಹೇಳಿದ್ದರು. ರಾಮಾಯಣದ ರಾಮರಾಜ್ಯ ಅಂದರೆ ಸಮಪಾಲಿನ ಸಮಾನ ಅವಕಾಶಗಳ ರಾಜ್ಯ ಎಂದರ್ಥ ಎಂದರು.

ರಾಮನ ಮಕ್ಕಳಾದ ಲವ ಕುಶರಿಗೆ ಆಶ್ರಯ ನೀಡಿ ಶಿಕ್ಷಣ ಕೊಟ್ಟಿದ್ದು ವಾಲ್ಮೀಕಿ ಮಹರ್ಷಿಗಳು. ವಾಲ್ಮೀಕಿ ವಿಶ್ವಮಾನವರಾಗಿದ್ದರು ಎನ್ನುವುದಕ್ಕೆ ಇದು ಸಣ್ಣ ಉದಾಹರಣೆ ಎಂದರು. SCSP/TSP ಮೂಲಕ SC/ST ಸಮುದಾಯದ ಜನಸಂಖ್ಯೆಗೆ ಅನುಗುಣವಾಗಿ ಹಣವನ್ನು ಆಯವ್ಯಯದಲ್ಲಿ ಮೊದಲಿಗೆ ಮೀಸಲಿಟ್ಟಿದ್ದು ನಮ್ಮ ಸರ್ಕಾರ. ತಳ ಸಮುದಾಯಗಳಿಗೆ ವಸತಿ ಶಾಲೆಗಳನ್ನು ಮೊದಲು ಆರಂಭಿಸಿದ್ದು ನಾನು. ಪ್ರತೀ ಹೋಬಳಿಗೂ ಒಂದು ವಸತಿ ಶಾಲೆ ಮಾಡಿಯೇ ಮಾಡ್ತೀನಿ ಎಂದು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಪುನರುಚ್ಚರಿಸಿದರು. ಕೇಂದ್ರದಲ್ಲಿರುವ ಬಿಜೆಪಿ ಸರ್ಕಾರವಾಗಲೀ, ಬಿಜೆಪಿ ಅಧಿಕಾರದಲ್ಲಿರುವ ಒಂದೇ ಒಂದು ರಾಜ್ಯದಲ್ಲಾಗಲೀ **SCSP/TSP** ಕಾಯ್ದೆಯನ್ನು ಜಾರಿಗೆ ತಂದಿಲ್ಲ ಏಕೆ ಎಂದು ಸಿಎಂ ಪ್ರಶ್ನಿಸಿದರು.

ಬರೀ ಬಾಯಿ ಮಾತಲ್ಲಿ ಸಮಾನತೆ ಬರಲ್ಲ. ಆರ್ಥಿಕ ಕಾರ್ಯಕ್ರಮಗಳನ್ನು ಜಾರಿಗೆ ತರಬೇಕು ಎಂದು ಬಿಜೆಪಿ ಬಂಡವಾಳವನ್ನು ಬಿಚ್ಚಿಟ್ಟರು. ಆರ್ಥಿಕ ಮತ್ತು ಸಾಮಾಜಿಕ ಅಸಮಾನತೆ ಹೋಗದ ಹೊರತು ಸಮಾನತೆ ಬರುವುದಿಲ್ಲ ಎನ್ನುವ ಎಚ್ಚರಿಕೆಯನ್ನು ಬಾಬಾಸಾಹೇಬ್ ಅಂಬೇಡ್ಕರ್ ನೀಡಿದ್ದಾರೆ. ನಮ್ಮ ಸರ್ಕಾರ ಎಲ್ಲಾ ಧರ್ಮ, ಎಲ್ಲಾ ಜಾತಿಯ ಬಡವರಿಗೆ ಆರ್ಥಿಕ ಶಕ್ತಿ ಕೊಡಲು ಗ್ಯಾರಂಟಿಗಳನ್ನು ಜಾರಿಗೆ ತಂದರೆ ಇದನ್ನು ವಿರೋಧಿಸಿದವರು ಬಿಜೆಪಿಯವರು. ಆದ್ದರಿಂದ ಗ್ಯಾರಂಟಿಗಳ ಫಲಾನುಭವಿಗಳು ಬಿಜೆಪಿಯವರಿಗೆ ಸರಿಯಾಗಿ ಪಾಠ ಹೇಳಿ.

ಬಿಜೆಪಿಯವರ ಸುಳ್ಳುಗಳಿಗೆ ತಲೆ ಕೊಟ್ಟು ಮೋಸಹೋಗದೆ ಬಿಜೆಪಿ ಸುಳ್ಳುಗಳಿಗೆ ಸರಿಯಾದ ಉತ್ತರ ಕೊಡಿ. ಬಡ್ತಿಯಲ್ಲಿ ಮೀಸಲಾತಿಯನ್ನು ಸುಪ್ರೀಂಕೋರ್ಟ್ ಎತ್ತಿ ಹಿಡಿಯಿತು. ಅದನ್ನು ಮೊದಲಿಗೆ ಜಾರಿಗೆ ತಂದಿದ್ದು ನಮ್ಮ ಸರ್ಕಾರ. ಗುತ್ತಿಗೆಯಲ್ಲಿ ಮೀಸಲಾತಿ ಮೊದಲಿಗೆ ತಂದಿದ್ದು ನಮ್ಮ ಸರ್ಕಾರ. ಇದನ್ನು ನಾಡಿನ ಜನತೆ ಅರ್ಥಮಾಡಿಕೊಳ್ಳಬೇಕು ಎಂದರು. ನಾನು ಹೇಳಿದ್ದೀನಿ ಎನ್ನುವ ಕಾರಣಕ್ಕೆ ನೀವು ಇದನ್ನೆಲ್ಲಾ ನಂಬಬೇಡಿ. ಸತ್ಯ, ಸುಳ್ಳನ್ನು ಪರಾಮರ್ಶಿಸಿ, ವಿವೇಚಿಸಿ. ಸತ್ಯವನ್ನು ಧೈರ್ಯವಾಗಿ-ಬಹಿರಂಗವಾಗಿ ಮಾತಾಡುವ ಧೈರ್ಯವನ್ನು ದಲಿತ, ಹಿಂದುಳಿದ, ಅಲ್ಪಸಂಖ್ಯಾತ ಸಮುದಾಯಗಳು ಬೆಳೆಸಿಕೊಳ್ಳಬೇಕು. ಇದೇ ಮಹರ್ಷಿ ವಾಲ್ಮೀಕಿ ಅವರಿಗೆ ನಾವು-ನೀವು ಸಲ್ಲಿಸುವ ಗೌರವ ಎಂದರು. ರಾಜನಹಳ್ಳಿ ವಾಲ್ಮೀಕಿ ಸಮುದಾಯದ ಮಠದ ಜಗದ್ಗುರು ಪ್ರಸನ್ನಾನಂದಪುರಿ ಶ್ರೀಗಳ ಸಾನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರಾದ ಸತೀಶ್ ಜಾರಕಿಹೊಳಿ, ಕೆ.ಎನ್.ರಾಜಣ್ಣ, ಎಚ್.ಕೆ.ಪಾಟೀಲ್, ಮಾಜಿ ಸಂಸದರಾದ ವಿ.ಎಸ್.ಉಗ್ರಪ್ಪ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸವನಗೌಡ ದದ್ದಲ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, **KKRDB** ಅಧ್ಯಕ್ಷರಾದ ಅಜಯ್ ಸಿಂಗ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಹಾಗೂ ವಿಧಾನಸಭೆ ಮತ್ತು ವಿಧಾನ ಪರಿಷತ್ ಸದಸ್ಯರು ಸೇರಿ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

# ಕಣ್ಕಟ್ಟು ಕಳಚಿದ ನ್ಯಾಯದೇವತೆ, ಖಡ್ಗ ಹಿಡಿದ ಕೈಯಲ್ಲೀಗ ಸಂವಿಧಾನ



**ನವದೆಹಲಿ, ಅ. 17:** ನ್ಯಾಯದ ಸಂಕೇತವಾಗಿ ಕೋರ್ಟ್‌ಗಳಲ್ಲಿರುವ ಕಣ್ಣಿಗೆ ಪಟ್ಟಿ ಕಟ್ಟಿದ ಲೇಡಿ ಜಸ್ಟಿಸ್ ಪ್ರತಿಮೆ ಬಗ್ಗೆ ಬಹುತೇಕ ಗೊತ್ತಿದೆ. ಸಾಮಾನ್ಯವಾಗಿ ನ್ಯಾಯಾಲಯಗಳು, ಚಲನಚಿತ್ರಗಳು ಮತ್ತು ಕಾನೂನು ಕೋಣೆಗಳಲ್ಲಿ ಆ ಪ್ರತಿಮೆಯನ್ನು ಕಣ್ಣುಮುಚ್ಚಿರುವುದನ್ನು ನೋಡಲಾಗುತ್ತದೆ. ಹೊಸ ಭಾರತದಲ್ಲಿ ಈಗ ಅದು ರೂಪಾಂತರಕ್ಕೆ ಒಳಗಾಗಿದೆ. ಸಾಂಕೇತಿಕ ಬದಲಾವಣೆಯಲ್ಲಿ, ಕಣ್ಣಿಗೆ ಬಟ್ಟೆಯನ್ನು ತೆಗೆದುಹಾಕಿ, ಲೇಡಿ ಜಸ್ಟೀಸ್ ಕೈಯಲ್ಲಿದ್ದ ಕತ್ತಿಯನ್ನು ಸಂವಿಧಾನದೊಂದಿಗೆ ಬದಲಾಯಿಸಲಾಗಿದೆ. ಈ ಬದಲಾವಣೆಯು ದೇಶದಲ್ಲಿ ಇತ್ತೀಚೆಗೆ ನಡೆದ ಬ್ರಿಟಿಷ್ ಕಾಲದ ಕಾನೂನುಗಳ ಬದಲಾವಣೆಯನ್ನು ಪ್ರತಿಬಿಂಬಿಸುತ್ತದೆ ಎನ್ನಲಾಗುತ್ತಿದೆ. ಏಕೆಂದರೆ, ಭಾರತೀಯ ನ್ಯಾಯಾಂಗವು ಹೊಸ ಗುರುತನ್ನು ಸ್ವೀಕರಿಸುತ್ತಿದೆ.

ಸುಪ್ರೀಂ ಕೋರ್ಟ್‌ನ ಲಾಂಛನವನ್ನು ನವೀಕರಿಸಿರುವುದು ಮಾತ್ರವಲ್ಲದೆ, ಲೇಡಿ ಜಸ್ಟೀಸ್ ಎಂಬ ಐಕಾನಿಕ್‌ನ ಕಣ್ಣು ಪಟ್ಟಿಯನ್ನೂ ತೆಗೆಯಲಾಗಿದೆ. ಕಾನೂನು ಇನ್ನು ಮುಂದೆ ಕುರುಡಲ್ಲ ಎಂಬ ಸ್ಪಷ್ಟ ಸಂದೇಶವನ್ನು ಸುಪ್ರೀಂ ಕೋರ್ಟ್ ರವಾನಿಸಿದೆ. ಭಾರತದ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಡಿವೈ ಚಂದ್ರಚೂಡ್ ಅವರು ಕ್ರಮವನ್ನು ಮುನ್ನಡೆಸಿದ್ದಾರೆ.

# ಗಂಗಾನದಿ ತಳದಲ್ಲಿ ರೈಲುಹಳಿ ಪತ್ತೆ: ಅಚ್ಚರಿಗೊಂಡ ಅಧಿಕಾರಿಗಳು



**ಹರಿದ್ವಾರ, ಅ.17:** ಭಾರತದ ಒಂದೊಂದು ಭಾಗದಲ್ಲಿರುವ ಒಂದೊಂದು ರಹಸ್ಯಗಳು ನಿಮ್ಮನ್ನು ಅಚ್ಚರಿಗೆ ತಳ್ಳುತ್ತವೆ. ಭೂಮಿಯ ಒಳಗೆ ಎಷ್ಟೊಂದು ರಹಸ್ಯಗಳು ಅಡಗಿವೆ ಎಂಬುದನ್ನು ನಾವು ಊಹಿಸಲು ಸಹ ಸಾಧ್ಯವಿಲ್ಲ. ಅದರಲ್ಲೂ ಸಾಗರದ ಒಳಗೆ ಎಷ್ಟೊಂದು ಕುತೂಹಲವಿದೆ ಎಂಬುದನ್ನು ಇಂದಿಗೂ ಅಳೆಯಲು ಸಾಧ್ಯವಾಗಿಲ್ಲ.

ಹಾಗೆ ಸಾಗರದಲ್ಲಿ ಮುಳುಗಿರುವ ದ್ವಾರಕ ನಗರಿ ಕೂಡ ಹಲವು ಕುತೂಹಲಗಳ ತನ್ನಲ್ಲಿಟ್ಟುಕೊಂಡಿದೆ.

ಗಂಗೆ ಹಲವು ಪ್ರಮುಖ ತಾಣಗಳ ಹಾದು ಹೋಗುತ್ತದೆ. ಗಂಗಾನದಿಯ ತೀರದಲ್ಲಿ ಪ್ರಮುಖ ಹಿಂದೂ ನಗರಗಳು, ಪುರಾತನ ನಗರಗಳು ಬರುತ್ತವೆ. ಇತ್ತೀಚಿಗೆ ಗಂಗಾನದಿಯನ್ನು ಸ್ವಚ್ಛ ಮಾಡುವ ನಿಟ್ಟಿನಲ್ಲಿ ಸರ್ಕಾರ ಕೋಟಿ ಕೋಟಿ ರೂಪಾಯಿ ವ್ಯಯಿಸುತ್ತಿದೆ. ಗಂಗಾಸ್ನಾನದ ಪಾವಿತ್ರ್ಯ ಕಾಪಾಡಲು ಪಣ ತೊಡಲಾಗಿದೆ.

ಇದೆಲ್ಲದರ ನಡುವೆ ಗಂಗಾ ನದಿಯಿಂದ ಮೇಲೆದ್ದಿರುವ ಅಚ್ಚರಿಯ ರೈಲ್ವೆ ಹಳಿಯೊಂದು ಭಾರೀ ಕುತೂಹಲಕ್ಕೆ ಕಾರಣವಾಗಿದೆ. ಹೌದು ನದಿಯ ಆಳದಿಂದ ರೈಲ್ವೆ ಹಳಿ ಗೋಚರವಾಗಿರುವುದು ಪುರಾತತ್ವ ಇಲಾಖೆ ಅಧಿಕಾರಿಗಳ ಕಣ್ಣರಳಿಸಿದೆ. ಹಾಗೆ ಈ ಕೌತುಕ ಕಣ್ತುಂಬಿಕೊಳ್ಳಲು ಜನರ ದಂಡೇ ಅಲ್ಲಿ ಸೇರುತ್ತಿದೆ. ಗಂಗಾನದಿಯ ನೀರು ಕಡಿಮೆಯಾಗಿರುವುದರಿಂದ ಈ ರೈಲ್ವೆ ಹಳಿ ಮೇಲೆ ಬಂದಿದೆ.

# ರಾಣಿ ಚೆನ್ನಮ್ಮ ವಿಜಯೋತ್ಸವಕ್ಕೆ 200 ವರ್ಷ ಬೆಳಗಾವಿ ವಿಮಾನ ನಿಲ್ದಾಣಕ್ಕೆ ಹೆಸರಿಡಲು, ಅಂಚೆಚೀಟಿ ಬಿಡುಗಡೆಗೆ ಮನವಿ

**ನವದೆಹಲಿ, ಅ.17:** ಬ್ರಿಟಿಷರ ವಿರುದ್ಧ ಹೋರಾಡಿ ಜಯ ಸಾಧಿಸಿದ ಕಿತ್ತೂರು ರಾಣಿ ಚೆನ್ನಮ್ಮ ಅವರ ವಿಜಯೋತ್ಸವಕ್ಕೆ 200 ವರ್ಷ ಪೂರ್ಣವಾಗುತ್ತಿರುವ ಹಿನ್ನಲೆ ಬೆಳಗಾವಿ ವಿಮಾನ ನಿಲ್ದಾಣಕ್ಕೆ ಅವರು ಹೆಸರಿಟ್ಟು, ಆವರಣದಲ್ಲಿ ಅವರ ಪ್ರತಿಮೆ ಸ್ಥಾಪಿಸಬೇಕು ಮತ್ತು ಅವರ ಹೆಸರಿನಲ್ಲಿ ಅಂಚೆ ಚೀಟಿ ಬಿಡುಗಡೆ ಮಾಡಬೇಕು ಎಂದು ಕಿತ್ತೂರು ಕರ್ನಾಟಕದ ನಾಯಕರು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಈ ಬಗ್ಗೆ ದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ರಾಜ್ಯಸಭಾ ಸಂಸದ ಈರಣ್ಣ ಕಡಾಡಿ, ಕಿತ್ತೂರು ರಾಣಿ ಚೆನ್ನಮ್ಮ ಅವರ ವಿಜಯೋತ್ಸವಕ್ಕೆ 200 ವರ್ಷ ಪೂರ್ಣವಾಗಲಿದೆ, ಸ್ವಾತಂತ್ರ್ಯ ಸಂಗ್ರಾಮದಲ್ಲಿ ಮಹಿಳೆಯಾಗಿ ಬ್ರಿಟಿಷರ ವಿರುದ್ಧ ಯುದ್ಧ ಸಾರಿ ಗೆಲುವು ಸಾಧಿಸಿದರು. ಅವರ ತ್ಯಾಗ ಬಲಿದಾನವನ್ನು ನಾವು ಮರೆಯಬಾರದು ಇದಕ್ಕಾಗಿ ಅಕ್ಟೋಬರ್ 23 ವಿಜಯೋತ್ಸವದ ದಿನವಾಗಿ ಆಚರಿಸಿಕೊಂಡು ಬರುತ್ತಿದ್ದೇವೆ.



ಈ ಬಾರಿ ಅ.23ಕ್ಕೆ 200 ವರ್ಷ ಪೂರ್ಣವಾಗುತ್ತಿರುವ ಹಿನ್ನಲೆ ವಿಶೇಷವಾಗಿ ಆಚರಿಸಲು ಚಿಂತಿಸಿದ್ದು ಈ ಹಿನ್ನಲೆಯಲ್ಲಿ ಬೆಳಗಾವಿ ವಿಮಾನ ನಿಲ್ದಾಣಕ್ಕೆ ರಾಣಿ ಚೆನ್ನಮ್ಮನ ಹೆಸರು ಇಡಬೇಕು ಮತ್ತು ವಿಮಾನ ನಿಲ್ದಾಣ ಆವರಣದಲ್ಲಿ ಅವರ ಮೂರ್ತಿ ಸ್ಥಾಪಿಸಬೇಕು.

ರಾಣಿ ಚೆನ್ನಮ್ಮ ಅವರ ಅಂಚೆಚೀಟಿ ಬಿಡುಗಡೆ ಮಾಡಬೇಕು ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ನೇತೃತ್ವದಲ್ಲಿ ಕಿತ್ತೂರು ಕರ್ನಾಟಕದ ಜನಪ್ರತಿನಿಧಿಗಳು ಮುಖಂಡರು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದೇವೆ ಎಂದರು.

ಇದರ ಜೊತೆಗೆ ರಾಣಿ ಚೆನ್ನಮ್ಮ ಅವರ ಬಲಗೈ ಬಂಟ ಸಂಗೊಳ್ಳಿ ರಾಯಣ್ಣನ ಹೆಸರನ್ನು ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ, ಜಗಜ್ಯೋತಿ ಬಸವಣ್ಣ ಅವರ ಹೆಸರನ್ನು ವಿಜಯಪುರಕ್ಕೆ, ರಾಷ್ಟ್ರಕವಿ ಕುವೆಂಪು ಅವರ ಹೆಸರನ್ನು ಶಿವಮೊಗ್ಗ ವಿಮಾನ ನಿಲ್ದಾಣಕ್ಕೆ ಇಡಲು ಮನವಿ ಮಾಡಿದ್ದೇವೆ ಎಂದು ಹೇಳಿದರು.

ಬೆಳಗಾವಿ ಆರ್ಥಿಕ ನಗರವಾಗಿ ಬೆಳೆಯುತ್ತಿದೆ, ಸಾಕಷ್ಟು ಕೈಗಾರಿಕೆ, ಶಿಕ್ಷಣ ಸಂಸ್ಥೆಗಳು, ಕೇಂದ್ರ ಸರ್ಕಾರದ ವಿವಿಧ ತರಬೇತಿ ಕೇಂದ್ರಗಳಿದ್ದು ಬೆಳಗಾವಿ ವಿಮಾನ ನಿಲ್ದಾಣದಿಂದ ಇನ್ನಷ್ಟು ಸಂಪರ್ಕ ಹೆಚ್ಚಿಸಬೇಕಿದೆ. ಹೀಗಾಗಿ ಇನ್ನೂ ಅನೇಕ ನಗರಗಳಿಗೆ ವಿಮಾನ ಸಂಪರ್ಕ ಬೇಕು ಎಂದು ನಾಗರಿಕ ವಿಮಾನಯಾನ ಸಚಿವಾಲಯಕ್ಕೆ ಮನವಿ ಮಾಡಿದೆ, ಕೇಂದ್ರ ಸರ್ಕಾರ ಶೀಘ್ರದಲ್ಲಿ ನಮ್ಮ ಮನವಿಗೆ ಸ್ಪಂದಿಸುವ ಭರವಸೆ ನೀಡಿದೆ ಎಂದು ಈರಣ್ಣ ಕಡಾಡಿ ತಿಳಿಸಿದರು.

# ನವದೆಹಲಿಯ ಕರ್ನಾಟಕ ಭವನದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ



**ನವದೆಹಲಿ, ಅ.17:** ಚಾಣಕ್ಯಪುರಿಯ 10, ಕೌಟಿಲ್ಯ ಮಾರ್ಗದಲ್ಲಿರುವ ಕರ್ನಾಟಕ ಭವನ-1ರ ಕಾವೇರಿಯ. ಪೂರಕ ಕಟ್ಟಡದಲ್ಲಿ ಗುರುವಾರ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಯಿತು. ನವದೆಹಲಿಯ ಕರ್ನಾಟಕ ಭವನದಲ್ಲಿ ಗುರುವಾರ ಸಂಸದ ಜಗದೀಶ್ ಶೆಟ್ಟರ್ ಹಾಗೂ ನಿವಾಸಿ ಆಯುಕ್ತೆ ಗುರ್ನೀತ್ ತೇಜ್ ಅವರು ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಭವನದ ಸಹಾಯಕ ನಿವಾಸಿ ಆಯುಕ್ತ ಮೋಹನ್ ಕುಮಾರ್, ಅಧಿಕಾರಿಗಳು, ಸಿಬ್ಬಂದಿವರ್ಗ ಇದ್ದರು.

# ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಜೆಡಿಎಸ್‌ಗೆ ಬೆಂಬಲಿಸಿ: ಬಿ.ಎಸ್.ಯಡಿಯೂರಪ್ಪ ಸಂದೇಶ

**ಬೆಂಗಳೂರು, ಅ, 17;** ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ಪರ ನಿಲ್ಲುವುದು ಬೇಡ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರವನ್ನು ಜೆಡಿಎಸ್‌ಗೆ ಬಿಡೋಣ ಎಂದು ಸಂಸದ ಬಸವರಾಜ ಬೊಮ್ಮಾಯಿಗೆ ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಇಂದಿಲ್ಲಿ ಕಿವಿಮಾತು ಹೇಳಿದ್ದಾರೆ. ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ನಡೆಯುತ್ತಿರುವ ಉಪಚುನಾವಣೆಯನ್ನು ನಾವು ಮತ್ತು ಜೆಡಿಎಸ್ ಪ್ರತಿಷ್ಠೆಯಾಗಿ ತೆಗೆದುಕೊಂಡು ಹೋರಾಟ ಮಾಡೋಣ, ಒಗ್ಗಟ್ಟಿನಿಂದ ಕೆಲಸ ಮಾಡಿ ಎಲ್ಲಾ ಕ್ಷೇತ್ರಗಳನ್ನೂ ನಮ್ಮದಾಗಿಸಿಕೊಳ್ಳೋಣ ಎಂದಿದ್ದಾರೆ.

ವಿಧಾನಸಭೆಯಲ್ಲಿನ ಪ್ರತಿಪಕ್ಷ ನಾಯಕ ಆರ್.ಅಶೋಕ್, ಸಂಸದ ಬಸವರಾಜ ಬೊಮ್ಮಾಯಿ ಸೇರಿದಂತೆ ರಾಜ್ಯ ನಾಯಕರು, ಚನ್ನಪಟ್ಟಣದಿಂದ ಯೋಗೇಶ್ವರ್ ಅವರಿಗೆ ಟಿಕೆಟ್ ನೀಡಬೇಕು, ಜೆಡಿಎಸ್‌ಗೆ ಬಿಟ್ಟು ಕೊಡುವುದು ಬೇಡ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡ ಅವರಿಗೆ ಮನವಿ ಮಾಡಿದ್ದರು. ಈ ಬೆಳವಣಿಗೆ ನಂತರ ಅಶೋಕ್ ಮತ್ತು ಬೊಮ್ಮಾಯಿ ಅವರು, ಕೇಂದ್ರ ಸಚಿವ



ಎಚ್.ಡಿ.ಕುಮಾರಸ್ವಾಮಿ ಅವರೊಂದಿಗೆ ಸಮಾಲೋಚನೆ ನಡೆಸಿ ಯೋಗೇಶ್ವರ್ ಪರ ನಿಂತಿದ್ದರು. ಚುನಾವಣಾ ವೇಳಾಪಟ್ಟಿ ಪ್ರಕಟವಾಗುತ್ತಿದ್ದಂತೆ ಯಡಿಯೂರಪ್ಪ ಅವರು, ಅಶೋಕ್ ಮತ್ತು ಬೊಮ್ಮಾಯಿ ಅವರನ್ನು ಪ್ರತ್ಯೇಕವಾಗಿ ಕರೆಸಿಕೊಂಡು, ಬಿಜೆಪಿ ಮತ್ತು ಜೆಡಿಎಸ್ ಮತ್ತಷ್ಟು ಬಲವಾಗಿ ಒಂದುಗೂಡಬೇಕು, ಅವರ ಕ್ಷೇತ್ರದಲ್ಲಿ ನಮ್ಮ ಹಸ್ತಕ್ಷೇಪ ಬೇಡ ಎಂದ ನಂತರ ಉಭಯ ನಾಯಕರು ತಮ್ಮ ನಿಲುವು ಬದಲಾಯಿಸಿದ್ದಾರೆ.

ಇಂದು ಯಡಿಯೂರಪ್ಪ ಅವರನ್ನು ಭೇಟಿ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಬೊಮ್ಮಾಯಿ, ಅವರು ನಮ್ಮ ಹಿರಿಯ ನಾಯಕರು, ಸಹಜವಾಗಿ ಭೇಟಿ ಮಾಡುತ್ತೇವೆ, ಚುನಾವಣೆ ಬಗ್ಗೆ ಬಂದು ಮಾತನಾಡು ಎಂದಿದ್ದರು, ಮಾತಾಡಿದ್ದೇನೆ, ಶಿಗ್ಗಾವಿ ಕ್ಷೇತ್ರದ ಬಗ್ಗೆಯೂ ಚರ್ಚೆ ನಡೆಯಿತು ಎಂದರು. ಚುನಾವಣೆ ತಯಾರಿ ಸಿದ್ಧತೆ ಬಗ್ಗೆ ಹೇಳಿದ್ದೇನೆ, ಅಭ್ಯರ್ಥಿ ಆಯ್ಕೆ ಬಗ್ಗೆಯೂ ಚರ್ಚೆ ಆಗಿದೆ, ಅಂತಿಮವಾಗಿ ಯಾರಿಗೇ ಟಿಕೆಟ್ ಕೊಟ್ಟರೂ ಗೆಲ್ಲಿಸಬೇಕು ಎಂಬ ತೀರ್ಮಾನ ಆಗಿದೆ. ದೆಹಲಿಗೆ ಅ.19ರ ನಂತರ ತೆರಳಲಿದ್ದು, ಎಲ್ಲ ಮೂರು ಕ್ಷೇತ್ರಗಳಲ್ಲೂ ಗೆಲ್ಲುವುದಕ್ಕೆ ಪ್ರಯತ್ನ ಮಾಡೋಣ ಎಂದಿದ್ದಾರೆ. ಚನ್ನಪಟ್ಟಣ ಟಿಕೆಟ್ ಕುರಿತು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹಾಗೂ ಬಿಜೆಪಿ ಹೈಕಮಾಂಡ್ ತೀರ್ಮಾನ ಮಾಡುತ್ತಾರೆ ಎಂದರು.

## ನಿತ್ಯ ಪಂಚಾಂಗ 18.10.2024 ಶುಕ್ರವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ದಕ್ಷಣಾಯನ-ಶರದ್ ಋತು,
ಚಾಂದ್ರಮಾನ, ಆಶ್ವಯುಜ ಬಹುಳ

ಪಾಡ್ಯ, ಅಶ್ವಿನಿ ನಕ್ಷತ್ರ,
ಸಿಂಧಗಿ ಬೀಮಾಶಂಕರ್ ಆರಾಧನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ರೈತರಿಗೆ ಶುಭಸುದ್ದಿ: ಪ್ರತಿ ಲೀ. ಹಾಲಿನ ಖರೀದಿ ದರ 5 ರೂ. ಹೆಚ್ಚಳ



**ಮೈಸೂರು, ಅ.17:** ರೈತರಿಂದ ಖರೀದಿಸುವ ಹಾಲಿನ ದರವನ್ನು ಲೀಟರ್‌ಗೆ 5 ರೂಪಾಯಿ ಹೆಚ್ಚಳ ಮಾಡಲಾಗುವುದು ಎಂದು ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ. ಟಿ.ನರಸೀಪುರ ಎಪಿಎಂಸಿ ಆವರಣದಲ್ಲಿ ಮೈಮುಲ್‌ನಿಂದ 1.15 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ಒಕ್ಕೂಟದ ಉಪ ಕಚೇರಿ ಉದ್ಘಾಟಿಸಿ ಅವರು ಮಾತನಾಡಿದರು. ಹಾಲು ಒಕ್ಕೂಟಗಳು ರೈತರಿಂದ ಖರೀದಿಸುವ ಹಾಲಿನ ದರವನ್ನು ಲೀಟರ್‌ಗೆ 5 ರೂ. ಹೆಚ್ಚಳ ಮಾಡಲಾಗುವುದು. ಜನವರಿಯಿಂದ ಇದನ್ನು ಜಾರಿಗೊಳಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ಲೀಟರ್ ಹಾಲಿಗೆ ಪ್ರಸ್ತುತ 33 ರೂಪಾಯಿ ಕೊಡಲಾಗುತ್ತಿದೆ. ಈ ಹಿಂದೆ 35 ರೂಪಾಯಿ ಇತ್ತು. ಖರೀದಿ ದರ 5 ರೂಪಾಯಿ ಹೆಚ್ಚಳ ಮಾಡಲು ಸಿಎಂ ತಾತ್ವಿಕ ಒಪ್ಪಿಗೆ ನೀಡಿದ್ದಾರೆ. ಅವರ ಸೂಚನೆಯಂತೆ ಹೊಸ ವರ್ಷದ ಕೊಡುಗೆಯಾಗಿ ಪ್ರತಿ ಲೀಟರ್ ಹಾಲಿಗೆ ಐದು ರೂಪಾಯಿ ಹೆಚ್ಚುವರಿಯಾಗಿ ನೀಡಲಾಗುವುದು. ಐದು ರೂಪಾಯಿ ಪೂರ್ಣವಾಗಿ ರೈತರಿಗೆ ಸಿಗುವಂತೆ ನೋಡಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.




# ಒಂದು ವರ್ಗಕ್ಕೆ ಸೀಮಿತವಲ್ಲದ ವಾಲ್ಮೀಕಿ ಎಲ್ಲಾ ಸಮುದಾಯಗಳಿಗೆ ಆದರ್ಶ: ಬೈರತಿ ಸುರೇಶ್

**ಕೋಲಾರ, ಅ.17:** ಮಹರ್ಷಿ ವಾಲ್ಮೀಕಿ ಯಾವುದೇ ಒಂದು ವರ್ಗಕ್ಕೆ ಸೀಮಿತವಾಗಿಲ್ಲ, ಎಲ್ಲಾ ಸಮುದಾಯಗಳು ಪೂಜಿಸಲ್ಪಡುವ ಮಹಾನ್ ಚೇತನವಾಗಿದ್ದು ಅವರು ಬರೆದ ರಾಮಾಯಣ ಇಡೀ ದೇಶಕ್ಕೆ ನೀಡಿದ ಅತ್ಯಮೂಲ್ಯ ಕೊಡುಗೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ತಿಳಿಸಿದರು.

ನಗರದ ಹೊರವಲಯದ ಮಹರ್ಷಿ ವಾಲ್ಮೀಕಿ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿರವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಾಲ್ಮೀಕಿ ಬರೆದ ರಾಮಾಯಣ ಮತ್ತು ಅಂಬೇಡ್ಕರ್ ಅವರ ಸಂವಿಧಾನವು ಅಣ್ಣತಮ್ಮಂದಿರ ರೀತಿಯಲ್ಲಿ ಒಗ್ಗಟ್ಟಿನಿಂದ ಬದುಕುವಂತೆ ಮಾಡಿದೆ. ದೇಶವು ವೈವಿಧ್ಯತೆಯಲ್ಲಿ ಏಕತೆಯನ್ನು ಕಾಣುವಂತಾಗಿದ್ದು, ಇಂತಹ ಮಹನೀಯರ ಹಾದಿಯಲ್ಲಿ ದೇಶವು ಅಭಿವೃದ್ಧಿಯ ಕಡೆಗೆ ಹೋಗಬೇಕಾಗಿದೆ ಎಂದರು. ದೇಶವನ್ನು ಹೊಡೆದು ಆಳುವ ಸರಕಾರದ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಜಾತಿ- ಜಾತಿಗಳ ಮಧ್ಯೆ ಜಗಳ ತಂದು ರಾಜಕಾರಣ ಮಾಡಲಿದ್ದಾರೆ. ಅವರನ್ನು ದೂರವಿಡಿ ಬಡವರ ಪರವಾದ ಸಿದ್ದರಾಮಯ್ಯ ಸರಕಾರವು ಎಸ್ಸಿ ಎಸ್ಟಿ ಸಮುದಾಯದ ಅಭಿವೃದ್ಧಿಗೆ 36 ಸಾವಿರ ಕೋಟಿ ಅನುದಾನವನ್ನು ಮೀಸಲಿಟ್ಟಿದೆ. ವಿರೋಧ ಪಕ್ಷಗಳು ಆಡಳಿತ ಪಕ್ಷದ ವೈಖರಿಯನ್ನು ಸಹಿಸಿಕೊಳ್ಳದೇ ವಿನಾಕಾರಣ ಆರೋಪಗಳನ್ನು ಮಾಡಲು ಹೊರಟಿದ್ದಾರೆ ಇದಕ್ಕೆ ಕಿವಿ ಕೊಡಬಾರದು. ದುರ್ಬಲ ಸಮುದಾಯಗಳ ಅಭಿವೃದ್ಧಿಗೆ ಕಾಂಗ್ರೆಸ್ ಸರಕಾರ ಬದ್ಧವಾಗಿದೆ ಎಂದರು.

# ಹುಬ್ಬಳ್ಳಿಯಿಂದ ಅಹ್ಮದಾಬಾದ್ ಚೆನ್ನೈಗೆ ವಿಮಾನ ಸಂಚಾರ

## ಸಚಿವ ರಾಮಮೋಹನ ನಾಯ್ಡು ಜತೆ ಪ್ರಲ್ಹಾದ ಜೋಶಿ ಚರ್ಚೆ



**ನವದೆಹಲಿ, ಅ.17:** ವಾಣಿಜ್ಯ ನಗರಿ ಹುಬ್ಬಳ್ಳಿಯಿಂದ ಅಹ್ಮದಾಬಾದ್ ಮತ್ತು ಚೆನ್ನೈಗೆ ವಿಮಾನಯಾನ ಸೌಲಭ್ಯ ಕಲ್ಪಿಸುವಂತೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ನಾಗರಿಕ ವಿಮಾನಯಾನ ಸಚಿವರ ಗಮನ ಸೆಳೆದಿದ್ದಾರೆ.

ನವದೆಹಲಿಯ ನಾಗರಿಕ ವಿಮಾನಯಾನ ಸಚಿವಾಲಯದಲ್ಲಿ ಗುರುವಾರ ಸಚಿವ ರಾಮಮೋಹನ ನಾಯ್ಡು ಅವರನ್ನು ಭೇಟಿಮಾಡಿ ಈ ಬಗ್ಗೆ ಚರ್ಚಿಸಿದರು. ಹುಬ್ಬಳ್ಳಿಯಿಂದ ಅಹಮದಾಬಾದ್ ನಡುವೆ ವಿಮಾನ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳುವಂತೆ ಸಚಿವ ಜೋಶಿ ಮನವಿ ಮಾಡಿದರು.


**ಚೆನ್ನೈ ವಿಮಾನ ಸ್ಥಗಿತ ಬೇಡ:** ಇನ್ನು, ಹುಬ್ಬಳ್ಳಿಯಿಂದ ಚೆನ್ನೈಗೆ ಇರುವ ವಿಮಾನ ಸಂಪರ್ಕವನ್ನು ಸ್ಥಗಿತಗೊಳಿಸಲಾಗುತಿದ್ದು, ಈ ವಿಮಾನ ಸಂಚಾರವನ್ನು ಮುಂದುವರೆಸುವಂತೆ ಸಚಿವ ನಾಯ್ಡು ಅವರಲ್ಲಿ ಮನವಿ ಮಾಡಿದರು.


ಛೋಟಾ ಮುಂಬೈ ಎಂದೇ ಹೆಸರಾದ ಪ್ರಮುಖ ವಾಣಿಜ್ಯ ನಗರಿ ಹುಬ್ಬಳ್ಳಿಗೆ ಅನೇಕ ಉದ್ಯಮಿಗಳ ಸಂಪರ್ಕವಿದೆ. ಅಹ್ಮದಾಬಾದ್ ಮತ್ತು ಚೆನ್ನೈ ನಗರಗಳಿಗೆ ವಿಮಾನ ಸಾರಿಗೆ ಸೌಲಭ್ಯಕ್ಕೆ ಹೆಚ್ಚು ಆದ್ಯತೆ ನೀಡಿದಲ್ಲಿ ಉದ್ಯಮಿಗಳ ತ್ವರಿತ ಸಂಚಾರ ಮತ್ತು ನಿಕಟ ಸಂಪರ್ಕಕ್ಕೆ ಅನುಕೂಲವಾಗುತ್ತದೆ ಎಂದು ಹೇಳಿದರು. ಹುಬ್ಬಳ್ಳಿ ಒಂದು ಪ್ರಮುಖ ವಾಣಿಜ್ಯ ಕೇಂದ್ರ. ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಹ ಗುರುತಿಸಿಕೊಳ್ಳುತ್ತಿದೆ. ಅಂತೆಯೇ ರೈಲ್ವೆ ನಿಲ್ದಾಣದ ಜತೆ ವಿಮಾನ ನಿಲ್ದಾಣವೂ ಅಂತಾರಾಷ್ಟ್ರೀಯ ಮೆರುಗಿನಲ್ಲಿ ಅಭಿವೃದ್ಧಿ ಹೊಂದುತ್ತಿದೆ ಎಂದು ಸಚಿವ ನಾಯ್ಡು ಅವರ ಗಮನ ಸೆಳೆದರು ಜೋಶಿ.

ಹುಬ್ಬಳ್ಳಿ ವಿಮಾನ ನಿಲ್ದಾಣದ ವಿಶಾಲವಾದ ಪ್ರದೇಶದಲ್ಲಿ ಹೊಸ ಟರ್ಮಿನಲ್ ಸಹ ನಿರ್ಮಾಣ ಕಾಣುತ್ತಿದೆ. ಪ್ರಯಾಣಿಕರಿಗೆ ಮತ್ತು ವಿಮಾನಗಳಿಗೆ ಅಗತ್ಯ ಮೂಲ ಸೌಲಭ್ಯ ಇಲ್ಲಿದ್ದು, ಚೆನ್ನೈ ಸಂಪರ್ಕದ ವಿಮಾನಯಾನ ಸ್ಥಗಿತಗೊಳಿಸಿದೆ ಮುಂದುವರೆಸಿ ಎಂದು ನಾಗರಿಕ ವಿಮಾನಯಾನ ಸಚಿವರೊಂದಿಗೆ ಪ್ರಲ್ಹಾದ ಜೋಶಿ ಸಮಾಲೋಚನೆ ನಡೆಸಿದರು.

## ಶೃಂಗೇರಿ ಭಾರತೀತೀರ್ಥ ಸ್ವಾಮೀಜಿ ಸನ್ಯಾಸ ದೀಕ್ಷೆ ಸ್ವೀಕರಿಸಿ 50 ವರ್ಷ

# ಅ.26: ಕಲ್ಯಾಣವೃಷ್ಟಿಸ್ತವ ಮಹಾಭಿಯಾನ ಉಪರಾಷ್ಟ್ರಪತಿ ಜಗದೀಪ್ ಧನಕರ್ ಭಾಗಿ







**ಬೆಂಗಳೂರು, ಅ, 17;** ವೇದಾಂತಭಾರತಿಯ ಮಹಾಸಂರಕ್ಷಕರು, ಶೃಂಗೇರಿ ಜಗದ್ಗುರು ಶಂಕರಾಚಾರ್ಯ ಭಾರತೀತೀರ್ಥ ಮಹಾಸ್ವಾಮೀಜಿ ಅವರು ಸಂನ್ಯಾಸ ದೀಕ್ಷೆ ಸ್ವೀಕರಿಸಿ 50ನೇ ವರ್ಷದ ಸ್ಮರಣಾರ್ಥ ಈ ತಿಂಗಳ 26 ರಂದು ನಗರದ ಅರಮನೆ ಮೈದಾನದಲ್ಲಿ ಕಲ್ಯಾಣವೃಷ್ಟಿಸ್ತವ ಮಹಾಭಿಯಾನ ನಡೆಯಲಿದ್ದು, ಉಪರಾಷ್ಟ್ರಪತಿ ಜಗದೀಪ್ ಧನಕರ್ ಭಾಗವಹಿಸಲಿದ್ದಾರೆ.

ಉಪರಾಷ್ಟ್ರಪತಿಯವರು ವೇದಾಂತಭಾರತಿಯು ಗ್ರಂಥಮಾಲೆಯ ಪುಸ್ತಕವನ್ನು ಇದೇ ಸಂದರ್ಭದಲ್ಲಿ ಲೋಕಾರ್ಪಣೆ ಮಾಡಲಿದ್ದು, ಉಪಮುಖ್ಯಮಂತ್ರಿ ಮತ್ತು ಕಾರ್ಯಕ್ರಮದ ಸ್ವಾಗತ ಸಮಿತಿಯ ಅಧ್ಯಕ್ಷರೂ ಆದ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವರಾದ ಪ್ರಹ್ಲಾದ ಜೋಶಿ ಹಾಗೂ ವಿ. ಸೋಮಣ್ಣ ಮತ್ತಿತರ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಈ ಕುರಿತು ವೇದಾಂತ ಭಾರತಿ ಸಂಸ್ಥೆಯು ಹೇಳಿಕೆಯೊಂದನ್ನು ಬಿಡುಗಡೆ ಮಾಡಿದ್ದು, ಸುವರ್ಣಭಾರತೀ ಶೀರ್ಷಿಕೆಯಡಿ ಮಿಥಿಕ್ ಸೊಸೈಟಿ ಆಶ್ರಯದಲ್ಲಿ ವೇದಾಂತಭಾರತೀ, ಶಾಂಕರ ತತ್ತ್ವಪ್ರಸಾರಕ್ಕಾಗಿ ರಾಜ್ಯಾದ್ಯಂತ ಕಲ್ಯಾಣವೃಷ್ಟಿ ಅಭಿಯಾನವನ್ನು ಹಮ್ಮಿಕೊಂಡಿದೆ. ಶ್ರೀ ಶಂಕರ ಭಗವತ್ಪಾದರು ರಚಿಸಿದ ಕಲ್ಯಾಣವೃಷ್ಟಿಸ್ತವ, ಶಿವಪಂಚಾಕ್ಷರ, ನಕ್ಷತ್ರಮಾಲಾಸ್ತೋತ್ರ ಹಾಗೂ ಲಕ್ಷ್ಮೀನೃಸಿಂಹ ಕರುಣಾರಸ ಸ್ತೋತ್ರ ಎಂಬ ಮೂರು ಸ್ತೋತ್ರಗಳನ್ನು ಹೇಳಿಕೊಡಲಾಗುತ್ತಿದೆ. ವೇದಾಂತಭಾರತಿಯ ಸಂರಕ್ಷಕರಾದ ಶಂಕರಭಾರತೀ ಸ್ವಾಮೀಜಿಯವರ ಮಾರ್ಗದರ್ಶನದಲ್ಲಿ ಈಗಾಗಲೇ ಬೆಂಗಳೂರಿನ ಸಹಸ್ರಾರು ಪಾರಾಯಣಕೇಂದ್ರಗಳು ಹಾಗೂ ವಿದ್ಯಾಸಂಸ್ಥೆಗಳಲ್ಲಿ ಎರಡು ಲಕ್ಷಕ್ಕೂ ಹೆಚ್ಚಿನ ಜನರಿಗೆ ಈ ಸ್ತೋತ್ರಗಳನ್ನು ಅಭ್ಯಾಸ ಮಾಡಿಸಲಾಗಿದೆ ಎಂದು ತಿಳಿಸಿದೆ.

ಬೆಂಗಳೂರಿನಲ್ಲಿ ಈ ಕಲ್ಯಾಣವೃಷ್ಟಿಸ್ತವ ಮಹಾಭಿಯಾ ಶನಿವಾರ ಬೆಳಿಗ್ಗೆ 10.30ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಬೆಂಗಳೂರಿನ ಅರಮನೆ ಮೈದಾನದ ಕೃಷ್ಣವಿಹಾರದಲ್ಲಿ ಶೃಂಗೇರಿ ಜಗದ್ಗುರು ಶಂಕರಾಚಾರ್ಯ ವಿಧುಶೇಖರಭಾರತೀ ಸ್ವಾಮೀಜಿ ಸಮ್ಮುಖದಲ್ಲಿ ನಡೆಯಲಿದೆ. ಯಡತೊರೆ ಮಠದ ಶಂಕರಭಾರತೀ ಮಹಾಸ್ವಾಮೀಜಿ, ಬ್ರಹ್ಮಾನಂದಭಾರತೀ ಸ್ವಾಮೀಜಿ ಉಪಸ್ಥಿತಿಯಲ್ಲಿ ವಿದ್ಯಾರ್ಥಿಗಳು, ಪೌರ ಕಾರ್ಮಿಕರು, ದಿವ್ಯಾಂಗರು, ಹಿರಿಯ ನಾಗರಿಕರು ಹಾಗೂ ರಾಜ್ಯದ ಬೇರೆ ಬೇರೆ ಊರುಗಳಿಂದ ಆಗಮಿಸುವ ಪಾರಾಯಣಕರ್ತರು ಸೇರಿದಂತೆ ಎಲ್ಲಾ ಜನ ವರ್ಗ ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದೆ ಎಂದು ತಿಳಿಸಿದೆ.

# 2028ಕ್ಕೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವುದು ಖಚಿತ: ಡಿಸಿಎಂ ಡಿ.ಕೆ.ಶಿವಕುಮಾರ್




**ಬೆಂಗಳೂರು, ಅ.17:** ಕಾಂಗ್ರೆಸ್ ಸರ್ಕಾರ ಮಹಿಳೆಯರಿಗೆ ಶಕ್ತಿ ತುಂಬಲು ಅನೇಕ ಕಾರ್ಯಕ್ರಮ ರೂಪಿಸಿದೆ. ಪಕ್ಷದ ಆಚಾರ ವಿಚಾರ ಹಾಗೂ ಯೋಜನೆಗಳನ್ನು ರಾಜ್ಯದ ಮೂಲೆ ಮೂಲೆಯಲ್ಲಿ ಪ್ರಚಾರ ಮಾಡಿ, ಆಗ 2028ರಲ್ಲೂ ನಮ್ಮ ಪಕ್ಷ ಅಧಿಕಾರಕ್ಕೆ ಬಂದೇ ಬರುತ್ತದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಕಾಂಗ್ರೆಸ್ ಕಚೇರಿಯ ಭಾರತ ಜೋಡೋ ಭವನದಲ್ಲಿ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆಯಾಗಿ ಸೌಮ್ಯ ರೆಡ್ಡಿ ಅವರ ಪದಗ್ರಹಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಹಿಳೆಯರ ಸಬಲೀಕರಣಕ್ಕೆ ಕಾಂಗ್ರೆಸ್ ಪಕ್ಷ ಹೇಗೆ ಕಾರ್ಯಕ್ರಮ ರೂಪಿಸುತ್ತಿದೆ ಎಂದು ತಿಳಿಸಿದರು. ಕಾಂಗ್ರೆಸ್ ಪಕ್ಷ ಯಾವುದೇ ಕಾರ್ಯಕ್ರಮ ರೂಪಿಸಿದರು ಅದು ಮಹಿಳಾ ಕೇಂದ್ರಿತ ಕಾರ್ಯಕ್ರಮ ಗಳಾಗಿರುತ್ತವೆ.

ಮಹಿಳೆಯರಿಗೆ ಶಕ್ತಿ ತುಂಬಲು ನಮ್ಮ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದೆ. ಇದನ್ನು ಬಳಸಿಕೊಂಡು ಈ ಯೋಜನೆಗಳ ಫಲಾನುಭವಿಗಳಿಗೆ ಕಾಂಗ್ರೆಸ್ ಸರ್ಕಾರದ ಕೊಡುಗೆಗಳನ್ನು ಮನದಟ್ಟು ಮಾಡಿ. ಆಮೂಲಕ ತಳಮಟ್ಟದಲ್ಲಿ ಕಾಂಗ್ರೆಸ್ ಪಕ್ಷವನ್ನು ಸಂಘಟನೆ ಮಾಡಿ. ಆಗ ಬಿಜೆಪಿಯವರು ಏನೇ ತಿಪ್ಪರಲಾಗ ಹಾಕಿದರೂ 2028ಕ್ಕೆ ನಮ್ಮದೇ ಸರ್ಕಾರ ಅಧಿಕಾರಕ್ಕೆ ಬರುತ್ತದೆ ಎಂದು ತಿಳಿಸಿದರು.

ಇಂದು ನಮ್ಮ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರು ಎಐಸಿಸಿ ಅಧ್ಯಕ್ಷ ಸ್ಥಾನವನ್ನು ಅಲಂಕರಿಸಿದ್ದಾರೆ. ನಾವೆಲ್ಲರೂ ಅವರ ಕೈ ಬಲಪಡಿಸಬೇಕು.

ನಮ್ಮ ಗುರಿ 2028ರ ಚುನಾವಣೆ. ಆನಂತರ 2029ರ ಚುನಾವಣೆ. ದೇಶದಲ್ಲಿ ಮತ್ತೆ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತರಬೇಕು. ನಾನು ಎಷ್ಟು ದಿನ ಕಾಂಗ್ರೆಸ್ ಪಕ್ಷದ ಅಧ್ಯಕ್ಷನಾಗಿ ಇರುತ್ತೇನೋ ಗೊತ್ತಿಲ್ಲ. ಆದರೆ ಅಧಿಕಾರದಲ್ಲಿ ಇರುವಾಗ ನಾವು ಏನು ಮಾಡುತ್ತೇವೆ ಎಂಬುದು ಮುಖ್ಯ. ನಮ್ಮ ಸಂಘಟನೆ ಇತಿಹಾಸದ ಪುಟಕ್ಕೆ ಹೋಗುತ್ತದೆ ಎಂದು ತಿಳಿಸಿದರು.

**ನನಗೆ ರಾಜಕೀಯ ಚದುರಂಗ ಗೊತ್ತಿದೆ:**

ಯಾವ ರೀತಿ ರಾಜಕಾರಣ ಮಾಡಬೇಕು, ಅವರು ಏನೇ ಚದುರಂಗ ಆಟವಾಡಿದರೂ ಹೇಗೆ ಚೆಕ್ ಮೇಟ್ ನೀಡಬೇಕು ಎಂದು ನನಗೆ ಗೊತ್ತಿದೆ. ರಾಜಕಾರಣ ಫುಟ್ಬಾಲ್ ಅಲ್ಲ. ಚದುರಂಗದಾಟ. ಆ ಆಟ ನನಗೆ ಗೊತ್ತಿದೆ. ನೀವು ಮಹಿಳೆಯರು ಪಂಚಾಯ್ತಿ, ಬೂತ್ ಮಟ್ಟದಲ್ಲಿ ಮಹಿಳೆಯರನ್ನು ಸಂಘಟನೆ ಮಾಡಿ. ಮತ್ತೆ ನಾವು ರಾಜ್ಯದಲ್ಲಿ ಅಧಿಕಾರಕ್ಕೆ ಯಾಕೆ ಬರುವುದಿಲ್ಲ ನೋಡುತ್ತೇನೆ? ಎಂದು ತಿಳಿಸಿದರು. ?ರಾಜೀವ್ ಗಾಂಧಿ ಅವರು ಸಂವಿಧಾನಕ್ಕೆ 72-73ನೇ ತಿದ್ದುಪಡಿ ತರುವ ಮೂಲಕ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮಹಿಳೆಯರಿಗೆ ಶೇ.50ರಷ್ಟು ಮೀಸಲಾತಿ ನೀಡಲಾಗಿದೆ. ಸ್ಥಳೀಯ ಮಟ್ಟದಲ್ಲಿ ಮೂರ್ನಾಲ್ಕು ಬಾರಿ ಜನರಿಂದ ಆಯ್ಕೆಯಾಗಿರುವ ಮಹಿಳೆಯರನ್ನು ಗುರುತಿಸಿ, ಅವರನ್ನು ದೊಡ್ಡ ಮಟ್ಟದ ನಾಯಕಿಯನ್ನಾಗಿ ಮಾಡುವ ಕೆಲಸ ಮಾಡಿದರೆ ಸಾಕು. ಆಕೆಗೆ ಜನರ ಕಷ್ಟ ಸುಖ ಅರಿವಿದೆ. ಸಹಕಾರ ಕ್ಷೇತ್ರ, ಸ್ತ್ರೀ ಶಕ್ತಿ ಸಂಘಟನೆಗಳನ್ನು ಮಾಡಿದ್ದೇವೆ.

**ಮಹಿಳೆಯರಿಗೆ ಆದ್ಯತೆ ನೀಡುವುದು ನಮ್ಮ ಸಂಸ್ಕೃತಿ:**

ನಾವು ಪ್ರತಿ ಹಳ್ಳಿಯಲ್ಲಿ ಗ್ರಾಮದೇವತೆಗಳಿಗೆ ನಾವು ಪೂಜೆ ಮಾಡುತ್ತೇವೆ. ನಾಡದೇವತೆ ಎಂದು ತಾಯಿ ಚಾಮುಂಡೇಶ್ವರಿ ದೇವಿಯನ್ನು ಪೂಜಿಸುತ್ತೇವೆ. ನಾವು ವೆಂಕಟೋಶ್ವರ ದೇವರನ್ನು ಲಕಷ್ಮಿ ವೆಂಕಟೇಶ್ವರ ಎನ್ನುತ್ತೇವೆ. ಗಣೇಶನಿಗೆ ಗೌರಿ ಗಣೇಶ, ಶಿವನನ್ನು ಪಾರ್ವತಿ ಪರಮೇಶ್ವರ ಎಂದು ಕರೆಯುತ್ತೇವೆ. ಅಷ್ಟರ ಮಟ್ಟಿಗೆ ನಾವು ಮಹಿಳೆಯರಿಗೆ ಪ್ರಾತಿನಿಧ್ಯ, ಗೌರವ ನೀಡುತ್ತೇವೆ. ಇದು ನಮ್ಮ ಸಂಸ್ಕೃತಿ. ಮಹಿಳೆ ಹುಟ್ಟುತ್ತಲೇ ನಾಯಕತ್ವ ಗುಣ ಹೊಂದಿರುತ್ತಾಳೆ ಎಂದು ನಾವು ನಾ ನಾಯಕಿ ಕಾರ್ಯಕ್ರಮ ಮಾಡಿದ್ದೇವೆ. ನೀವು ರಾಜಕೀಯಕ್ಕೆ ಬರಲು ಎಷ್ಟು ಕಷ್ಟವಿದೆ ಎಂದು ನನಗೆ ಅರಿವಿದೆ. ನಾನು ಮಹಿಳೆಯರಿಗೆ ನಾಯಕತ್ವ ನೀಡುವ ಪ್ರಯತ್ನ ಮಾಡಿದಾಗ ನನ್ನ ನೋಡಿ ಕೆಲವರು ಆಡಿಕೊಂಡರು. ನನ್ನ ಈ ವಿಚಾರವನ್ನು ನಾನು ರಾಷ್ಟ್ರ ಮಟ್ಟದಲ್ಲೂ ಚರ್ಚೆ ಮಾಡಿದ್ದೇನೆ. ಮುಂದೆ ಮಹಿಳೆಯರಿಗೆ ರಾಜಕೀಯ ಮೀಸಲಾತಿ ದೊರೆಯಲಿದ್ದು, ಅದಕ್ಕೆ ನಾನು ಅಡಿಪಾಯ ಹಾಕಿದ್ದೇನೆ ಎಂದರು.

**ರಾಮಲಿಂಗಾ ರೆಡ್ಡಿ ಜತೆ ಚರ್ಚೆ ಮಾಡದೇ ಸೌಮ್ಯಾ ಹೆಸರು ಸೂಚಿಸಿದೆ:**

ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಸ್ಥಾನಕ್ಕೆ ನಾವು ನಾಲ್ಕೈದು ಹೆಸರು ಚರ್ಚೆ ಮಾಡಿದ್ದೆವು. ನಾನು ಸೌಮ್ಯಾರೆಡ್ಡಿ ಅವರ ಹೆಸರು ಸೂಚಿಸುವಾಗ ಆಕೆಯ ಜತೆಗಾಗಲಿ, ಅವರ ತಂದೆ ರಾಮಲಿಂಗಾ ರೆಡ್ಡಿ ಅವರ ಜತೆಗಾಗಲಿ ಚರ್ಚೆ ಮಾಡಲಿಲ್ಲ. ಸೌಮ್ಯಾರೆಡ್ಡಿ ಅವರು ಲೋಕಸಭೆ ಟಿಕೆಟ್ ನೀಡಿರಲಿಲ್ಲ. ನಾನು ಮುಖ್ಯಮಂತ್ರಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು ಬಲವಂತ ಮಾಡಿ ಚುನಾವಣೆಗೆ ಸ್ಪರ್ಧಿಸುವಂತೆ ಮಾಡಿದ್ದೆವು. ಸೌಮ್ಯರೆಡ್ಡಿ ಅವರನ್ನು ಈ ಸ್ಥಾನಕ್ಕೆ ಆಯ್ಕೆ ಮಾಡಿದಾಗ ಅನೇಕರು ಟೀಕೆ ಮಾಡಿದರು. ಆದರೂ ನೀಡಿದ್ದೇವೆ. ಕಾರಣ ಬೆಂಗಳೂರಿನಲ್ಲಿ ರಾಜಕಾರಣ ಮಾಡುವುದು ಅಷ್ಟು ಸುಲಭವಲ್ಲ. ಪಕ್ಷಕ್ಕಾಗಿ ಅವರಿಗೆ ಜವಾಬ್ದಾರಿ ನೀಡುತ್ತಿದ್ದೇವೆ ಎಂದರು.

ಅವಕಾಶ ಇರುವವನನ್ನು ಅದೃಷ್ಟವಂತ ಎಂದು ಕರೆಯುತ್ತಾರೆ. ಆದರೆ ಅವಕಾಶ ರೂಪಿಸಿಕೊಳ್ಳುವವರನ್ನು ಬುದ್ಧಿವಂತ ಎಂದು ಕರೆಯುತ್ತಾರೆ. ಹೀಗಾಗಿ ನೀವು ಅವಕಾಶಗಳನ್ನು ರೂಪಿಸಿಕೊಳ್ಳಬೇಕು. ದೇವರು ವರ ಹಾಗೂ ಶಾಪ ನೀಡುವುದಿಲ್ಲ. ಕೇವಲ ಅವಕಾಶ ಮಾತ್ರ ನೀಡುತ್ತಾನೆ. ಅವಕಾಶವನ್ನು ನಾವು ಸರಿಯಾಗಿ ಬಳಸಿಕೊಳ್ಳಬೇಕು. ಮಹಾತ್ಮಾ ಗಾಂಧಿ ಅವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನಕ್ಕೆ ನೂರು ವರ್ಷಗಳು ಪೂರ್ಣಗೊಳ್ಳುತ್ತಿರುವ ಹಿನ್ನಲೆಯಲ್ಲಿ, ನಾವು ವಿಶೇಷ ಕಾರ್ಯಕ್ರಮ ರೂಪಿಸುತ್ತಿದ್ದೇವೆ. ಸರ್ಕಾರ ಹಾಗೂ ಪಕ್ಷದ ವತಿಯಿಂದ ಪ್ರತ್ಯೇಕ ಕಾರ್ಯಕ್ರಮ ರೂಪಿಸುತ್ತೇವೆ. ಈಗಾಗಲೇ ಗಾಂಧಿ ಭಾರತ ಹಾಗೂ ಗಾಂಧಿ ನಡಿಗೆ ಕಾರ್ಯಕ್ರಮ ನಡೆಸಿದ್ದೇವೆ ಎಂದರು.

# ಕಾವೇರಿ ಮಾತೆಯ ಕರುಣೆಯಿಂದ ಕರುನಾಡು ಸುಭಿಕ್ಷ: ಸಚಿವ ಬೋಸರಾಜು

## - ಕೊಡಗಿನ ತಲಕಾವೇರಿಯಲ್ಲಿ ತುಲಾಸಂಕ್ರಮಣ ಪವಿತ್ರ ತೀರ್ಥೋದ್ಭವದಲ್ಲಿ ಭಾಗಿ

## - ನಾಡಿನ ಸಮಸ್ತ ಜನತೆಗೆ ಹಾಗೂ ರೈತರಿಗೆ ಒಳಿತು ಮಾಡಲು ಪ್ರಾರ್ಥನೆ



**ತಲಕಾವೇರಿ ಅ.17:** ಕಾವೇರಿ ತಾಯಿಯ ಕೃಪೆಯಿಂದ ಕರುನಾಡು ಸುಭೀಕ್ಷವಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್. ಬೋಸರಾಜು ಅಭಿಪ್ರಾಯಪಟ್ಟರು. ಇಂದು ಕೊಡಗಿನ ತಲಕಾವೇರಿಯಲ್ಲಿ ನಡೆದ ತುಲಾಸಂಕ್ರಮಣ ಪವಿತ್ರ ತೀರ್ಥೋದ್ಭವಲ್ಲಿ ಭಾಗವಹಿಸಿ ಜೀವ ನದಿ ಕಾವೇರಿಯ ತೀರ್ಥೋದ್ಭವ ಕ್ಷಣಗಳನ್ನು ಕಣ್ತುಂಬಿಕೊಂಡರು. ನಂತರ ಮಾತನಾಡಿದ ಅವರು, ನಮ್ಮ ನಾಡಿನ ಜೀವ ನದಿ ಕಾವೇರಿ.

ಕಾವೇರಿ ತಾಯಿಯ ಕೃಪೆಯಿಂದ ನಮ್ಮ ಕರುನಾಡು ಸುಭಿಕ್ಷವಾಗಿದೆ. ಈ ಬಾರಿ ಉತ್ತಮ ಮಳೆಯಾಗಿದ್ದು ಅಣೆಕಟ್ಟುಗಳು, ಕೆರೆಗಳು ತುಂಬಿವೆ. ನದಿಗಳು ಮೈದುಂಬಿ ಹರಿಯುತ್ತಿವೆ. ಕಾವೇರಿ ನದಿಪಾತ್ರದಲ್ಲೂ ಉತ್ತಮ ಮಳೆಯಾಗಿದ್ದು ನಮ್ಮ ಮೈಸೂರು ಭಾಗದ ಜನತೆಗೆ ಉತ್ತಮ ನೀರು ಲಭ್ಯವಾಗಿದೆ. ಕಾವೇರಿ ಮಾತೆಯ ಕೊಡುಗೆ ನಮ್ಮ ನಾಡಿನ ಮೇಲೆ ಅಪಾರವಾಗಿದೆ. ಅತ್ಯಂತ ಸಂಭ್ರಮ ಹಾಗೂ ಖುಷಿಯಿಂದ ಈ ತೀರ್ಥೋದ್ಭವವನ್ನು ಕಣ್ತುಂಬಿಕೊಂಡಿದ್ದೇನೆ. ನಾಡಿನ ಸಮಸ್ತ ಜನತೆಗೆ ಅದರಲ್ಲೂ ವಿಶೇಷವಾಗಿ ರೈತರಿಗೆ ಒಳಿತ ಮಾಡುವಂತೆ ಪ್ರಾರ್ಥಿಸಿದ್ದೇನೆ ಎಂದು ಸಚಿವರು ತಿಳಿಸಿದರು. ಜಿಲ್ಲಾಡಳಿತದ ವತಿಯಿಂದ ಭಕ್ತರಿಗೆ ಯಾವುದೇ ಅನಾನುಕೂಲವಾಗದಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಪುಷ್ಪಾಲಂಕಾರದಿಂದ ಕಾವೇರಿ ಕ್ಷೇತ್ರವನ್ನು ಕಂಗೊಳಿಸುವಂತೆ ಅಲಂಕರಿಸಲಾಗಿದೆ.

ದೇವಾಲಯದ ಅನ್ನ ಪ್ರಸಾದ ಸಭಾಭವನದಲ್ಲಿ ಉಪಹಾರವನ್ನು ಆಯೋಜಿಸಲಾಗಿತ್ತು. ಕಾವೇರಿ ತೀರ್ಥೋದ್ಭವ ಸಂಧರ್ಭದಲ್ಲಿ ಶಾಸಕರಾದ ಎ ಎಸ್ ಪೊನ್ನಣ್ಣ, ಡಾ ಮಂತರ್ ಗೌಡ, ಸುಜಾಕುಶಾಲಪ್ಪ, ಸರ್ಕಾರದ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಧರ್ಮಜಾ ಉತ್ತಪ್ಪ, ಜಿಲ್ಲಾಧಿಕಾರಿ ವೆಂಕಟ್ ರಾಜಾ, ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಹಾಜರಿದ್ದರು. ಸಾಂಪ್ರದಾಯಿದ ಧಿರಿಸಿನಲ್ಲಿ ಸಹಸ್ರಾರು ಭಕ್ತರು ಪಾಲ್ಗೊಂಡಿದ್ದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

## ಬಿಜೆಪಿ ಮಹಿಳಾ ಸ್ವಾತಂತ್ರ್ಯದ ವಿರೋಧಿ: ಮಹಿಳೆಯರಿಗೆ ಆರ್ಥಿಕ ಶಕ್ತಿ ನೀಡಿದ್ದನ್ನುಸಹಿಸುತ್ತಿಲ್ಲ ಮುಖ್ಯಮಂತ್ರಿ

# ಸೌಮ್ಯಾರೆಡ್ಡಿ ರಚನಾತ್ಮಕವಾಗಿ ಪಕ್ಷ ಸಂಘಟಿಸಬಲ್ಲರು: ಸಿಎಂ



**ಬೆಂಗಳೂರು,ಅ 17:** 2028 ರಲ್ಲೂ ನಾವೇ ಅಧಿಕಾರಕ್ಕೆ ಬಂದು ಮಹಿಳೆಯರಿಗೆ ಆರ್ಥಿಕ ಶಕ್ತಿ ನೀಡುವ ಕಾರ್ಯಕ್ರಮ ಮುಂದುವರೆಸುತ್ತೇವೆ. ಮಹಿಳೆಯರು ಜಾತ್ಯತೀತತೆ ಮತ್ತು ಸಾಮಾಜಿಕ ನ್ಯಾಯದ ರಕ್ಷಣೆಗೆ ಮುಂದಾಗಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಕೆಪಿಸಿಸಿ ಕಚೇರಿಯ ಭಾರತ್ ಜೋಡೋ ಭವನದಲ್ಲಿ ಸೌಮ್ಯಾರೆಡ್ಡಿ ಪ್ರದೇಶ ಕಾಂಗ್ರೆಸ್ ಮಹಿಳಾ ಅಧ್ಯಕ್ಷೆಯಾಗಿ ಅಧಿಕಾರ ಸ್ವೀಕರಿಸಿದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಜಾತ್ಯತೀತತೆ, ಪ್ರಜಾಪ್ರಭುತ್ವ, ಸಾಮಾಜಿಕ ನ್ಯಾಯ ಮತ್ತು ಸಂವಿಧನದ ಮೌಲ್ಯಗಳ ಬಗ್ಗೆ ಸ್ಪಷ್ಟತೆ ಕೊಡುವ ಮೂಲಕ ಕಾರ್ಯಕರ್ತೆಯರನ್ನು ಸಜ್ಜುಗೊಳಿಸಿ ಪಕ್ಷ ಸಂಘಟನೆ ಮಾಡುವ ಸಮರ್ಥ್ಯ ಸೌಮ್ಯಾರೆಡ್ಡಿಗೆ ಇದ್ದು ಈ ದಿಕ್ಕಿನಲ್ಲಿ ಮುಂದುವರೆಯಿರಿ ಎಂದು ಕರೆ ನೀಡಿದರು.

ಬಿಜೆಪಿ ಪಕ್ಷವೇ ಬಹುಜನರ, ದುಡಿಯುವ ವರ್ಗಗಳ, ಶ್ರಮಿಕ ಸಂಸ್ಕೃತಿಯ ವಿರೋಧಿ. ಮುಖ್ಯವಾಗಿ ಬಿಜೆಪಿ ಮಹಿಳಾ ಮೀಸಲಾತಿಯ, ಮಹಿಳಾ ಹಕ್ಕುಗಳ ವಿರೋಧಿ. ಇದನ್ನು ಸಮಸ್ತ ಮಹಿಳೆಯರಿಗೆ ಅರ್ಥ ಮಾಡಿಸುವ ಕೆಲಸ ಮಾಡಿ ಎಂದು ಕರೆ ನೀಡಿದರು.

ಮಹಿಳಾ ಮೀಸಲಾತಿ ಜಾರಿಗೆ ತಂದಿದ್ದು ಕಾಂಗ್ರೆಸ್ ಪಕ್ಷ. ಮಹಿಳೆಯರಿಗೆ ಆರ್ಥಿಕವಾಗಿ, ಸಾಮಾಜಿಕವಾಗಿ ಶಕ್ತಿ ತುಂಬುವ ಕಾಳಜಿ ಇರುವುದು ಕಾಂಗ್ರೆಸ್ಸಿಗೆ ಮಾತ್ರ. ಹೀಗಾಗಿ ಎಲ್ಲಾ ಜಾತಿ, ಎಲ್ಲಾ ಧರ್ಮದ ಮಹಿಳೆಯರಿಗೆ ಆರ್ಥಿಕ ಶಕ್ತಿ ಕೊಡುವ ಗ್ಯಾರಂಟಿ ಕಾರ್ಯಕ್ರಮಗಳನ್ನು ರೂಪಿಸಿ ಜಾರಿಗೆ ತಂದಿದ್ದು ನಾವು. ಇದನ್ನು ವಿರೋಧಿಸಿದ್ದು ಬಿಜೆಪಿ. ರಾಜ್ಯದ ಒಂದು ಕೋಟಿ 21 ಲಕ್ಷ ಕುಟುಂಬಗಳಿಗೆ ಪ್ರತಿ ತಿಂಗಳು ಆರ್ಥಿಕ ಶಕ್ತಿ ನೀಡುತ್ತಿರುವುದು ನಾವು. ಬಿಜೆಪಿಯವರು ಅತ್ತೆ ಸೊಸೆ ಜಗಳ ಆಡ್ತಾರೆ ಎನ್ನುವ ಸುಳ್ಳನೆಪ ಮುಂದಿಟ್ಟು ಮಹಿಳೆಯರ ಖಾತೆಗೆ ಹೋಗುವ ಹಣವನ್ನು ನಿಲ್ಲಿಸಲು ಷಡ್ಯಂತ್ರ ನಡೆಸಿತು ಎಂದು ಟೀಕಿಸಿದರು. ಆದರೆ ಗೃಹಲಕ್ಷ್ಮಿ ಹಣದಲ್ಲಿ ಸೊಸೆಗೆ ಅತ್ತೆಬಳೆ ಅಂಗಡಿ ಹಾಕಿಕೊಟ್ಟ, ಹೊಲಿಗೆ ಯಂತ್ರ ಕೊಡಿಸಿದ ಉದಾಹರಣೆಗಳು ಸಾಕಷ್ಟಿವೆ ಎಂದು ವಿವರಿಸಿದರು.

2028 ರಲ್ಲೂ ನಾವೇ ಅಧಿಕಾರಕ್ಕೆ ಬಂದು ಮಹಿಳೆಯರಿಗೆ ಆರ್ಥಿಕ ಶಕ್ತಿ ನೀಡುವ ಗ್ಯಾರಂಟಿ ಕಾರ್ಯಕ್ರಮಗಳನ್ನು ಮುಂದುವರಿಸುತ್ತೇವೆ. ನೀವು ನಮಗೆ ರಾಜಕೀಯ ಶಕ್ತಿ ಕೊಡಿ. ನಾವು ನಿಮಗೆ ಆರ್ಥಿಕ ಶಕ್ತಿ ನೀಡುವುದನ್ನು ಮುಂದುವರಿಸುತ್ತೇವೆ ಎಂದು ಭರವಸೆ ನೀಡಿದರು.

ಬಿಜೆಪಿಯವರು ಅನ್ನಭಾಗ್ಯವನ್ನೂ ವಿರೋಧಿಸುತ್ತಾರೆ, ಗೃಹಲಕ್ಷ್ಮಿ ಯೋಜನೆ, ಗೃಹಜ್ಯೋತಿ ಯೋಜನೆಯನ್ನೂ ವಿರೋಧಿಸುತ್ತಿದೆ. ಇದಕ್ಕೆ ತಕ್ಕ ಉತ್ತರ ನೀವೇ ನೀಡಬೇಕು ಎಂದು ಕರೆ ನೀಡಿದರು. ಸಂವಿಧಾನ ಮಹಿಳೆಯರಿಗೆ ರಾಜಕೀಯ, ಸಾಮಾಜಿಕ ಮತ್ತು ಆರ್ಥಿಕ ಶಕ್ತಿ ನೀಡಿದೆ. ಈ ಸಂವಿಧಾನವನ್ನು ಬಿಜೆಪಿ ವಿರೋಧಿಸುತ್ತದೆ. ಬಿಜೆಪಿಯವರ ಗುರೂಜಿ ಸಾವರ್ಕರ್ ಸಂವಿಧಾನ ವಿರೋಧಿಸಿದ್ದರು. ಈ ಇತಿಹಾಸವನ್ನು ರಾಜ್ಯದ ಮಹಿಳೆಯರು, ಯುವತಿಯರಿಗೆ ಸರಿಯಾಗಿ ಮನದಟ್ಟು ಮಾಡಿಸಿ ಎಂದು ಕರೆ ನೀಡಿದರು.

ಸಮಾರಂಭದಲ್ಲಿ ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಅಲ್ಕಾಲಂಬಾ , ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ ಕೆ ಶಿವಕುಮಾರ್, ಸಚಿವರಾದ ಕೃಷ್ಣ ಬೈರೇಗೌಡ, ಲಕ್ಷ್ಮೀ ಹೆಬ್ಬಾಳ್ಕರ್ ಸೇರಿ ಪಕ್ಷದ ಕಾರ್ಯಾಧ್ಯಕ್ಷರುಗಳು, ಮಾಜಿ ಮಹಿಳಾ ಅಧ್ಯಕ್ಷರುಗಳು, ಶಾಸಕ ಹ್ಯಾರಿಸ್ ಸ್ಮರಿ ಮತ್ತಿತರರು ಭಾಗವಹಿಸಿದ್ದರು.

# ಮುಂದಿನ ಸಿಜೆಐ ಸಂಜೀವ್ ಖನ್ನಾ

**ನವದೆಹಲಿ, ಅ. 17:** ಜನವರಿ 2019ರಿಂದ ಸುಪ್ರೀಂ ಕೋರ್ಟ್‌ನ ನ್ಯಾಯಾಧೀಶರಾಗಿರುವ ನ್ಯಾ.ಮೂರ್ತಿ ಸಂಜೀವ್ ಖನ್ನಾ ಅವರನ್ನು ಭಾರತದ ಹೊಸ ಮುಖ್ಯ ನ್ಯಾಯಮೂರ್ತಿಯಾಗಿ ಹಾಲಿ ಸಿಜೆಐ ಡಿ ವೈ ಚಂದ್ರಚೂಡ್ ಶಿಫಾರಸು ಮಾಡಿದ್ದಾರೆ.

ಈ ಬಗ್ಗೆ ಡಿವೈ ಚಂದ್ರಚೂಡ್ ಅವರು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದು, ಚಂದ್ರಚೂಡ್ ಬಳಿಕ ಖನ್ನಾ ಅವರು ಹಿರಿಯ ನ್ಯಾಯಮೂರ್ತಿಯಾಗಿದ್ದಾರೆ. ಚಂದ್ರಚೂಡ್ ಅವರು ನವೆಂಬರ್ 10ರಂದು ನಿವೃತ್ತಿಯಾಗಲಿದ್ದು, ಆ ಬಳಿಕ ಖನ್ನಾ ಅವರು ಜವಾಬ್ದಾರಿ ವಹಿಸಿಕೊಳ್ಳಲಿದ್ದಾರೆ.



ಮೇ 1960ರಲ್ಲಿ ಜನಿಸಿದ ಜಸ್ಟಿಸ್ ಖನ್ನಾ ಅವರು, 1983ರಲ್ಲಿ ದೆಹಲಿಯ ಬಾರ್ ಕೌನ್ಸಿಲ್‌ಗೆ ವಕೀಲರಾಗಿ ಸೇರಿಕೊಂಡರು. ದೆಹಲಿಯ ತೀಸ್ ಹಜಾರಿ ಸಂಕೀರ್ಣದಲ್ಲಿ ಜಿಲ್ಲಾ ನ್ಯಾಯಾಲಯಗಳ ಮೂಲಕ ವೃತ್ತಿ ಜೀವನ ಪ್ರಾರಂಭಿಸಿದ ಅವರು, ದೆಹಲಿ ಹೈಕೋರ್ಟ್‌ವರೆಗೂ ಕೆಲಸ ಮಾಡಿದ್ದಾರೆ.

ಖನ್ನಾ ಅವರು ಸಾಂವಿಧಾನಿಕ ಕಾನೂನು, ನೇರ ತೆರಿಗೆ, ಮಧ್ಯಸ್ಥಿಕೆ, ವಾಣಿಜ್ಯ ಕಾನೂನು, ಕಂಪನಿ ಕಾನೂನು, ಭೂ ಕಾನೂನು, ಪರಿಸರ ಕಾನೂನು ಮತ್ತು ವೈದ್ಯಕೀಯ ನಿರ್ಲಕ್ಷ್ಯವನ್ನು ಒಳಗೊಂಡ ವಿವಿಧ ನ್ಯಾಯಮಂಡಳಿಗಳ ಭಾಗವಾಗಿದ್ದರು. ಹೆಚ್ಚುವರಿಯಾಗಿ, ಅವರು ದೀರ್ಘಾವಧಿಯವರೆಗೆ ಆದಾಯ ತೆರಿಗೆ ಇಲಾಖೆಯ ಹಿರಿಯ ಸ್ಥಾಯಿ ವಕೀಲರ ಹುದ್ದೆಯನ್ನು ಹೊಂದಿದ್ದರು.

2004 ರಲ್ಲಿ, ನ್ಯಾಯಮೂರ್ತಿ ಖನ್ನಾ ಅವರನ್ನು ದೆಹಲಿಯ ಸ್ಥಾಯಿ ವಕೀಲರಾಗಿ (ಸಿವಿಲ್) ನೇಮಿಸಲಾಯಿತು. ಅಲ್ಲಿ ಅವರ ಅಧಿಕಾರಾವಧಿಯಲ್ಲಿ, ಅವರು ದೆಹಲಿ ಹೈಕೋರ್ಟ್‌ನಲ್ಲಿ ಹೆಚ್ಚುವರಿ ಪಬ್ಲಿಕ್ ಪ್ರಾಸಿಕ್ಯೂಟರ್ ಆಗಿ ಮತ್ತು ಅಮಿಕಸ್ ಕ್ಯೂರಿಯಾಗಿ ಹಲವಾರು ಕ್ರಿಮಿನಲ್ ಮೊಕದ್ದಮೆಗಳನ್ನು ವಿಚಾರಣೆ ನಡೆಸಿದ್ದಾರೆ.

2005 ರಲ್ಲಿ, ಖನ್ನಾ ಅವರು ದೆಹಲಿ ಹೈಕೋರ್ಟ್‌ನ ಹೆಚ್ಚುವರಿ ನ್ಯಾಯಾಧೀಶರಾಗಿ ನೇಮಕಗೊಂಡರು ಮತ್ತು 2006 ರಲ್ಲಿ ಖಾಯಂ ನ್ಯಾಯಾಧೀಶರಾದರು. ಹೈಕೋರ್ಟ್ ನ್ಯಾಯಾಧೀಶರಾಗಿದ್ದ ಅವಧಿಯಲ್ಲಿ ಖನ್ನಾ ಅವರು ದೆಹಲಿ ನ್ಯಾಯಾಂಗ ಅಕಾಡೆಮಿ, ದೆಹಲಿ ಅಂತಾರಾಷ್ಟ್ರೀಯ ಮಧ್ಯಸ್ಥಿಕೆ ಕೇಂದ್ರ ಮತ್ತು ಜಿಲ್ಲಾ ನ್ಯಾಯಾಲಯದ ಮಧ್ಯಸ್ಥಿಕೆ ಕೇಂದ್ರಗಳ ಅಧ್ಯಕ್ಷ/ಪ್ರಭಾರ ನ್ಯಾಯಾಧೀಶರೂ ಆಗಿದ್ದರು.

ಜನವರಿ 18,2019 ರಂದು, ನ್ಯಾಯಮೂರ್ತಿ ಖನ್ನಾ ಅವರನ್ನು ಸುಪ್ರೀಂ ಕೋರ್ಟ್‌ಗೆ ನೇಮಿಸಲಾಯಿತು. ಅಲ್ಲಿ ಅವರು ಪ್ರಸ್ತುತ ಸೇವೆ ಸಲ್ಲಿಸುತ್ತಿದ್ದಾರೆ. ಸುಪ್ರೀಂ ಕೋರ್ಟ್‌ನ ಅಧಿಕಾರಾ ವಧಿಯಲ್ಲಿ, ಅವರು ಜೂನ್ 2023 ರಿಂದ ಡಿಸೆಂಬರ್ 2023 ರವರೆಗೆ ಸುಪ್ರೀಂ ಕೋರ್ಟ್ ಕಾನೂನು ಸೇವಾ ಸಮಿತಿಯ ಅಧ್ಯಕ್ಷ ಹುದ್ದೆಯನ್ನು ನಿಭಾಯಿಸಿದ್ದರು.

ಪ್ರಸ್ತುತ, ಅವರು ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರಾಗಿದ್ದಾರೆ ಮತ್ತು ಭೋಪಾಲ್ನ ರಾಷ್ಟ್ರೀಯ ನ್ಯಾಯಾಂಗ ಅಕಾಡೆಮಿಯ ಆಡಳಿತ ಸಲಹೆಗಾರರ ಸದಸ್ಯರಾಗಿದ್ದಾರೆ.

ನ್ಯಾಯಮೂರ್ತಿ ಖನ್ನಾ ಅವರು ಮೇ 2025ರಲ್ಲಿ ನಿವೃತ್ತರಾಗಲಿದ್ದಾರೆ. ಪ್ರಸ್ತುತ ಸಿಜೆಐ ಆಗಿರುವ ಡಿವೈ ಚಂದ್ರಚೂಡ್ ಅವರ ನಿವೃತ್ತಿ ಬಳಿಕ ಮುಂದಿನ ತಿಂಗಳು (ನವೆಂಬರ್) ಸಿಜೆಐ ಹುದ್ದೆಗೇರಲಿರುವ ಅವರು, ಆರು ತಿಂಗಳ ಕಾಲ ಆ ಹುದ್ದೆಯಲ್ಲಿ ಮುಂದುವರಿಯಲಿದ್ದಾರೆ.



ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಗುರುವಾರ ಮಲಾವಿಯ ಲಿಲಾಂಗ್ವೆಯ ಕಮುಜು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದಾಗ ಭವ್ಯ ಸ್ವಾಗತ ಕೋರಲಾಯಿತು.

# ಶಿಗ್ಗಾವಿ ಕ್ಷೇತ್ರಕ್ಕೆ ನಾನು ಆಕಾಂಕ್ಷಿಯಲ್ಲ ಮುರುಗೇಶ್ ನಿರಾಣಿ ಸ್ಪಷ್ಟೀಕರಣ



**ನವದೆಹಲಿ, ಅ.17:** ರಾಜ್ಯದಲ್ಲಿ ಮೂರು ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಗೆ ದಿನಾಂಕ ಘೋಷಣೆಯಾಗಿದ್ದು ಅಭ್ಯರ್ಥಿಗಳ ಆಯ್ಕೆ ಕಸರತ್ತು ಆರಂಭವಾಗಿದೆ. ಮಾಜಿ ಸಿಎಂ, ಸಂಸದ ಬಸವರಾಜ್ ಬೊಮ್ಮಾಯಿ ರಾಜೀನಾಮೆಯಿಂದ ತೆರವಾಗಿರುವ ಶಿಗ್ಗಾವಿ ಕ್ಷೇತ್ರಕ್ಕೆ ಮಾಜಿ ಸಚಿವ ಮುರುಗೇಶ್ ನಿರಾಣಿ ಹೆಸರು ಕೇಳಿ ಬಂದಿದೆ. ಈ ಬಗ್ಗೆ ದೆಹಲಿಯಲ್ಲಿ ಮಾತನಾಡಿ ಸ್ಪಷ್ಟನೆ ನೀಡಿದ ಅವರು, ಶಿಗ್ಗಾಂವಿ ಕ್ಷೇತ್ರ ಸ್ಪರ್ಧೆಗೆ ನನ್ನ ಹೆಸರು ಕೇಳಿಬರುತ್ತಿದೆ ಮತ್ತೊಂದು ಜಿಲ್ಲೆಗೆ ಹೋಗಿ ನಾನು ಸ್ಪರ್ಧೆ ಮಾಡುವುದು ಸರಿ ಅಲ್ಲ, ಆದರೆ ನಾನು ಆಕಾಂಕ್ಷಿ ಅಲ್ಲ, ಭರತ್ ಬೊಮ್ಮಾಯಿ ಸೇರಿ 60 ಮಂದಿ ಸ್ಪರ್ಧೆಗೆ ಅರ್ಜಿ ಹಾಕಿದ್ದಾರೆ. ಆ ಕ್ಷೇತ್ರದಲ್ಲೂ ಪಂಚಮಸಾಲಿ ಸಮಾಜದವರು ಇದ್ದಾರೆ, ಪಕ್ಷಕ್ಕಾಗಿ ದುಡಿದ ಕಾರ್ಯಕರ್ತರು ಅಲ್ಲಿ ಇದ್ದಾರೆ. ಹೀಗಾಗೀ ಪಕ್ಷದ ನಾಯಕರು ಅಥಾವ ಕಾರ್ಯಕರ್ತರಿಗೆ ಟಿಕೆಟ್ ನೀಡಬೇಕು, ನಾನು ಅಲ್ಲಿಂದ ಸ್ಪರ್ಧೆ ಬಯಸುವುದಿಲ್ಲ, ಹೈಕಮಾಂಡ್ ಹಾಕುವ ಅಭ್ಯರ್ಥಿಯನ್ನು ಅಂತಿಮವಾಗಿ ಗೆಲ್ಲಿಸಿಕೊಂಡು ಬರುವ ಜವಬ್ದಾರಿ ನಮ್ಮದು, ನಾವು ಆ ಕೆಲಸ ಮಾಡಲಿದ್ದೇವೆ ಎಂದು ಹೇಳಿದರು.

# ಕುದುರೆಮುಖ ಸಂಸ್ಥೆ, ಎಚ್‌ಎಂಟಿ ಬಗ್ಗೆ ರಾಜ್ಯ ಸರ್ಕಾರದ ಅಪಪ್ರಚಾರ: ಎಚ್‌ಡಿಕೆ ಕಿಡಿ

**ಬೆಂಗಳೂರು,ಅ.17:** ಹಿಂದೂಸ್ತಾನ್ ಮಶೀನ್ ಅಂಡ್ ಟೂಲ್ಸ್ (ಎಚ್‌ಎಂಟಿ) ಹಾಗೂ ಕುದುರೆಮುಖ ಕಬ್ಬಿಣ ಮತ್ತು ಅದಿರು ಸಂಸ್ಥೆ ವಿಷಯದಲ್ಲಿ ರಾಜ್ಯ ಕಾಂಗ್ರೆಸ್ ಸರಕಾರ ಹಸಿ ಸುಳ್ಳುಗಳನ್ನು ಹಬ್ಬಿಸುತ್ತಿದ್ದು, ಈ ಬಗ್ಗೆ ನಾನು ದಾಖಲೆಗಳ ಸಮೇತ ರಾಜ್ಯ ಸರಕಾರದ ಜತೆ ಚರ್ಚೆಗೆ ತಯಾರಿದ್ದೇನೆ ಎಂದು ಕೇಂದ್ರದ ಭಾರಿ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಸವಾಲು ಹಾಕಿದ್ದಾರೆ. ಬೆಂಗಳೂರಿನಲ್ಲಿ ಗುರುವಾರ ಜೆಡಿಎಸ್ ರಾಜ್ಯ ಕಚೇರಿ ಜೆಪಿ ಭವನದಲ್ಲಿ ಕರೆಯಲಾಗಿದ್ದ ಮಾಧ್ಯಮಗೋಷ್ಠಿಯಲ್ಲಿ ಸಚಿವರು ಮಾತನಾಡಿದರು.

ತಪ್ಪಾಗಿದ್ದರೆ ನಾನು ಜವಾಬ್ದಾರಿ ತೆಗೆದುಕೊಳ್ಳುತ್ತೇನೆ : ಕೆಐಒಸಿಎಲ್ ಬಗ್ಗೆ ರಾಜ್ಯ ಸರಕಾರ ರಾಜಕಾರಣ ಮಾಡಬಾರದು. ಸಮಸ್ಯೆ ಇದ್ದರೆ ಕೂತು ಸರಿಪಡಿಸಿಕೊಳ್ಳಬೇಕು. ರಾಜ್ಯದಲ್ಲಿರುವ ಸಾರ್ವಜನಿಕ ಸ್ವಾಮ್ಯದ ಕೈಗಾರಿಕೆಗಳನ್ನು ಉಳಿಸುವ ಬಗ್ಗೆ ನಾನು ಕೆಲಸ ಮಾಡುತ್ತಿದ್ದೇನೆ. ಈ ಬಗ್ಗೆ ನಾನು ಮುಖ್ಯಮಂತ್ರಿಗಳು ಹಾಗೂ ಅರಣ್ಯ ಸಚಿವರಿಗೆ ಪತ್ರ ಬರೆಯುತ್ತೇನೆ. ಒಂದು ಸಭೆ ಮಾಡಲಿ. ಅಲ್ಲಿ ದಾಖಲೆಗಳ ಸಮೇತ ನಾನು ಮಾತನಾಡುತ್ತೇನೆ. ಒಂದು ವೇಳೆ ಕೆಐಒಸಿಎಲ್ ತಪ್ಪುಗಳಿದ್ದರೆ ಅದಕ್ಕೆ ಆ ಇಲಾಖೆಯ ಸಚಿವನಾಗಿ ಜವಾಬ್ದಾರಿ ತೆಗೆದುಕೊಳ್ಳುತ್ತೇನೆ. ಅದರ ಹೊರತಾಗಿ ರಾಜ್ಯದ ಹಿತಾಸಕ್ತಿಯ ಬಗ್ಗೆ ರಾಜಕಾರಣ ಮಾಡುವುದು ಸರಿಯಲ್ಲ ಎಂದು ಅವರು ಹೇಳಿದರು.

**ರಾಜ್ಯ ಸರಕಾರದ ತಪ್ಪಿನಿಂದ 300–400 ಏಖಔಅಐ ಕಾರ್ಮಿಕರು ಬೀದಿಗೆ ಬಿದ್ದಿದ್ದಾರೆ:**

ರಾಜ್ಯ ಸರ್ಕಾರದ ಹಠಮಾರಿತನದಿಂದ ಕುದುರೆಮುಖ ಸಂಸ್ಥೆಯ ಸುಮಾರು 300–400 ಕಾರ್ಮಿಕರು ಬೀದಿಯಲ್ಲಿ ನಿಂತಿದ್ದಾರೆ. ಒಂದು ಕಡೆ ಸ್ಥಳೀಯರಿಗೆ ಉದ್ಯೋಗ ಕಲ್ಪಿಸಬೇಕು ಎನ್ನುವ ರಾಜ್ಯ ಸರಕಾರ ಮತ್ತೊಂದೆಡೆ ಅಸಹಕಾರ ನೀಡುತ್ತಿದೆ. ಪ್ರತಿಯೊಂದಕ್ಕೂ ಕೇಂದ್ರ ಸರಕಾರವನ್ನು ನಿಂದಿಸಿದರೆ ಉಪಯೋಗವಿಲ್ಲ. ಸಮಸ್ಯೆ ಬಗ್ಗೆ ಸಿಎಂ ಸಭೆ ಕರೆಯಲಿ. ಏನು ಸಮಸ್ಯೆ ಇದೆ ಅಂತಾ ಚರ್ಚೆ ಮಾಡೋಣ. ಸಮಸ್ಯೆ ಇದ್ದರೆ ನಾನು ಜವಾಬ್ದಾರಿ ತೆಗೆದುಕೊಳ್ಳುತ್ತೇನೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯಗೆ ಈ ಬಗ್ಗೆ ಪತ್ರ ಬರೆಯುತ್ತೇನೆ ಎಂದು ಕುಮಾರಸ್ವಾಮಿ ಅವರು ಹೇಳಿದರು.



**RNIL ಉದಾಹರಣೆ ಕೊಟ್ಟ ಕೇಂದ್ರ ಸಚಿವರು:**

ವಿಶಾಖಪಟ್ಟಣದ ರಾಷ್ಟ್ರೀಯ ಉಕ್ಕು ಕಾರ್ಖಾನೆ ಸಂಕಷ್ಟದಲ್ಲಿ ಇತ್ತು. ನಿರ್ವಹಣಾ ಬಂಡವಾಳ ಇಲ್ಲದೆ ಸೊರಗಿತ್ತು. ಏಕಾಏಕಿ 4500 ಕಾರ್ಮಿಕರನ್ನು ಕೆಲಸದಿಂದ ತೆಗೆದು ಹಾಕಲಾಗಿತ್ತು. ಆದರೆ, ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಹಾಗೂ ಆಂಧ್ರ ಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರ ಒತ್ತಾಸೆಯ ಮೇರೆಗೆ ಕೇವಲ ನಲವತ್ತೆಂಟು ಗಂಟೆಗಳ ಒಳಗಾಗಿ ಅಷ್ಟೂ ಕಾರ್ಮಿಕರನ್ನು ಮರು ನೇಮಕ ಮಾಡಿಕೊಳ್ಳಲಾಯಿತು. ನೆರೆ ರಾಜ್ಯದಲ್ಲಿ ನಮಗೆ ಇಂತಹ ಉತ್ತಮ ಸಹಕಾರ ಸಿಗುತ್ತಿದೆ. ಆದರೆ, ನಮ್ಮದೇ ರಾಜ್ಯ ಕರ್ನಾಟಕದಲ್ಲಿ ಸಹಕಾರ ಸಿಗುತ್ತಿಲ್ಲ. ಒಬ್ಬ ಕೇಂದ್ರ ಮಂತ್ರಿಯನ್ನು ನಡೆಸಿಕೊಳ್ಳುವ ರೀತಿಯೇ ಇದು ಎಂದು ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು.

**ಯಾರೂ ಬಂದು ರಾಜ್ಯದ ಅಭಿವೃದ್ಧಿ ಬಗ್ಗೆ ಚರ್ಚಿಸಿಲ್ಲ:**

ಹಾದಿಬೀದಿಯಲ್ಲಿ ಹೇಳಿಕೆ ನೀಡುತ್ತಾ ಹೋದರೆ ರಾಜ್ಯದ ಅಭಿವೃದ್ಧಿ ಆಗುತ್ತದೆಯೇ ರಾಜ್ಯ ಸರ್ಕಾರ ಚಿಲ್ಲರೆ ರಾಜಕಾರಣ ಮಾಡುವುದನ್ನು ಬಿಡಬೇಕು. ಇಲ್ಲಿ ರಾಜಕಾರಣ ಮುಖ್ಯವಲ್ಲ. ಅದೇನಿದ್ದರೂ ಚುನಾವಣೆಗೆ ಸೀಮಿತ. ಅಭಿವೃದ್ಧಿ ವಿಷಯದಲ್ಲಿ ರಾಜಕಾರಣ ಯಾಕೆ ಬೇಕು ಇಲ್ಲಿಯವರೆಗೂ ಒಬ್ಬರೂ ನನ್ನ ಬಳಿ ಬಂದು ರಾಜ್ಯದ ಅಭಿವೃದ್ಧಿ ಬಗ್ಗೆ ಚರ್ಚೆ ಮಾಡಿಲ್ಲ. ಎಂ.ಬಿ.ಪಾಟೀಲ್ ಒಬ್ಬರು ದೆಹಲಿಯ ನನ್ನ ಸಚಿವಾಲಯಕ್ಕೆ ಬಂದು ಕೈಗಾರಿಕೆ ಅಭಿವೃದ್ಧಿಯ ಬಗ್ಗೆ ಚರ್ಚೆ ನಡೆಸಿದ್ದು ಬಿಟ್ಟರೆ ಯಾರೊಬ್ಬರೂ ನನ್ನೊಂದಿಗೆ ರಾಜ್ಯದ ಬಗ್ಗೆ ಚರ್ಚೆ ಮಾಡಿಲ್ಲ. ಕುಮಾರಸ್ವಾಮಿ ಅವರು ಮೇಕೆದಾಟು ಯೋಜನೆಗೆ ಅನುಮತಿ ಕೊಡಿಸಲಿ ಎಂದು ಬೀದಿಯಲ್ಲಿ ಜಾಗಟೆ ಹೊಡೆಯುತ್ತಿದ್ದಾರೆ. ಹೀಗೆ ಮಾಡಿದರೆ ಮೇಕೆದಾಟುಗೆ ಅನುಮತಿ ದೊರೆಯುತ್ತದೆಯೇ ಎಂದು ಸಚಿವರು ಖಾರವಾಗಿ ಪ್ರಶ್ನಿಸಿದರು.

ದಯಮಾಡಿ ಇವರು ಚಿಲ್ಲರೆ ರಾಜಕಾರಣ ಬಿಡಬೇಕು. ಟೊಯೊಟಾ ಸೇರಿದಂತೆ ಅನೇಕ ಕೈಗಾರಿಕೆಗಳು ರಾಜ್ಯ ಬಿಟ್ಟು ಬೇರೆ ರಾಜ್ಯಗಳಿಗೆ ವಲಸೆ ಹೋಗುತ್ತಿವೆ. ಶಾಸಕ ರಾಜುಕಾಗೆ ಅಭಿವೃದ್ಧಿ ಅನುದಾನ ಬಗ್ಗೆ ಏನು ಹೇಳಿದ್ದಾರೆ. ಅರಣ್ಯ ಸಚಿವರು ಅವರ ಬಳಿ ಇರುವ ದಾಖಲೆಗಳನ್ನು ತೆಗೆದುಕೊಂಡು ಬರಲಿ. ನಾನು ಕುಳಿತುಕೊಳ್ಳುತ್ತೇನೆ. ಅವರೂ ಬರಲಿ, ಸಭೆಯಲ್ಲಿ ಎಲ್ಲಾ ಚರ್ಚೆಯಾಗಲಿ. ಸಭೆ ಯಾಕೆ ಕರೆಯಲಾಗುತ್ತಿಲ್ಲ. ಎಲ್ಲಾ ದಾಖಲೆ ಸಮೇತ ಚರ್ಚೆ ಮಾಡೋಣ. ಈಶ್ವರ್ ಖಂಡ್ರೆ ಬೋಗಸ್ ಹೇಳಿಕೆ ನೀಡುತ್ತಿದ್ದಾರೆ ಎಂದು ಕುಮಾರಸ್ವಾಮಿ ಅವರು ಕಿಡಿಕಾರಿದರು. ಮಾಧ್ಯಮಗೋಷ್ಠಿಯಲ್ಲಿ ವಿಧಾನ ಪರಿಷತ್ ಸದಸ್ಯರಾದ ಕೆ.ಎನ್.ತಿಪ್ಪೇಸ್ವಾಮಿ, ಟಿ.ಎ.ಶರವಣ, ಟಿ.ಎ.ಜವರಾಯಗೌಡ, ಜೆಡಿಎಸ್ ನಗರ ಘಟಕದ ಅಧ್ಯಕ್ಷ ಎಚ್.ಎಂ.ರಮೇಶ್ ಗೌಡ ಮುಂತಾದವರು ಉಪಸ್ಥಿತರಿದ್ದರು.

### ಅರಣ್ಯ ಸಚಿವರಿಂದ ಕ್ಷುಲ್ಲಕ ರಾಜಕಾರಣ

ಅರಣ್ಯ ಸಚಿವರು ಈ ಎರಡೂ ಸಂಸ್ಥೆಗಳ ಬಗ್ಗೆ ಸತ್ಯಕ್ಕೆ ದೂರವಾದ ವಿಷಯಗಳನ್ನು ದಿನನಿತ್ಯವೂ ಮಾಧ್ಯಮಗಳಿಗೆ ಹೇಳುತ್ತಾ ಜನರ ದಿಕ್ಕು ತಪ್ಪಿಸುತ್ತಿದ್ದಾರೆ. ಮೊದಲು ಸಚಿವರು ದಾಖಲೆಗಳನ್ನು ಓದಿ ಅರಿತುಕೊಳ್ಳಬೇಕು. ಆ ನಂತರ ಅವರು ಮಾತನಾಡಿದರೆ ಚೆನ್ನಾಗಿರುತ್ತದೆ. ಅದರ ಹೊರತಾಗಿ ರಾಜ್ಯ ಅಭಿವೃದ್ಧಿ ವಿಷಯದಲ್ಲಿ ಕ್ಷುಲ್ಲಕ ರಾಜಕಾರಣ ಮಾಡಿದರೆ ಅವರನ್ನು ಸಚಿವರು ಎಂದು ಕರೆಯಲಾಗುತ್ತದೆಯೇ ಎಂದು ಅವರು ಕಿಡಿಕಾರಿದರು.

# ರಾಮಾಯಣ ಭಾರತೀಯರ ಜೀವನಚರಿತ್ರೆ, ಸಂಸ್ಕೃತಿ ಪ್ರತಿಬಿಂಬಿಸುವ ಮಹಾಕಾವ್ಯ: ಎಚ್.ಸಿ ಮಹದೇವಪ್ಪ

**ಮೈಸೂರು, ಅ.17:** ರಾಮಾಯಣ, ಮಹಾಭಾರತ ಮಹಾಕಾವ್ಯಗಳು ಎಲ್ಲಾ ಕಾಲಘಟ್ಟ, ಪೀಳಿಗೆಗೆ ಅನ್ವಯ. ರಾಮಾಯಣವು ಭಾರತೀಯರ ಜೀವನಚರಿತ್ರೆಯನ್ನು ಮತ್ತು ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಮಹಾಕಾವ್ಯವಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ ಮಹದೇವಪ್ಪ ಅವರು ಹೇಳಿದರು.



ಇಂದು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಮೈಸೂರು ನಗರ ಮತ್ತು ತಾಲ್ಲೂಕು ನಾಯಕ ಜನಾಂಗದ ಸಂಘಗಳ ಸಂಯುಕ್ತ ಆಶ್ರಯದಲ್ಲಿ ಕರ್ನಾಟಕ ಕಲಾಮಂದಿರದಲ್ಲಿ ನಡೆದ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಬಾರಿ ಮೈಸೂರಿನಲ್ಲಿ ಮಹರ್ಷಿ ವಾಲ್ಮೀಕಿಯವರ ಪ್ರತಿಮೆಯನ್ನು ನಿರ್ಮಿಸಲು ಶಂಕು ಸ್ಥಾಪನೆ ಕಾರ್ಯಕ್ರಮವನ್ನು ನೆರವೇರಿಸಿರುವುದು ಸಂತಸವಾಗಿದೆ. ವಾಲ್ಮೀಕಿಯು ಕವಿಕುಲದ ಗುರುವಾಗಿ ಹಲವಾರು ಕವಿಗಳಿಗೆ ಮತ್ತು ಸಾಹಿತಿಗಳಿಗೆ ಸ್ಫೂರ್ತಿಯ ಸೆಲೆಯಾಗಿದ್ದಾರೆ. ಇಂದಿಗೂ ಸಹ ರಾಮಾಯಣ ಮಹಾಕಾವ್ಯವು ಜಗತ್ತಿನಲ್ಲಿ ಸತ್ವಯುತವಾದ ಮತ್ತು ಮೌಲ್ಯಯುತವಾದ ಸಾಹಿತ್ಯ ಸೃಷ್ಟಿಗೆ ಪ್ರೇರಣೆಯಾಗಿದೆ ಎಂದರು.

ಪ್ರಪಂಚದಲ್ಲಿರುವ ಎಲ್ಲಾ ದೇಶಗಳಲ್ಲೂ ಮಹಾಕಾವ್ಯಗಳು ಸೃಷ್ಟಿಯಾಗಿಲ್ಲ. ಗ್ರೀಕ್, ರೋಮ್ ಬಿಟ್ಟರೆ ನಮ್ಮ ದೇಶದಲ್ಲಿ ಮಾತ್ರ ಮಹಾಕಾವ್ಯಗಳು ಕಾಣಿಸಿಕೊಳ್ಳಲು ಸಾಧ್ಯ. ರಾಮಾಯಣ, ಮಹಾಭಾರತ ಕಾವ್ಯಗಳು ಕಟ್ಟಿಕೊಡುವ ದೃಷ್ಟಿಕೋನಗಳೇ ಬೇರೆ. ಈ ಮಹಾಕಾವ್ಯಗಳು ಸಾರ್ವಕಾಲಿಕ ಮೌಲ್ಯಗಳನ್ನು ಪ್ರತಿನಿಧಿಸುವ ಕೃತಿಗಳಾಗಿವೆ. ರಾಮಾಯಣದ ಪಾತ್ರಗಳು, ದೃಶ್ಯಗಳು ಇವತ್ತಿಗೂ ನಮ್ಮನ್ನು ಕಾಡುತ್ತವೆ.

ಇಂದು ವಾಲ್ಮೀಕಿ ಸಮುದಾಯದಲ್ಲಿ ಅನೇಕರು ತಮ್ಮ ಭೂಮಿಗಳನ್ನು ಮಾರಿಕೊಳ್ಳುತ್ತಿದಾರೆ. ವ್ಯವಸಾಯ ಮತ್ತು ವ್ಯವಸಾಯೇತರ ಚಟುವಟಿಕೆಗಳು ಕ್ಷೀಣಿಸುತ್ತಿದೆ ಎಂದು ಬೇಸರ ವ್ಯಕ್ತ ಪಡಿಸಿದರು.

ಬಾಬಾಸಾಹೇಬ್ ಅಂಬೇಡ್ಕರ್ ಅವರು ಹೇಳಿರುವಂತೆ ನಮ್ಮ ಸಮಸ್ಯೆಗಳ ಬೀಗದ ಕೈ ಇರುವುದು ರಾಜಕೀಯದಲ್ಲಿ ಎಂಬಂತೆ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಇಂದು 7% ಜನರಿಗೆ 9 ಸಾವಿರ ಕೋಟಿಯನ್ನು ವಾಲ್ಮೀಕಿ ಸಮುದಾಯದ ಅಭಿವೃದ್ಧಿಗಾಗಿ ಮೀಸಲಿಡಲಾಗಿದೆ . ಎಸ್‌ಸಿ, ಎಸ್‌ಟಿ ,ಅಲ್ಪ ಸಂಖ್ಯಾತರು, ಹಿಂದುಳಿದ ವರ್ಗಗಳಿಗೆ ಮೀಸಲಾತಿ ನೀಡಿ, ಶೋಷಿತ ಸಮಾಜವನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ನಿಟ್ಟಿನಲ್ಲಿ ನಮ್ಮ ಸಂವಿಧಾನವನ್ನು ಬಲಪಡಿಸುವಂತಹ ಕಾರ್ಯ ನಮ್ಮ ಸರ್ಕಾರದಲ್ಲಿ ಆಗುತ್ತಿದೆ ಎಂದರು.

'ರಾಮಾಯಣ' ದೇಶಕ್ಕೆ ದೊರೆತ ಮಹಾಕಾವ್ಯ. ಮಹರ್ಷಿ ವಾಲ್ಮೀಕಿಯವರು ತಮ್ಮ ರಾಮಾಯಣ ಮಹಾಕಾವ್ಯದಲ್ಲಿ ಮನುಷ್ಯನ ಬದುಕಿನ ಎಲ್ಲಾ ಪರಿಪಾಲನೆಯನ್ನು ವಿಸ್ತಾರವಾಗಿ ತಿಳಿಸಿಕೊಟ್ಟಿದ್ದಾರೆ. ಪ್ರತಿಯೊಬ್ಬರ ಮನೆಯಲ್ಲಿಯೂ ರಾಮಾಯಣ ಇರಬೇಕು. ರಾಮಾಯಣದ ಒಟ್ಟಾರೆ ಸಾರಾಂಶವನ್ನು ಪ್ರತಿಯೊಬ್ಬರೂ ತಿಳಿದು ಕೊಳ್ಳಬೇಕು. ಈ ನಿಟ್ಟಿನಲ್ಲಿ ಸಂವಿಧಾನ ಕೊಟ್ಟಂತಹ ಎಲ್ಲಾ ಸೌಲಭ್ಯಗಳು ಎಲ್ಲಾ ಎಸ್ ಸಿ, ಎಸ್ ಟಿ ಸಮುದಾಯದವರಿಗೆ ಸಿಗಬೇಕು. 'ಒಗ್ಗಟ್ಟಿನಲ್ಲಿ ಬಲವಿದೆ' ಎಂಬಂತೆ ಎಲ್ಲರೂ ಸಮಾನತೆಯಿಂದ ನಡೆದು ಸಮಸಮಾಜದ ನಿರ್ಮಾಣದಲ್ಲಿ ಪಾಲ್ಗೊಳ್ಳಬೇಕು ಎಂದರು.

ಇಂದು ವಾಲ್ಮೀಕಿ ರಾಮಾಯಣದ ಆಧಾರದ ಮೇಲೆ ವಿವಿಧ ಭಾಷೆಗಳಲ್ಲಿ ಕಾವ್ಯ, ನಾಟಕ, ಕಾದಂಬರಿ ಮತ್ತು ಕತೆಗಳನ್ನು ಅನೇಕರು ರಚಿಸಿದ್ದಾರೆ. ರಾಮಾಯಣದಂತಹ ಮಹಾಕಾವ್ಯ ಮತ್ತು ವಾಲ್ಮೀಕಿಯಂತಹ ಮಹಾಕವಿ ನಮಗೆ ದೊರೆತಿದ್ದು ಭುವನದ ಭಾಗ್ಯ. ಹಾಗಾಗಿ, ಮನುಷ್ಯ ಅಳಿದರೂ ಈ ಮಹಾಕಾವ್ಯಗಳು ಅಳಿಯುವುದಿಲ್ಲ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಯಲ್ಲಿ ಅತಿಹೆಚ್ಚು ಅಂಕ ಪಡೆದ ಮಹರ್ಷಿ ವಾಲ್ಮೀಕಿ ಸಮುದಾಯದ ವಿದ್ಯಾರ್ಥಿ ಕು.ಲಾವಣ್ಯ ಅವರಿಗೆ ಸರ್ಕಾರದಿಂದ ಒಂದು ಲಕ್ಷ ಪ್ರೋತ್ಸಾಹಧನದ ಚೆಕ್ ವಿತರಿಸಿ, ಸಚಿವರು ಸೇರಿದಂತೆ ಶಾಸಕರು ಸನ್ಮಾನವನ್ನು ಮಾಡಿದರು. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ನ ಶಾಸಕರಾದ ಜಿಟಿ ದೇವೇಗೌಡ, ಕೆ ಹರೀಶ್ ಗೌಡ, ಸಿ. ಎನ್. ಮಂಜೇಗೌಡ, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ, ಜಿಲ್ಲಾ ಪಂಚಾಯತ್ ಸಿಇಒ ಕೆ. ಎಂ. ಗಾಯತ್ರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್ ಎನ್ ಮತ್ತಿತರರು ಭಾಗಿಯಾಗಿದ್ದರು.

# ವಿಧಾನಸಭಾ ಉಪಚುನಾವಣೆ: ಗರಿಗೆದರಿದ ಚಟುವಟಿಕ

**ಬೆಂಗಳೂರು,ಅ.17:** ರಾಜ್ಯದ ಚನ್ನಪಟ್ಟಣ, ಶಿಗ್ಗಾವಿ ಹಾಗೂ ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ದಿನಾಂಕ ಘೋಷಣೆಯಾಗುತ್ತಿದ್ದಂತೆಯೇ ಆಡಳಿತಾರೂಢ ಕಾಂಗ್ರೆಸ್, ವಿರೋಧ ಪಕ್ಷವಾದ ಬಿಜೆಪಿ–ಜೆಡಿಎಸ್‌ನಲ್ಲಿ ಚಟುವಟಿಕೆಗಳು ಗರಿಗೆದರಿದ್ದು, ಈ ಮೂರೂ ಕ್ಷೇತ್ರಗಳಿಗೆ ಅಭ್ಯರ್ಥಿಗಳ ಆಯ್ಕೆ ಬಗ್ಗೆ ಸಭೆ ಸಮಾಲೋಚನೆಗಳು ನಡೆದಿದ್ದು, ಮೂರು ಪಕ್ಷಗಳಿಗೂ ಕಗ್ಗಂಟಾಗಿದೆ. ಮೂರೂ ರಾಜಕೀಯ ಪಕ್ಷಗಳು ಅಭ್ಯರ್ಥಿ ಆಯ್ಕೆಯತ್ತ ಚಿತ್ತ ಹರಿಸಿದ್ದು, ಇನ್ನು 2–3 ದಿನಗಳಲ್ಲಿ ಅಭ್ಯರ್ಥಿಗಳ ಆಯ್ಕೆ ಅಂತಿಮವಾಗುವ ಸಾಧ್ಯತೆಗಳು ಇವೆ. ಬರುವ ನವೆಂಬರ್ 13 ರಂದು ಉಪಚುನಾವಣೆ ನಡೆಯಲಿದ್ದು, ಈ ಮೂರೂ ಕ್ಷೇತ್ರಗಳ ಗೆಲುವು ಕಾಂಗ್ರೆಸ್, ಬಿಜೆಪಿ,ಜೆಡಿಎಸ್ ಮೈತ್ರಿಕೂಟಗಳಿಗೆ ಪ್ರತಿಷ್ಠೆಯಾಗಿದೆ. ಹಾಗಾಗಿ ಗೆಲ್ಲುವ ಅಭ್ಯರ್ಥಿ ಆಯ್ಕೆಗೆ ಮೂರೂ ಪಕ್ಷಗಳಲ್ಲೂ ಸಮಾಲೋಚನೆಗಳು ನಡೆದಿವೆಯಾದರೂ ಟಿಕೆಟ್ ಆಕಾಂಕ್ಷಿಗಳ ಸಂಖ್ಯೆ ಹೆಚ್ಚಿರುವುದು ಅಭ್ಯರ್ಥಿ ಆಯ್ಕೆ ಕಗ್ಗಂಟಾಗಿದೆ. ಈ ಮೂರೂ ಉಪಚುನಾವಣೆಗಳಲ್ಲಿ ಚನ್ನಪಟ್ಟಣ ಕ್ಷೇತ್ರ ಪ್ರತಿಷ್ಠೆಯ ಕಣವಾಗಿದ್ದು, ಈ ಕ್ಷೇತ್ರದ ಗೆಲುವು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಹಾಗೂ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರಿಗೆ ಪ್ರತಿಷ್ಠೆಯಾಗಿದ್ದು, ಇಬ್ಬರ ನಡುವೆ ಜಿದ್ದಾಜಿದ್ದಿಗೆ ಈ ಕ್ಷೇತ್ರ ಕಾರಣವಾಗಿದೆ. ಹಾಗಾಗಿ, ಇಬ್ಬರು ಗೆಲ್ಲಲೇಬೇಕು ಎಂಬ ಹಟಕ್ಕೆ ಬಿದ್ದಿದ್ದಾರೆ. ಹಾಗಾಗಿ, ಇಲ್ಲಿ ಅಭ್ಯರ್ಥಿಯಾಗಲು ಭಾರಿ ಪೈಪೋಟಿಯೇ ಇದೆ. ಕಾಂಗ್ರೆಸ್ನಿಂದ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸಹೋದರ ಹಾಗೂ ಮಾಜಿ ಸಂಸದ ಡಿ.ಕೆ ಸುರೇಶ್ ಇಲ್ಲವೇ ಮುಖಂಡ ರಘುನಂದನ್ ರಾಮಣ್ಣ ಅಭ್ಯರ್ಥಿಯಾಗುವ ಸಾಧ್ಯತೆಗಳಿವೆ. ಬಿಜೆಪಿ–ಜೆಡಿಎಸ್ ಮೈತ್ರಿಕೂಟದ ಟಿಕೆಟ್ ಆಕಾಂಕ್ಷಿಯಾಗಿರುವ ಸಿ.ಪಿ ಯೋಗೇಶ್ವರ್ ಅವರಿಗೆ ಟಿಕೆಟ್ ಸಿಗದೆ ಹೋದರೆ ಅವರನ್ನು ಕಾಂಗ್ರೆಸ್‌ಗೆ ಎಳೆದು ಟಿಕೆಟ್ ನೀಡಿ ಗೆಲ್ಲಿಸಿಕೊಂಡು ಬರುವ ಲೆಕ್ಕಾಚಾರವು ಕಾಂಗ್ರೆಸ್ನಲ್ಲಿ ನಡೆದಿದೆ. ಈ ಕ್ಷೇತ್ರದಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿಯಾಗಿ ಎಚ್.ಡಿ ಕುಮಾರಸ್ವಾಮಿ ಅವರ ಪುತ್ರ ನಿಖಿಲ್ ಕುಮಾರಸ್ವಾಮಿ ಕಣಕ್ಕಿಳಿಯುವ ಸಾಧ್ಯತೆಗಳು ಹೆಚ್ಚಿದ್ದು, ಸಿ.ಪಿ.ಯೋಗೇಶ್ವರ್ ಅವರಿಗೆ ಟಿಕೆಟ್ ಸಿಗುವ ಸಾಧ್ಯತೆಗಳು ಕಡಿಮೆ. ಈ ಕ್ಷೇತ್ರದಲ್ಲಿ ಜೆಡಿಎಸ್ನ ಕುಮಾರಸ್ವಾಮಿಯವರು ಗೆದ್ದಿದ್ದರು. ಹಾಗಾಗಿ, ಈ ಕ್ಷೇತ್ರವನ್ನು ಜೆಡಿಎಸ್ಗೆ ಬಿಟ್ಟುಕೊಡಬೇಕು ಎಂದು ಜೆಡಿಎಸ್ ಮುಖಂಡರುಗಳು ಬಿಜೆಪಿ ವರಿಷ್ಠರಿಗೆ ಮನವಿ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಜೆಡಿಎಸ್ ನಿಖಿಲ್ ಅಭ್ಯರ್ಥಿಯಾಗುವ ಸಾಧ್ಯತೆಗಳು ಹೆಚ್ಚು, ಟಿಕೆಟ್ ಸಿಗದೆಹೋದರೆ ಸಿ.ಪಿ. ಯೋಗೇಶ್ವರ್ ಪಕ್ಷೇತರರಾಗಿ ಕಣಕ್ಕಿಳಿಯುವ ಸಾಧ್ಯತೆಗಳು ಹೆಚ್ಚಿವೆ. ಹಾಗಾಗಿ, ಕಾಂಗ್ರೆಸ್‌ಗಿಂತ ಬಿಜೆಪಿ–ಜೆಡಿಎಸ್‌ಗೆ ಇಲ್ಲಿ ಅಭ್ಯರ್ಥಿ ಆಯ್ಕೆ ಭಾರಿ ಸವಾಲಾಗಿದೆ.

### ಸಂಡೂರಿನಲ್ಲೂ ಟಿಕೆಟ್‌ಗೆ ಪೈಪೋಟಿ

ಸಂಡೂರು ಕ್ಷೇತ್ರದ ಟಿಕೆಟ್‌ಗೂ ಕಾಂಗ್ರೆಸ್‌ನಲ್ಲಿ ಭಾರಿ ಪೈಪೋಟಿಯೇ ಇದ್ದು, ಇಲ್ಲಿ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಗೆದ್ದು ನಂತರ ನಡೆದ ಲೋಕಸಭಾ ಚುನಾವಣೆಯಲ್ಲಿ ಬಳ್ಳಾರಿ ಸಂಸದರಾಗಿರುವ ಆಯ್ಕೆಯಾಗಿರುವ ತುಕಾರಾಂ ತಮ್ಮ ಪತ್ನಿ ಇಲ್ಲವೆ ಮಗಳಿಗೆ ಟಿಕೆಟ್ ನೀಡಬೇಕು ಎಂದು ಬೇಡಿಕೆ ಇಟ್ಟಿದ್ದಾರೆ. ಇನ್ನೂ ಹಲವು ಮುಖಂಡರು ಟಿಕೆಟ್‌ಗಾಗಿ ಪ್ರಯತ್ನ ನಡೆಸಿದ್ದಾರೆ. ಈ ಕ್ಷೇತ್ರ ಪರಿಶಿಷ್ಟ ವರ್ಗದ ಮೀಸಲು ಕ್ಷೇತ್ರವಾಗಿದ್ದು, ಈ ಕ್ಷೇತ್ರದ ಮೇಲೆ ಸಚಿವ ಸಂತೋಷ್ ಲಾಡ್ ಹಿಡಿತ ಹೊಂದಿದ್ದು, ಅವರು ಹೇಳುವ ವ್ಯಕ್ತಿಗೆ ಟಿಕೆಟ್ ಸಿಗಲಿದೆ. ಈ ಕ್ಷೇತ್ರದಿಂದ ಬಿಜೆಪಿಯಿಂದ ಎಸ್ಟಿ ಮೋರ್ಚಾದ ಅಧ್ಯಕ್ಷ ಬಂಗಾರು ಹನುಮಂತು, ಮಾಜಿ ಸಂಸದ ದೇವೇಂದ್ರಪ್ಪ ಪುತ್ರ ಅಣ್ಣಪ್ಪ, ಮಾಜಿ ಮೇಯರ್ ದಿವಾಕರ್ ಸೇರಿದಂತೆ ಹಲವರು ಟಿಕೆಟ್‌ಗೆ ಪ್ರಯತ್ನ ನಡೆಸಿದ್ದಾರೆ. ಹಾವೇರಿ ಜಿಲ್ಲೆಯ ಶಿಗ್ಗಾವಿ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಟಿಕೆಟ್‌ಗೂ ಕಾಂಗ್ರೆಸ್ ಮತ್ತು ಬಿಜೆಪಿಯಲ್ಲಿ ಪೈಪೋಟಿ ಇದ್ದು, ಈ ಕ್ಷೇತ್ರದಲ್ಲಿ ಮುಸ್ಲಿಂ ಸಮುದಾಯದವರು ಹೆಚ್ಚಿರುವುದರಿಂದ ಮುಸ್ಲಿಂ ಸಮುದಾಯಕ್ಕೆ ಟಿಕೆಟ್ ನೀಡಬೇಕು ಎಂಬ ಒತ್ತಾಯವೂ ಕಾಂಗ್ರೆಸ್‌ನಲ್ಲಿ ಕೇಳಿ ಬಂದಿದೆ.

ಕಳೆದ 5 ಚುನಾವಣೆಗಳಲ್ಲಿ ಕಾಂಗ್ರೆಸ್‌ನಿಂದ ಮುಸ್ಲಿಮರೇ ಅಭ್ಯರ್ಥಿಯಾಗಿದ್ದಾರೆ. ಆದರೆ, ಗೆಲುವು ಸಾಧ್ಯವಾಗಿಲ್ಲ. ಹಾಗಾಗಿ ಈ ಬಾರಿ ಲಿಂಗಾಯತ ಸಮುದಾಯದವರಿಗೆ ಟಿಕೆಟ್ ಕೊಡಿ ಎಂಬ ಬೇಡಿಕೆಯೂ ಕಾಂಗ್ರೆಸ್‌ನಲ್ಲಿ ಇದೆ. ಇಲ್ಲಿ ಕಾಂಗ್ರೆಸ್ನಿಂದ ಮಾಜಿ ಸಚಿವ ಅಜ್ಜಂಪಿರ ಖಾದ್ರಿ, ಯೂಸೂಫ್ಖಾನ್,ಸೋಮಣ್ಣ ಬೇವಿನ ಮರದ, ಆನಂದ್ಗಡ್ಡದೇವರ ಮಠ, ನೀಗಾರ ಇವರುಗಳು ಕೈ ಟಿಕೆಟ್ ಆಕಾಂಕ್ಷಿಗಳಾಗಿದ್ದಾರೆ. ಬಿಜೆಪಿಯಿಂದಲೂ ಟಿಕೆಟ್‌ಗೆ ಪೈಪೋಟಿ ಇದ್ದು, ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಅವರ ಪುತ್ರ ಅಭ್ಯರ್ಥಿಯಾಗಬಹುದು ಎಂಬ ಸುದ್ದಿಗಳಿದ್ದರೂ ಅವರ ಪುತ್ರ ನಾವು ಟಿಕೆಟ್ ಆಕಾಂಕ್ಷಿಯಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಮಾಜಿ ಸಚಿವ ಮುರುಗೇಶ್‌ನಿರಾಣಿ ಸೇರಿದಂತೆ ಹಲವರು ಟಿಕೆಟ್‌ಗೆ ಪ್ರಯತ್ನ ನಡೆಸಿದ್ದಾರೆ. ಇನ್ನು 2–3 ದಿನಗಳಲ್ಲಿ ಈ ಮೂರು ವಿಧಾನಸಭಾ ಕ್ಷೇತ್ರಗಳಲ್ಲಿ ಯಾವ ಪಕ್ಷದಿಂದ ಯಾರು ಕಣಕ್ಕಿಳಿಯುತ್ತಾರೆ ಎಂಬ ಸ್ಪಷ್ಟ ಚಿತ್ರಣ ಸಿಗಲಿದೆ.



ಪ್ರಧಾನಿ ನರೇಂದ್ರ ಮೋದಿ ಅವರು ಗುರುವಾರ ನವದೆಹಲಿಯಲ್ಲಿ ಅಂತಾರಾಷ್ಟ್ರೀಯ ಅಭಿಧಮ್ಮ ದಿವಸ್ ಆಚರಣೆಯಲ್ಲಿ ಪಾಲ್ಗೊಂಡರು.

# ಜಮ್ಮು-ಕಾಶ್ಮೀರಕ್ಕೆ ರಾಜ್ಯ ಸ್ಥಾನಮಾನ: ಸುಪ್ರೀಂನಲ್ಲಿ ವಿಚಾರಣೆ

**ನವದೆಹಲಿ,** ಅ. 17: ಜಮ್ಮು ಕಾಶ್ಮೀರಕ್ಕೆ ಕಾಲಮಿತಿಯೊಳಗೆ ರಾಜ್ಯದ ಸ್ಥಾನಮಾನವನ್ನು ಮರುಸ್ಥಾಪಿಸಲು ಕೋರಿ ಸಲ್ಲಿಸಲಾದ ಅರ್ಜಿಯನ್ನು ಪರಿಗಣಿಸುವುದಾಗಿ ಸುಪ್ರೀಂ ಕೋರ್ಟ್ ಗುರುವಾರ ಹೇಳಿದೆ. ಜಮ್ಮು ಕಾಶ್ಮೀರದಲ್ಲಿ ಶಿಕ್ಷಣ ತಜ್ಞ ಜಹೂರ್ ಅಹ್ಮದ್ ಭಟ್ ಮತ್ತು ಸಾಮಾಜಿಕ-ರಾಜಕೀಯ ಹೋರಾಟಗಾರ ಖುರ್ಷೈದ್ ಅಹ್ಮದ್ ಮಲಿಕ್ ಅವರು ಈ ಬಗ್ಗೆ ಹೊಸ ಅರ್ಜಿಯನ್ನು ಸಲ್ಲಿಸಿದ್ದಾರೆ. ಅರ್ಜಿದಾರರ ಪರ ವಾದ ಮಂಡಿಸಿದ ಹಿರಿಯ ವಕೀಲ ಗೋಪಾಲ್ ಶಂಕರನಾರಾಯಣನ್ ಅವರು ಭಾರತದ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಡಿ ವೈ ಚಂದ್ರಚೂಡ್ ಮತ್ತು ನ್ಯಾಯಮೂರ್ತಿಗಳಾದ ಜೆ ಬಿ ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರನ್ನೊಳಗೊಂಡ ಪೀಠಕ್ಕೆ ಮನವಿ ಸಲ್ಲಿಸಿದ್ದು ತುರ್ತು ವಿಚಾರಣೆಯ ಅಗತ್ಯವಿದೆ ಎಂದು ಹೇಳಿದ್ದಾರೆ.



ರಾಜ್ಯ ಸ್ಥಾನಮಾನವನ್ನು ನೀಡುವ ಬಗ್ಗೆ ಸಲ್ಲಿಕೆಯಾದ ಎಂಎ (ವಿವಿಧ ಅರ್ಜಿ) ಇದೆ. ಈ ಬಗ್ಗೆ (ಕಳೆದ ವರ್ಷದ ತೀರ್ಪಿನಲ್ಲಿ) ಸಮಯಕ್ಕೆ ಬದ್ಧವಾಗಿರಬೇಕು ಎಂದು ಹೇಳಲಾಗಿದೆ ಎಂದು ಹಿರಿಯ ವಕೀಲರು ಹೇಳಿದ್ದಾರೆ.

ಈ ವೇಳೆ ಮಾತನಾಡಿದ ಸಿಜೆಐ, ನಾನು ಅದನ್ನು ನಿಭಾಯಿಸುತ್ತೇನೆ ಎಂದು ಹೇಳಿದ್ದಾರೆ. 2023ರ ಡಿಸೆಂಬರ್ 11 ರಂದು, ಹಿಂದಿನ ಜಮ್ಮು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನವನ್ನು ನೀಡಿದ್ದ ಸಂವಿಧಾನದ 370 ನೇ ವಿಧಿಯನ್ನು ಹಿಂತೆಗೆದುಕೊಳ್ಳುವುದನ್ನು ಸರ್ವಾನುಮತದಿಂದ ಎತ್ತಿಹಿಡಿದಿತ್ತು ಮತ್ತು ಸೆಪ್ಟೆಂಬರ್ 2024 ರೊಳಗೆ ಅಲ್ಲಿ ವಿಧಾನಸಭಾ ಚುನಾವಣೆಗಳನ್ನು ನಡೆಸುವಂತೆ ಆದೇಶಿಸಿತು. ಅದೇ ವೇಳೆ ಜಮ್ಮು ಕಾಶ್ಮೀರದ ರಾಜ್ಯತ್ವವನ್ನು ಆದಷ್ಟು ಬೇಗ? ಮರುಸ್ಥಾಪಿಸಬೇಕು ಎಂದು ನ್ಯಾಯಾಲಯ ಹೇಳಿತ್ತು.

# ಅಸ್ಸಾಂನಲ್ಲಿ ವಲಸಿಗರಿಗೆ ಪೌರತ್ವ ಸೆಕ್ಷನ್ 6A ಸಿಂಧುತ್ವ ಎತ್ತಿಹಿಡಿದ ಸುಪ್ರೀಂಕೋರ್ಟ್

**ನವದೆಹಲಿ ಅ. 17:** ಜನವರಿ 1, 1966 ಮತ್ತು ಮಾರ್ಚ್ 25, 1971 ರ ನಡುವೆ ಅಸ್ಸಾಂಗೆ ಪ್ರವೇಶಿಸಿದ ವಲಸಿಗರಿಗೆ ಪೌರತ್ವವನ್ನು ನೀಡುವ ಪೌರತ್ವ ಕಾಯಿದೆ ಮತ್ತು 1955 ರ ಸೆಕ್ಷನ್ 6ಎ ನ ಸಾಂವಿಧಾನಿಕ ಸಿಂಧುತ್ವವನ್ನು 4:1 ಬಹುಮತದಿಂದ ಸುಪ್ರೀಂ ಕೋರ್ಟ್ ಎತ್ತಿಹಿಡಿದಿದೆ. ಮುಖ್ಯ ನ್ಯಾ. ಡಿ.ವೈ ಚಂದ್ರಚೂಡ್ ಮತ್ತು ಇತರ ಮೂವರು ನ್ಯಾಯಾಧೀಶರು ಈ ನಿಬಂಧನೆಯ ಸಿಂಧುತ್ವವನ್ನು ಎತ್ತಿಹಿಡಿದರು, ನ್ಯಾ. ಪರ್ದಿವಾಲಾ ಅವರು ಅಸಮ್ಮತಿ ವ್ಯಕ್ತಪಡಿಸಿದರು. ಬಾಂಗ್ಲಾದೇಶದ ರಚನೆಯ ನಂತರ ಅಕ್ರಮ ವಲಸೆ ಸಮಸ್ಯೆಗೆ ಅಸ್ಸಾಂ ಒಪ್ಪಂದವು ರಾಜಕೀಯ ಪರಿಹಾರವಾಗಿದೆ ಮತ್ತು ಸೆಕ್ಷನ್ 6ಎ ಶಾಸಕಾಂಗ ಪರಿಹಾರವಾಗಿದೆ. ಬಹುಮತದ ತೀರ್ಪು ಮಾರ್ಚ್ 25, 1971ರ ಕಟ್-ಆಫ್ ದಿನಾಂಕವು ತರ್ಕಬದ್ಧವಾಗಿದೆ, ಬಾಂಗ್ಲಾದೇಶ ವಿಮೋಚನಾ ಯುದ್ಧವು ಕೊನೆಗೊಂಡ ದಿನಾಂಕವಾಗಿದ್ದರಿಂದ ಇದು ಮಾನ್ಯವಾಗಿದೆ ಎಂದು ಸಿಜೆಐ ಡಿವೈ ಚಂದ್ರಚೂಡ್ ಹೇಳಿದರು. ಅಸ್ಸಾಂ ಒಪ್ಪಂದವು ಅಕ್ರಮ ವಲಸೆ ಸಮಸ್ಯೆಗೆ ರಾಜಕೀಯ ಪರಿಹಾರವಾಗಿದೆ ಮತ್ತು ಸೆಕ್ಷನ್ 6ಎ ಶಾಸಕಾಂಗ ಪರಿಹಾರವಾಗಿದೆ.

ಸೆಕ್ಷನ್ 6ಎ ಜಾರಿಗೊಳಿಸಲು ಸಂಸತ್ತಿಗೆ ಶಾಸಕಾಂಗದ ಅಧಿಕಾರವಿದೆ ಎಂದು ನಾಲ್ವರು ನ್ಯಾಯಾಧೀಶರು ಬಹುಮತದ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಸ್ಥಳೀಯ ಜನಸಂಖ್ಯೆಯನ್ನು ರಕ್ಷಿಸುವ ಅಗತ್ಯದೊಂದಿಗೆ ಮಾನವೀಯ ಕಾಳಜಿಯಿಂದ 6ಎ ಅನ್ನು ಜಾರಿಗೊಳಿಸಲಾಗಿದೆ ಎಂದು ಕೋರ್ಟ್ ತನ್ನ ಆದೇಶದಲ್ಲಿ ಹೇಳಿದೆ. ಜನವರಿ 1, 1966 ರ ದಿನಾಂಕದ ಮೊದಲು ಅಸ್ಸಾಂಗೆ ಪ್ರವೇಶಿಸಿದ ವಲಸಿಗರನ್ನು ಭಾರತೀಯ ಪ್ರಜೆಗಳೆಂದು ಪರಿಗಣಿಸಲಾಗುತ್ತದೆ. ಜನವರಿ 1, 1966 ಮತ್ತು ಮಾರ್ಚ್ 25, 1971 ರ ನಡುವೆ ಅಸ್ಸಾಂಗೆ ಪ್ರವೇಶಿಸಿದ ವಲಸಿಗರು ಭಾರತೀಯ ಪೌರತ್ವವನ್ನು ಪಡೆಯಲು




ಅರ್ಹರಾಗಿರುತ್ತಾರೆ. ಮಾರ್ಚ್ 25, 1971 ನಂತರ ಅಸ್ಸಾಂಗೆ ಪ್ರವೇಶಿಸಿದ ವಲಸಿಗರನ್ನು ಪತ್ತೆಹಚ್ಚಲು, ಬಂಧಿಸಲು ಮತ್ತು ಗಡಿಪಾರು ಅರ್ಹವಾಗಿದೆ ಎಂದು ನ್ಯಾ. ಸೂರ್ಯಕಾಂತ್ ಸ್ಪಷ್ಟಪಡಿಸಿದರು. ನ್ಯಾಯಮೂರ್ತಿ ಪರ್ದಿವಾಲಾ ಅವರು ತಮ್ಮ ಭಿನ್ನಾಭಿಪ್ರಾಯದ ತೀರ್ಪಿನಲ್ಲಿ ಸೆಕ್ಷನ್ 6ಎ ಅಸಂವಿಧಾನಿಕ ಎಂದು ಹೇಳಿದರು. ಸೆಕ್ಷನ್ 6ಎ ಸಮಯದೊಂದಿಗೆ ಅಸಂವಿಧಾನಿಕತೆಯಿಂದ ಕೂಡಿದೆ ಎಂದು ಅವರು ಹೇಳಿದರು. 1966 ರಿಂದ 1971 ರವರೆಗೆ ಒಂದು ಶಾಸನಬದ್ಧ ವರ್ಗವನ್ನು ರಚಿಸಲಾಗಿದೆ ಎಂಬ ಅಂಶವು ಕಠಿಣ ಷರತ್ತಿಗೆ ಒಳಪಟ್ಟಿರುತ್ತದೆ (10 ವರ್ಷಗಳವರೆಗೆ ಯಾವುದೇ ಮತದಾನದ ಹಕ್ಕುಗಳಿಲ್ಲ) ಪೌರತ್ವವನ್ನು ನೀಡುವುದು ವಾಸ್ತವವಾಗಿ ಅಸ್ಸಾಂ ಜನರನ್ನು ಸಮಾಧಾನಪಡಿಸಲು ಅಂತಹ ಸೇರ್ಪಡೆಯು ಆಗ ಮುಂಬರುವ ದಿನಗಳಲ್ಲಿ ಪರಿಣಾಮ ಬೀರುವುದಿಲ್ಲ ಎಂದರು.

**ಹಿನ್ನಲೆ :** ಮಾರ್ಚ್ 26, 1971 ರಂದು ಪಾಕಿಸ್ತಾನದಿಂದ ಬಾಂಗ್ಲಾದೇಶವನ್ನು ಬೇರ್ಪಡಿಸಿದ ನಂತರ ಕಠಿಣ ವಲಸೆ ನಿಯಂತ್ರಣಗಳ ಬೇಡಿಕೆಯು ತೀವ್ರಗೊಂಡಿತು. ವಿದ್ಯಾರ್ಥಿ ಸಂಘಟನೆಗಳು, ಮುಖ್ಯವಾಗಿ ಆಲ್ ಅಸ್ಸಾಂ ವಿದ್ಯಾರ್ಥಿಗಳ ಒಕ್ಕೂಟ ಮತ್ತು ಅಸ್ಸಾಂ ಗನ್ ಸಂಗ್ರಾಮ್ ಪರಿಷತ್, ಬಾಂಗ್ಲಾದೇಶಿಗಳ ಹೆಚ್ಚುತ್ತಿರುವ ವಲಸೆ ವಿರುದ್ಧ ಪ್ರತಿಭಟಿಸಿತು. ಇದಕ್ಕೆ ಪ್ರತಿಕ್ರಿಯೆಯಾಗಿ, ರಾಜೀವ್ ಗಾಂಧಿ ಸರ್ಕಾರದ ಅಡಿಯಲ್ಲಿ ಆಗಸ್ಟ್ 15, 1985 ರಂದು ಸಹಿ ಹಾಕಲಾದ ಅಸ್ಸಾಂ ಒಪ್ಪಂದ?ದ ಭಾಗವಾಗಿ ಸೆಕ್ಷನ್ 6ಎ ಅನ್ನು ಪೌರತ್ವ ಕಾಯಿದೆಗೆ ಸೇರಿಸಲಾಯಿತು. ಈ ನಿಬಂಧನೆಯು ಮಾರ್ಚ್ 25, 1971 ರ ನಂತರ ಅಸ್ಸಾಂಗೆ ಪ್ರವೇಶಿಸಿದ ವಿದೇಶಿ ವಲಸಿಗರನ್ನು ಗುರುತಿಸುವ ಮತ್ತು ಹೊರಹಾಕುವ ಮೂಲಕ ಈ ಗುಂಪುಗಳ ಕಳವಳಗಳನ್ನು ಪರಿಹರಿಸುವ ಗುರಿಯನ್ನು ಹೊಂದಿದೆ. ಸೆಕ್ಷನ್ 6ಎ ಅಡಿಯಲ್ಲಿ, ಜನವರಿ 1, 1966 ರ ಮೊದಲು ಅಸ್ಸಾಂ ಪ್ರವೇಶಿಸಿದ ವ್ಯಕ್ತಿಗಳಿಗೆ ಪೂರ್ಣ ಪೌರತ್ವ ಹಕ್ಕುಗಳನ್ನು ನೀಡಲಾಗುತ್ತದೆ. ಆದರೆ, 1966 ಮತ್ತು 1971 ರ ನಡುವೆ ಆಗಮಿಸಿದವರು ಹತ್ತು ವರ್ಷಗಳ ಮತದಾನದ ನಿರ್ಬಂಧದೊಂದಿಗೆ ಇದೇ ರೀತಿಯ ಹಕ್ಕುಗಳನ್ನು ಅನುಭವಿಸುತ್ತಾರೆ. ಬಾಂಗ್ಲಾದೇಶಕ್ಕಿಲ್ಲದೇ ಅಸ್ಸಾಂ ಮಾತ್ರ ಏಕೆ ಈ ನಿಬಂಧನೆಗೆ ಒಳಪಟ್ಟಿದೆ ಎಂಬುದರ ಕುರಿತು ಅರ್ಜಿದಾರರು ಕಳವಳ ವ್ಯಕ್ತಪಡಿಸಿದ್ದರು.

# ಹರಿಯಾಣ ಮುಖ್ಯಮಂತ್ರಿಯಾಗಿ ಸೈನಿ ಪ್ರಮಾಣವಚನ

**ಪಂಚಕುಲ, ಅ. 17:** ಹರಿಯಾಣ ಮುಖ್ಯಮಂತ್ರಿಯಾಗಿ ಎರಡನೇ ಬಾರಿಗೆ ನಯಾಬ್ ಸಿಂಗ್ ಸೈನಿ ಪ್ರಮಾಣವವನ ಸ್ವೀಕರಿಸಿದ್ದಾರೆ. ರಾಜ್ಯಪಾಲ ಬಂಡಾರು ದತ್ತಾತ್ರೇಯ ಅವರು ಸೈನಿ ಅವರಿಗೆ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು. 14 ಜನರ ಕ್ಯಾಬಿನೆಟ್‌ನಲ್ಲಿ ಸೈನಿ ಜೊತೆಗೆ 13 ಮಂದಿ ಶಾಸಕರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು.

ಅನಿಲ್ ವಿಜ್, ಕ್ರಿಶನ್ ಲಾಲ್ ಪನ್ವಾರ್, ರಾವ್ ನರಬೀರ್ ಸಿಂಗ್, ಮಹಿಪಾಲ್ ದಂಡಾ, ವಿಪುಲ್ ಗೋಯೆಲ್, ಅರವಿಂದ್ ಕುಮಾರ್ ಶರ್ಮಾ, ಶ್ರುತಿ ಚೌಧರಿ, ಶ್ಯಾಮ್ ಸಿಂಗ್ ರಾಣಾ, ರಣಬೀರ್ ಸಿಂಗ್ ಗಂಗ್ವಾ, ಕೃಷ್ಣ ಬೇಡಿ, ಗೌರವ್ ಗೌತಮ್, ಆರ್ತಿ ಸಿಂಗ್ ರಾವ್, ರಾಜೇಶ್ ನಗರ ಪ್ರಮಾಣ ವಚನ ಸ್ವೀಕರಿಸಿದರು. ಪಂಚಕುಲದ ದಸರಾ ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ನಿತಿನ್ ಗಡ್ಕರಿ ಹಾಗೂ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಪ್ರಮುಖ ನಾಯಕರು ಭಾಗಿಯಾಗಿದ್ದರು. ಹರಿಯಾಣ ಬಿಜೆಪಿಯೊಳಗೆ ಎಲ್ಲವೂ ಸರಿಯಾಗಿದೆ ಎಂಬ ಸಂಕೇತವಾಗಿ, ಸೈನಿ ಪ್ರಮಾಣ ವಚನ ಸಮಾರಂಭದಲ್ಲಿ ಮಾಜಿ ಮುಖ್ಯಮಂತ್ರಿ ಮನೋಹರ್ ಲಾಲ್ ಖಟ್ಟರ್ ಅವರನ್ನು ಸೈನಿ ಪಕ್ಕದಲ್ಲಿ ಕೂರಿಸಲಾಗಿತ್ತು. ಮುಖ್ಯಮಂತ್ರಿ ಹುದ್ದೆಯ ರೇಸ್‌ನಲ್ಲಿ ಹಿರಿಯ



ನಾಯಕ ಅನಿಲ್ ವಿಜ್ ಇದ್ದಾರೆ ಎನ್ನುವ ವದಂತಿ ನಡುವೆ ಸೈನಿ 2.0 ಕ್ಯಾಬಿನೆಟ್‌ನಲ್ಲಿ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು. ಕುರುಕ್ಷೇತ್ರ ಜಿಲ್ಲೆಯ ಲಾಡ್ವಾ ಕ್ಷೇತ್ರದಲ್ಲಿ ಸ್ಪರ್ಧಿಸಿ ಗೆದ್ದಿರುವ 54 ವರ್ಷದ ಸೈನಿ, ಹರಿಯಾಣದಲ್ಲಿ ಬಿಜೆಪಿಯ ಪ್ರಮುಖ OBC ನಾಯಕರಾಗಿದ್ದಾರೆ.

ಸೈನಿ ಈ ಹಿಂದೆ ಕುರುಕ್ಷೇತ್ರದಿಂದ ಲೋಕಸಭಾ ಸಂಸದರಾಗಿ ಸೇವೆ ಸಲ್ಲಿಸಿದ್ದರು.

1996 ರಿಂದ ಬಿಜೆಪಿಯ ಹರಿಯಾಣ ಘಟಕದಲ್ಲಿ ಸಕ್ರಿಯವಾಗಿರುವ ಸೈನಿ 2002 ರಲ್ಲಿ ಪಕ್ಷದ ಯುವ ಘಟಕದ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿದ್ದರು. 2005 ರಲ್ಲಿ ಯುವ ಮೋರ್ಚಾದ ಜಿಲ್ಲಾಧ್ಯಕ್ಷರಾದರು. ನಂತರ ಅವರು ಅಂಬಾಲಾ ಜಿಲ್ಲಾ ಅಧ್ಯಕ್ಷ ಮತ್ತು ಪ್ರಧಾನ ಕಾರ್ಯದರ್ಶಿ ಸೇರಿದಂತೆ ಪ್ರಮುಖ ಪಾತ್ರಗಳನ್ನು ನಿರ್ವಹಿಸಿದರು.

ಸೈನಿ 2010 ರಲ್ಲಿ ಚುನಾವಣಾ ರಾಜಕೀಯಕ್ಕೆ ಪಾದಾರ್ಪಣೆ ಮಾಡಿದರು, 2014 ರಲ್ಲಿ ನಾರಾಯಣಗಢದಿಂದ ತಮ್ಮ ಮೊದಲ ಅಸೆಂಬ್ಲಿ ಸ್ಥಾನವನ್ನು ಗೆದ್ದರು, ಖಟ್ಟರ್ ಸಂಪುಟ ಸೇರಿದರು. ಅಕ್ಟೋಬರ್ 2023 ರಲ್ಲಿ, ಅವರನ್ನು ಹರಿಯಾಣ ಬಿಜೆಪಿ ಮುಖ್ಯಸ್ಥರನ್ನಾಗಿ ನೇಮಿಸಲಾಗಿತ್ತು.

# ವಿಮಾನಗಳಿಗೆ ಬಾಂಬ್ ಬೆದರಿಕೆ ಮುಂದುವರಿಕೆ

**ನವದೆಹಲಿ, ಅ. 17:** ದೇಶದಾದ್ಯಂತ ಕಳೆದ ನಾಲ್ಕು ದಿನಗಳಿಂದ ನಡೆಯುತ್ತಿರುವ ವಿಮಾನಗಳಿಗೆ ಬಾಂಬ್ ಬೆದರಿಕೆ ಸರಣಿ ಗುರುವಾರ ಕೂಡಾ ಮುಂದುವರೆದಿದೆ. 147 ಮಂದಿಯೊಂದಿಗೆ ಬುಧವಾರ ಜರ್ಮನಿಯ ಫ್ರಾಂಕ್‌ಫರ್ಟ್‌ನಿಂದ ಮುಂಬೈಗೆ ಹೊರಟಿದ್ದ ವಿಸ್ತಾರಾ ವಿಮಾನಕ್ಕೆ ಗುರುವಾರ ಬಾಂಬ್ ಬೆದರಿಕೆಯ ಹಿನ್ನೆಲೆಯಲ್ಲಿ ತುರ್ತು ಭೂಸ್ಪರ್ಶ ಮಾಡಿದೆ ಎಂದು ಮೂಲಗಳು ತಿಳಿಸಿವೆ. ಮೂಲಗಳ ಪ್ರಕಾರ, ಕಡ್ಡಾಯ ಭದ್ರತಾ ತಪಾಸಣೆಗಾಗಿ ಬೋಯಿಂಗ್ 787 ವಿಮಾನವನ್ನು ತಕ್ಷಣವೇ ಪ್ರತ್ಯೇಕ ಸ್ಥಳಕ್ಕೆ ಕೊಂಡೊಯ್ಯಲಾಯಿತು. ಬೆಳಗ್ಗೆ 7.45ಕ್ಕೆ ವಿಮಾನ ಸುರಕ್ಷಿತವಾಗಿ ಲ್ಯಾಂಡ್ ಆಯಿತು. ವಿಮಾನದಲ್ಲಿ 134 ಪ್ರಯಾಣಿಕರು ಮತ್ತು 13 ಸಿಬ್ಬಂದಿ ಇದ್ದರು ಎಂದು ಮೂಲಗಳು ತಿಳಿಸಿದೆ. ತನ್ನ ಫ್ರಾಂಕ್‌ಫರ್ಟ್-ಮುಂಬೈ ವಿಮಾನವು ಭದ್ರತಾ ಬಾಂಬ್ ಬೆದರಿಕೆ ಹಿನ್ನಲೆ ಇಲ್ಲಿ ಸುರಕ್ಷಿತವಾಗಿ ಇಳಿಯಿತು ಎಂದು ವಿಸ್ತಾರಾ ಹೇಳಿಕೆಯಲ್ಲಿ ತಿಳಿಸಿದೆ. ಅಕ್ಟೋಬರ್ 16, 2024 ರಂದು ಫ್ರಾಂಕ್‌ಫರ್ಟ್‌ನಿಂದ ಮುಂಬೈಗೆ ಕಾರ್ಯನಿರ್ವಹಿಸುತ್ತಿರುವ ವಿಸ್ತಾರಾ ಫ್ಲೈಟ್ ಗಿಎ 028 ಸಾಮಾಜಿಕ ಮಾಧ್ಯಮದಲ್ಲಿ ಭದ್ರತಾ ಬೆದರಿಕೆಗೆ ಒಳಪಟ್ಟಿದೆ? ಎಂದು ಏರ್‌ಲೈನ್ಸ್ ಹೇಳಿದೆ. ಪ್ರೋಟೋಕಾಲ್ ಪ್ರಕಾರ ಈ ಬಗ್ಗೆ ಎಲ್ಲಾ ಸಂಬಂಧಿತ ಅಧಿಕಾರಿಗಳಿಗೆ ತಕ್ಷಣ ತಿಳಿಸಲಾಗಿದ್ದು, ವಿಮಾನವನ್ನು ಮುಂಬೈನ ಛತ್ರಪತಿ ಶಿವಾಜಿ ಮಹಾರಾಜ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸುರಕ್ಷಿತವಾಗಿ ಇಳಿಸಲಾಯಿತು ಎಂದು ಅದು ಹೇಳಿದೆ. ವಿಮಾವನ್ನು ಪ್ರತ್ಯೇಕ ಪ್ರದೇಶಕ್ಕೆ ಕರೆದೊಯ್ಯಲಾ, ಅಲ್ಲಿ ಎಲ್ಲಾ ಪ್ರಯಾಣಿಕರನ್ನು ಇಳಿಸಲಾಯಿತು ಎಂದು ಸಂಸ್ಥೆ ಹೇಳಿದೆ. ಕಡ್ಡಾಯ ಭದ್ರತಾ ತಪಾಸಣೆಯನ್ನು ಪೂರ್ಣಗೊಳಿಸಲು




ನಾವು ಭದ್ರತಾ ಏಜೆನ್ಸಿಗಳೊಂದಿಗೆ ಸಂಪೂರ್ಣವಾಗಿ ಸಹಕರಿಸುತ್ತಿದ್ದೇವೆ ಎಂದು ವಿಸ್ತಾರಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಕಳೆದ ಮೂರು ದಿನಗಳಲ್ಲಿ, ಕೆಲವು ಅಂತಾರಾಷ್ಟ್ರೀಯ ವಿಮಾನಗಳು ಸೇರಿದಂತೆ ಸುಮಾರು ಹನ್ನೆರಡು ಭಾರತೀಯ ವಿಮಾನಗಳಿಗೆ ಬಾಂಬ್ ಬೆದರಿಕೆಗಳು ಬಂದಿವೆ ಆದರೆ ವಿಮಾನಗಳಲ್ಲಿ ಅನುಮಾನಾಸ್ಪದ ಏನೂ ಕಂಡುಬಂದಿಲ್ಲ. ಮುಂಬೈನಿಂದ ಹೊರಟಿದ್ದ ಮೂರು ಅಂತಾರಾಷ್ಟ್ರೀಯ ವಿಮಾನಗಳಿಗೆ ಸೋಮವಾರ ಬಾಂಬ್ ಬೆದರಿಕೆ ಬಂದಿತ್ತು. ನ್ಯೂಯಾರ್ಕ್‌ಗೆ ಹೋಗುವ ಏರ್ ಇಂಡಿಯಾ ವಿಮಾನವನ್ನು ನವದೆಹಲಿಗೆ ತಿರುಗಿಸಿ ಮರುಹೊಂದಿಸಲಾಗಿದ್ದರೆ, ಇನ್ನೆರಡು ಇಂಡಿಗೋದಿಂದ ನಿರ್ವಹಿಸಲ್ಪಡುವ ಮಸ್ಕತ್ ಮತ್ತು ಜಿದ್ದಾಕ್ಕೆ ಹೊರಟಿದ್ದ ವಿಮಾನ ಬೆದರಿಕೆ ಕಾರಣಕ್ಕೆ ಹಲವಾರು ಗಂಟೆಗಳ ಕಾಲ ವಿಳಂಬವಾಯಿತು.

# 2.09 ಪಟ್ಟು ಹೆಚ್ಚು ಚಂದಾದಾರಿಕೆ ಬಿಡ್ ಪಡೆದುಕೊಂಡ ಹ್ಯುಂಡೈ ಮೋಟಾರ್ ಐಪಿಒ

**ಮುಂಬಯಿ, ಅ. 17:** ಹ್ಯುಂಡೈ ಮೋಟಾರ್ಸ್ ಇಂಡಿಯಾದ ಇನಿಷಿಯಲ್ ಪಬ್ಲಿಕ್ ಆಫರಿಂಗ್ (ಐಪಿಒ) ಅಕ್ಟೋಬರ್ 15 ರಂದು ಓಪನ್ ಆಗಿದ್ದು, ಚಂದಾದಾರಿಕೆಗೆ ಬಿಡ್ ಮಾಡುವ ಅವಧಿ ಗುರುವಾರ ಕೊನೆಗೊಂಡಿದೆ. ಮೂರು ದಿನಗಳ ಅವಧಿಯಲ್ಲಿ ಹ್ಯುಂಡೈ ಮೋಟಾರ್ಸ್ ಇಂಡಿಯಾ ಐಪಿಒ ಸಂಪೂರ್ಣವಾಗಿ ಮಾರಾಟವಾಗಿದ್ದು, ನಾಳೆ (ಅಕ್ಟೋಬರ್ 18) ಹಂಚಿಕೆಯಾಗಲಿದೆ. ಅಕ್ಟೋಬರ್ 22ರಂದು ಈ ಐಪಿಒ ಲಿಸ್ಟಿಂಗ್ ಆಗಲಿದೆ. ಈ ಐಪಿಒ ಷೇರುಪೇಟೆ ಮೂಲಕ 27,856 ಕೋಟಿ ರೂಪಾಯಿ ಸಂಗ್ರಹಿಸುವ ಗುರಿಯನ್ನು ಹೊಂದಿದ್ದು, ಇದು ಭಾರತದ ಐಪಿಒ ಮಾರುಕಟ್ಟೆಯಲ್ಲಿ ಇದುವರೆಗಿನ ಅತಿ ಹೆಚ್ಚು ಮೊತ್ತದ ಐಪಿಒ ಆಗಿ ದಾಖಲೆ ಬರೆಯಲಿದೆ. ಹ್ಯುಂಡೈ ಐಪಿಒ ಚಂದಾದಾರಿಕೆ ಆರಂಭ ನಿಧಾನಗತಿಯಲ್ಲಿತ್ತು. ಅದಾಗಿ ಎರಡು ದಿನಗಳ ಅವಧಿಯಲ್ಲಿ ಚುರುಕುಗೊಂಡ ಬಿಡ್ಡಿಂಗ್, ಚಂದಾದಾರಿಕೆ ಅವಧಿ ಮುಗಿಯುವುದಕ್ಕೂ ಮೊದಲೇ ಪೂರ್ಣ ಪ್ರಮಾಣದಲ್ಲಿ ಮಾರಾಟವಾಗಿದೆ. ಐಪಿಒ ಮಾರುಕಟ್ಟೆಯಲ್ಲಿ ಹ್ಯುಂಡೈ ಮೋಟಾರ್ ಐಪಿಒ 2,09 ಪಟ್ಟು ಹೆಚ್ಚು ಚಂದಾದಾರಿಕೆ ಬಿಡ್ ಸಂಗ್ರಹಿಸಿಕೊಂಡಿದೆ. ಈ ದಿನದ (ಅಕ್ಟೋಬರ್ 17) ಮಾಹಿತಿ ಪ್ರಕಾರ, ಇದರಲ್ಲಿ ರಿಟೇಲ್ ವಿಭಾಗದಲ್ಲಿ 0.45 ಪಟ್ಟು ಹೆಚ್ಚು ಮತ್ತು ಅರ್ಹ ಸಾಂಸ್ಥಿಕ ಖರೀದಿದಾರ ವಿಭಾಗದಲ್ಲಿ 6.23




ಪಟ್ಟು, ಸಾಂಸ್ಥಿಕವಲ್ಲದ ಹೂಡಿಕೆದಾರರ ವಿಭಾಗದಲ್ಲಿ 0.43 ಪಟ್ಟು ಹೆಚ್ಚು ಚಂದಾದಾರಿಕೆ ಬಿಡ್ ದಾಖಲಾಗಿದೆ.

ಐಪಿಒಗೆ ಹೂಡಿಕೆ ಮಾಡಿರುವ ಚಂದಾದಾರರು ತಮಗೆ ಐಪಿಒ ಅಲಾಟ್ ಆಗಿದೆಯೋ ಅಥವಾ ಇಲ್ಲವೋ ಎಂಬುದನ್ನು ಪರಿಶೀಲಿಸಲು ಕೆಫಿನ್ ಟೆಕ್ನಾಲಜಿ ಪ್ಲಾಟ್‌ಫಾರಂ ಚೆಕ್ ಮಾಡಬಹುದು. ಇದಲ್ಲದೆ, ಬಾಂಬೆ ಸ್ಟಾಕ್ ಎಕ್ಸ್‌ಚೇಂಜ್ (ಬಿಎಸ್‌ಇ) ವೆಬ್‌ಸೈಟ್‌ನಲ್ಲೂ ಪರಿಶೀಲಿಸಬಹುದು. ಅಕ್ಟೋಬರ್ 18 ರಂದು ಅಂದರೆ ನಾಳೆ ಹ್ಯುಂಡೈ ಮೋಟಾರ್ ಇಂಡಿಯಾದ ಐಪಿಒ ಹಂಚಿಕೆ ಅಂತಿಮವಾಗಲಿದೆ.

ಅಕ್ಟೋಬರ್ 22ರಂದು ಈ ಐಪಿಒ ಷೇರುಪೇಟೆಯ ಬಿಎಸ್‌ಇ ಮತ್ತು ಎನ್‌ಎಸ್‌ಇಗಳಲ್ಲಿ ಲಿಸ್ಟಿಂಗ್ ಆಗಲಿದೆ. ಗ್ರೇ ಮಾರ್ಕೆಟ್ ಪ್ರೀಮಿಯಂ ಏರಿಳಿತ:

ಹ್ಯುಂಡೈ ಮೋಟಾರ್ ಇಂಡಿಯಾ ಐಪಿಒದ ಗ್ರೇ ಮಾರ್ಕೆಟ್ ಪ್ರೀಮಿಯಂ (ಜಿಎಂಪಿ) ಇಂದು ಕೊನೆಯದಾಗಿ 14 ರೂಪಾಯಿಗೆ ತಲುಪಿತ್ತು. ಐಪಿಒದ ದರ ಮಟ್ಟ ಪ್ರತಿ ಷೇರಿಗೆ 1960 ರೂಪಾಯಿ ಇದ್ದು ಜಿಪಿಎಂ ಆಧಾರದಲ್ಲಿ ಹೇಳುವುದಾದರೆ ಲಿಸ್ಟಿಂಗ್ ಆಗುವಾಗ ಇದರ ಶೇಕಡ 0.71 ಹೆಚ್ಚಳವಾಗಿ 1,974 ರೂಪಾಯಿ ಆಗಬಹುದು ಎಂದು ಅಂದಾಜಿಸಲಾಗಿದೆ.

# ಸಲ್ಮಾನ್ ಖಾನ್ ಹತ್ಯೆಗೆ 25 ಲಕ್ಷ ರೂ. ಸುಪಾರಿ ಪಾಕ್‌ನಿಂದ AK-47 ಖರೀದಿ: ಚಾರ್ಜ್‌ಶೀಟ್ ಸಲ್ಲಿಕೆ

**ಮುಂಬೈ, ಅ. 17:** ಬಾಲಿವುಡ್ ಸೂಪರ್ ಸ್ಟಾರ್ ಸಲ್ಮಾನ್ ಖಾನ್ ಅವರನ್ನು ಮಹಾರಾಷ್ಟ್ರದ ಪನ್ವೇಲ್ ನಲ್ಲಿರುವ ಅವರ ತೋಟದ ಬಳಿ ಕೊಲೆ ಮಾಡಲು ವ್ಯಕ್ತಿಯೊಬ್ಬನಿಗೆ ರೂ. 25 ಲಕ್ಷ ಸುಪಾರಿ ನೀಡಲಾಗಿತ್ತು ಎಂದು ನವಿ ಮುಂಬೈ ಪೊಲೀಸರು ನ್ಯಾಯಾಲಯಕ್ಕೆ ಸಲ್ಲಿಸಿರುವ ಆರೋಪ ಪಟ್ಟಿಯಲ್ಲಿ ಹೇಳಿದ್ದಾರೆ. ಆರೋಪ ಪಟ್ಟಿಯಲ್ಲಿ ಒಟ್ಟು ಐವರನ್ನು ಹೆಸರಿಸಲಾಗಿದ್ದು, ಸದ್ಯ ಜೈಲಿನಲ್ಲಿರುವ ಗ್ಯಾಂಗ್‌ಸ್ಟರ್ ಲಾರೆನ್ಸ್ ಬಿಷ್ಣೋಯಿ ಗ್ಯಾಂಗ್ ಈ ಸುಫಾರಿ ನೀಡಿತ್ತು. ಅಲ್ಲದೇ ಪಾಕಿಸ್ತಾನದಿಂದ ಎ.ಕೆ. 47, ಎಕೆ 92 ಮತ್ತು ಎಂ 16 ಬಂದೂಕುಗಳನ್ನು ಹಾಗೂ ಟರ್ಕಿಯ ಝಿಂಗಾನಾ ಪಿಸ್ತೂಲ್ ಖರೀದಿಸಲು ಸಿದ್ಧತೆ ನಡೆಸಿದ್ದರು.




ಇದೇ ಮಾದರಿಯ ಪಿಸ್ತೂಲ್‌ನಲ್ಲಿ ಪಂಜಾಬ್‌ನ ಗಾಯಕ ಸಿಧು ಮೂಸೆವಾಲಾ ಅವರನ್ನು ಹತ್ಯೆ ಮಾಡಲಾಗಿತ್ತು. ಸಲ್ಮಾನ್ ಖಾನ್ ಹತ್ಯೆಗಾಗಿ 18 ವರ್ಷಕ್ಕಿಂತಲೂ ಕಡಿಮೆ ವಯಸ್ಸಿನ ಬಾಲಕರನ್ನು ಆರೋಪಿಗಳು ಸಜ್ಜುಗೊಳಿಸಿದ್ದರು. ಇವರೆಲ್ಲರೂ ಪುಣೆ, ರಾಯಗಡ, ನವಿ ಮುಂಬೈ, ಥಾಣೆ ಹಾಗೂ ಗುಜರಾತ್ ನಲ್ಲಿ ತಲೆ ಮರೆಸಿಕೊಂಡಿದ್ದಾರೆ ಎಂದು ಪೊಲೀಸರು ಹೇಳಿದ್ದಾರೆ. ಸಲ್ಮಾನ್ ಖಾನ್ ಅವರ ಚಲನವಲನದಮೇಲೆ ನಿಗಾ ಇಡಲು ಸುಮಾರು 60 ರಿಂದ 70 ಮಂದಿಯನ್ನು ಈ ತಂಡ ನಿಯೋಜಿಸಿತ್ತು. ಬಾಂದ್ರಾ ದಲ್ಲಿರುವ ಮನೆ, ಪನ್ವೇಲ್ ನಲ್ಲಿರುವ ತೋಟ ಹಾಗೂ ಗೋರೆಗಾಂವ್ ನಲ್ಲಿರುವ ಫಿಲ್ಮ್ ಸಿಟಿಯಲ್ಲಿ ಈ ತಂಡದ ಸದಸ್ಯರು ನಿಗಾ ಇರಿಸಿದ್ದರು. ಸಲ್ಮಾನ್ ಹತ್ಯೆಗೆ ಈ ತಂಡ 202

3ರ ಆಗಸ್ಟ್ ಹಾಗೂ 2024ರ ಏಪ್ರಿಲ್‌ನಲ್ಲಿ ಪ್ರಯತ್ನ ನಡೆಸಿತ್ತು ಎಂದು ಆರೋಪ ಪಟ್ಟಿಯಲ್ಲಿ ಉಲ್ಲೇಖಿಸಲಾಗಿದೆ. ಹರಿಯಾಣದ ಪಾಣಿಪತ್ ಬಳಿ ಬಂಧಿಸಲಾದ ಸುಕ್ಕಾ ಎಂಬಾತನಿಂದ ಮಾಹಿತಿ ಲಭ್ಯವಾಗಿದ್ದು, ಶೂಟರ್ ಅಜಯ್ ಕಶ್ಯಪ್ ಹಾಗೂ ಇತರ ನಾಲ್ವರು ಈ ಯೋಜನೆಯಲ್ಲಿ ಭಾಗಿಯಾಗಿದ್ದರು. ಸಲ್ಮಾನ್‌ಗೆ ಇರುವ ಬಿಗಿ ಭದ್ರತೆ ಹಾಗೂ ಬುಲೆಟ್ ಪ್ರೂಫ್ ಕಾರನ್ನು ಭೇದಿಸಿ ಹತ್ಯೆಗೈಯಲು ತಂಡ ಯೋಜನೆ ರೂಪಿಸಿತ್ತು ಎಂದು ಪೊಲೀಸರು ಹೇಳಿದ್ದಾರೆ.



ಸುಕ್ಕಾ ಪಾಕಿಸ್ತಾನ ಮೂಲದ ಶಸಾಸ್ತ್ರ ವ್ಯಾಪಾರಿ ಡೋಗರ್‌ನನ್ನು ವೀಡಿಯೊ ಕರೆ ಮೂಲಕ ಸಂಪರ್ಕಿಸಿದ್ದ. ಶಸಾಸ್ತ್ರ ಖರೀದಿಗೂ ಮುನ್ನ ಅರ್ಧದಷ್ಟು ಹಣ ನೀಡುವುದು, ಪೂರೈಕೆ ನಂತರ ಉಳಿದ ಮೊತ್ತ ಕೊಡುವ ಡೀಲ್ ನಡೆದಿತ್ತು. ಕೆನಡಾದಲ್ಲಿರುವ ಗ್ಯಾಂಗ್ ಸ್ಟರ್ ಗೋಲ್ಡಿ ಬ್ರಾರ್ ಹಾಗೂ ಲಾರೆನ್ಸ್ ಬಿಷ್ಣೋಯಿ ಸಹೋದರ ಅನ್ಮೋಲ್ ಬಿಷ್ಣೋಯಿ ಆದೇಶವನ್ನು ಇವರು ಕಾಯುತ್ತಿದ್ದರು ಎಂಬುದನ್ನು ಪೊಲೀಸರು ಪತ್ತೆ ಹಚ್ಚಿದ್ದಾರೆ. 58 ವರ್ಷದ ನಟನನ್ನು ಹತ್ಯೆಗೈದು ಕನ್ಯಾಕುಮಾರಿಯಲ್ಲಿ ಸೇರಲು, ತದನಂತರ ಶ್ರೀಲಂಕಾಗೆ ದೋಣಿ ಮೂಲಕ ತಲುಪಬೇಕೆಂಬುದು ತಂಡದ ಯೋಜನೆಯಾಗಿತ್ತು ಎಂಬುದನ್ನು ಆರೋಪ ಪಟ್ಟಿ ವಿವರಿಸುತ್ತದೆ. ಈ ಮಧ್ಯೆ ಮಾಜಿ ಸಚಿವ ಮತ್ತು ಎನ್‌ಸಿಪಿ ನಾಯಕ ಬಾಬಾ ಸಿದ್ದಿಕ್ ಹತ್ಯೆಯ ನಂತರ ಸಲ್ಮಾನ್ ಖಾನ್ ಅವರ ಬಾಂದ್ರಾ ನಿವಾಸದ ಹೊರಗೆ ಭದ್ರತೆಯನ್ನು ಹೆಚ್ಚಿಸಲಾಗಿದೆ. ಮಾಜಿ ಶಾಸಕ ಮತ್ತು ಎನ್ ಸಿಪಿ ಅಜಿತ್ ಪವಾರ್ ಬಣದ ನಾಯಕನನ್ನು ಬಾಂದ್ರಾದ ನಿರ್ಮಲ್ ನಗರದ ಬಳಿ ಗುಂಡು ಹಾರಿಸಿ ಹತ್ಯೆಗೈಯಲಾಗಿತ್ತು.

# ವಿಷ್ಣು ಭಟ್, ಹರೀಶ್‌ಗೆ ಪ್ರಶಸ್ತಿ

**ಬೆಂಗಳೂರು, ಅ.17:** ಅಖಿಲ ಭಾರತೀಯ ಸಾಹಿತ್ಯ ಪರಿಷದ್ ನೀಡುವ 'ಆದಿಕವಿ' ಪುರಸ್ಕಾರಕ್ಕೆ ವಿದ್ವಾಂಸ ವಿಷ್ಣು ಭಟ್ ಡೋಂಗ್ರೆ, ವಾಗ್ದೇವಿ ಪುರಸ್ಕಾರಕ್ಕೆ ಇತಿಹಾಸಕಾರ ಜಿ.ಬಿ. ಹರೀಶ್ ಆಯ್ಕೆಯಾಗಿದ್ದಾರೆ

ಪ್ರಶಸ್ತಿ ತಲಾ 1 ಲಕ್ಷ ನಗದು ಒಳಗೊಂಡಿದೆ.

ವಿಷ್ಣು ಭಟ್ ಡೋಂಗ್ರೆ ಅವರು ದಕ್ಷಿಣ ಕನ್ನಡದ ಬೆಳ್ತಂಗಡಿಯ



ಮುಂಡಾಜೆಯವರಾಗಿದ್ದಾರೆ.

ಜಿ.ಬಿ.ಹರೀಶ್ ಅವರು ಹಾಸನದವ ರಾಗಿದ್ದಾರೆ. ಇಬ್ಬರೂ ಸಾಹಿತ್ಯದ ವಿವಿಧ ಪ್ರಕಾರಗಳಲ್ಲಿ ಹಲವು ಕೃತಿ ರಚಿಸಿದ್ದಾರೆ.

ಪುರಸ್ಕಾರ ಪ್ರದಾನ ಸಮಾರಂಭವು ನವೆಂಬರ್ 24 ರಂದು ಚಿಂತಾಮಣಿ ತಾಲ್ಲೂಕಿನ ಕೈವಾರದಲ್ಲಿ ನಡೆಯಲಿದೆ ಎಂದು ಪರಿಷದ್ ಅಧ್ಯಕ್ಷ ನಾ. ಮೊಗಸಾಲೆ ತಿಳಿಸಿದ್ದಾರೆ.

# ಮಹರ್ಷಿ ವಾಲ್ಮೀಕಿ ಜಯಂತಿ: ಸಚಿವ ಕೆ.ಎಚ್. ಮುನಿಯಪ್ಪ ಭಾಗಿ



**ಬೆಂಗಳೂರು, ಅ.17–** ಬ್ಯಾಂಕ್ವೆಟ್‌ಹಾಲ್‌ನಲ್ಲಿ ನಡೆದ ಶ್ರೀ ಮಹರ್ಶಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆ.ಎಚ್. ಮುನಿಯಪ್ಪನವರು ಭಾಗವಹಿಸಿ ಮಾತನಾಡಿದರು.

ಮಹರ್ಷಿ ವಾಲ್ಮೀಕಿ ಸಮುದಾಯದ ಬಂದುಗಳಿಗೆ ಜಯಂತಿಯ ಶುಭಾಶಯಗಳನ್ನು ಕೋರುತ್ತಾ, ಕೇಂದ್ರದಲ್ಲಿ ನಾನು ಸಚಿವನಿದ್ದಾಗ ಕೋಲಾರ ಲೋಕಸಭಾ ಕ್ಷೇತ್ರದದಲ್ಲಿ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮಾಜಿ ಮಂತ್ರಿ ಹೆಚ್ ಆಂಜನೇಯರವರ ಸಹಕಾರದಿಂದ 4 ಮಹರ್ಷಿ ವಾಲ್ಮೀಕಿ ಹಾಸ್ಟೆಲ್ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಪ್ರಾರಂಭಿಸಲಾಯಿತು.

ಇದರಿಂದ ಹಲವಾರು ಬಡ ಕುಟುಂಬದ ಮಕ್ಕಳಿಗೆ ವಿಧ್ಯಾಭ್ಯಾಸ ಮಾಡಲು ಅನುಕೂಲ ಮಾಡಿಕೊಡಲಾಗಿದೆ. ಅಂದಿನಿಂದ ಇಂದಿನವರೆಗೂ ಹಳ್ಳಿಗಳಲ್ಲಿ ಯಾವುದೇ ಸಮಸ್ಯಗಳು ಇದ್ದಲ್ಲಿ ವಾಲ್ಮೀಕಿ ಸಮಾಜದವರು ತಾಯಿ ಸ್ಥಾನದಲ್ಲಿದ್ದು ಸಹಕರಿಸಿರುತ್ತಾರೆ.

ಅವರೊಂದಿಗೆ ನಮ್ಮ ಸಮುದಾಯ ಜೊತೆಗಿದ್ದು ಮಾನ್ಯ ಮುಖ್ಯಮಂತ್ರಿಗಳ ಕೈ ಬಲಪಡಿಸಿ ಅವರ ಪರವಾಗಿ ನಮ್ಮ ಸಮುದಾಯಗಳು ಇರುತ್ತವೆ. ತಾವು ಇನ್ನಷ್ಟು ಅಭಿವೃದ್ಧಿ ಕಾರ್ಯ ಕ್ರಮಗಳನ್ನು ಸಮುದಾಯಗಳಿಗೆ ಕಲ್ಪಿಸಿ ಸಮುದಾಯಗಳ ಬೆಳವಣಿಗೆಗೆ ಸಹಕರಿಸಬೇಕು ಎಂದರು.

ರಾಜನಹಳ್ಳಿ ವಾಲ್ಮೀಕಿ ಸಮುದಾಯದ ಮಠದ ಜಗದ್ಗುರು ಪ್ರಸನ್ನಾ ನಂದಪುರಿ ಶ್ರೀಗಳ ದಿವ್ಯ ಸಾನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರಾದ ಸತೀಶ್ ಜಾರಕಿಹೊಳಿ, ಕೆ.ಎನ್.ರಾಜಣ್ಣ,, ಮಾಜಿ ಸಂಸದರಾದ ವಿ.ಎಸ್.ಉಗ್ರಪ್ಪ, ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಸವನಗೌಡ ದದ್ದಲ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಹಾಗೂ ವಿಧಾನ ಸಭೆ ಮತ್ತು ವಿಧಾನ ಪರಿಷತ್ ಸದಸ್ಯರುಗಳು ಸೇರಿ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.



ಬೀದಿನಾಯಿಗಳಿಗೆ ಆಹಾರ ನೀಡುವ ತನ್ನ ಉಪಕ್ರಮವನ್ನು ಆಚರಿಸಲು ಬಿಬಿಎಂಪಿಯ ಪಶುಸಂಗೋಪನಾ ಇಲಾಖೆಯು ಗುರುವಾರ ಬೆಂಗಳೂರಿನ ಬಿಬಿಎಂಪಿ ಕಚೇರಿಯಲ್ಲಿ ನಾಯಿಗಳ ಹಬ್ಬ (ಕುಕುರ್ ತಿಹಾರ್) ಆಯೋಜಿಸಿತ್ತು.

## ಮಹರ್ಷಿ ವಾಲ್ಮೀಕಿ ಜಯಂತಿಯ ಉತ್ತಮ ದಿನದಂದು

# ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ಪ್ರಾಯಶ್ಚಿತ್ತ ಮಾಡಿಕೊಳ್ಳಲು ಡಿ.ವಿ.ಸದಾನಂದಗೌಡ ಮನವಿ



**ಬೆಂಗಳೂರು, ಅ.17–** ಸಿದ್ದರಾಮಯ್ಯನವರು ಮಹರ್ಷಿ ವಾಲ್ಮೀಕಿ ಜಯಂತಿಯ ಉತ್ತಮ ದಿನದಂದು ರಾಜೀನಾಮೆ ಕೊಟ್ಟು ಪ್ರಾಯಶ್ಚಿತ್ತ ಮಾಡಿಕೊಳ್ಳಬೇಕು ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ ಅವರು ಮನವಿ ಮಾಡಿದರು.

ಈ ಕುರಿತು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಚಾರ್ಜ್ ಶೀಟ್ ಸಿದ್ದರಾಮಯ್ಯನವರಿಗೆ ಜ್ಞಾನೋದಯಕ್ಕೆ ಒಂದು ದಾಖಲೆಯಂತಿದೆ ಎಂದು ಭಾವಿಸುವುದಾಗಿ ಹೇಳಿದರು.

ಜಸ್ಟಿಸ್ ಗಜಾನನ ಭಟ್ ಅವರು ಕೊಟ್ಟ ಚಾರ್ಜ್‌ಶೀಟ್ ಪ್ರತಿಯನ್ನು ಪ್ರದರ್ಶನ ಮಾಡಿದ ಅವರು, ಯಾರೇ ಒಬ್ಬ ವ್ಯಕ್ತಿ ತಪ್ಪು ಮಾಡಿದ್ದಾನೆ ಎಂಬುದನ್ನು ನ್ಯಾಯಾಂಗದ ತೀರ್ಪಿನ ಮುಖಾಂತರ ಬೈಲ್ ಅಪ್ಲಿಕೇಶನ್ ಆರ್ಡರ್‌ನಲ್ಲಿ ತೋರಿಸಿಕೊಟ್ಟಿದ್ದಾರೆ. ಸಿದ್ದರಾಮಯ್ಯನವರೇ ಇದು ಬಹಳ ಚೆನ್ನಾಗಿದೆ. ಮಧ್ಯಾಹ್ನದ ವರೆಗೆ ಓದಿ, ವಾಲ್ಮೀಕಿ ಜಯಂತಿಯ ದಿನ ಸಾಯಂಕಾಲ ರಾಜೀನಾಮೆ ಕೊಡಿ. ಆ ಮೂಲಕ ಒಂದು ಹೊಸ ಅಧ್ಯಾಯವನ್ನು ಪ್ರಾರಂಭಿಸಿ ಎಂದು ಒತ್ತಾಯಿಸಿದರು.

ಇ.ಡಿ. ಚಾರ್ಜ್ ಶೀಟಿನಲ್ಲಿ ಮಾಜಿ ಸಚಿವ ನಾಗೇಂದ್ರ ಅವರಿಂದ ಕಾರು ಖರೀದಿ, ಕುಟುಂಬದ ವಿಮಾನ ಪ್ರಯಾಣದ ಟಿಕೆಟ್, ಪೆಟ್ರೋಲ್–ಡೀಸೆಲ್ ಖರೀದಿ, ಮನೆ ವಿದ್ಯುತ್ ಶುಲ್ಕ, ಮನೆ ಕೆಲಸದವರ ವೇತನ ಪಾವತಿಸಿದ್ದನ್ನು ಉಲ್ಲೇಖಿಸಲಾಗಿದೆ. 2024ರ ಲೋಕಸಭಾ ಚುನಾವಣೆಯಲ್ಲಿ ಬಳ್ಳಾರಿ ಮತ್ತು ರಾಯಚೂರು ಲೋಕಸಭಾ ಚುನಾವಣೆಗೆ ನಿಗಮದ ಹಣ ಬಳಕೆ ಆಗಿರುವುದು ಜಾರ್ಜ್‌ಶೀಟ್‌ನಲ್ಲಿ ತಿಳಿಸಲಾಗಿದೆ ಎಂದು ಹೇಳಿದರು. ಬಳ್ಳಾರಿ ಲೋಕಸಭಾ ಚುನಾವಣೆಗೋಸ್ಕರ 3 ಶಾಸಕರ ಮೂಲಕ 14.80 ಕೋಟಿ ರೂ. ಹಣ ಬಳಕೆಯಾದುದು ಗೊತ್ತಾಗಿದೆ. ಬಳ್ಳಾರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಭರತ್ ರೆಡ್ಡಿ, ಕಂಪ್ಲಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಗಣೇಶ್, ಕೂಡ್ಲಿಗಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀನಿವಾಸ್ ಅವರ ಮೂಲಕ ಸುಮಾರು 15 ಕೋಟಿ ವಿತರಣೆ ಮಾಡಿದ್ದಾರೆ ಎಂದು ತಿಳಿಸಿದರು.

ಈಗಿನ ಸಂಸದ ತುಕಾರಾಂರನ್ನು ಗೆಲ್ಲಿಸಲು ಒಂದೊಂದು ಮತಕ್ಕೆ 200 ರೂ. ಕೊಟ್ಟ ಆರೋಪವಿದೆ. ತುಕಾರಾಂ ಅವರ ಸ್ಥಾನಕ್ಕೆ ಉಪ ಚುನಾವಣೆ ಬರುತ್ತಿದ್ದು, 200 ರೂ. ಕೊಟ್ಟದ್ದನ್ನು ಜನರು ನೆನಪಿಸಿಕೊಳ್ಳುತ್ತಾರೆ. ಇಡೀ ಸಮಾಜದ ದುಡ್ಡನ್ನು ನಮಗೆ ಹಂಚಿದ ಕಾರಣ ಅವರಿಗೆ ಬುದ್ಧಿ ಕಲಿಸಬೇಕೆಂದು ಜನ ಕಾಯುತ್ತಿದ್ದಾರೆ ಎಂದು ಭಾವಿಸುವುದಾಗಿ ಹೇಳಿದರು.

## ವಾಲೀಕಿ ಅಭಿವೃದ್ಧಿ ನಿಗಮದಲ್ಲಿ ಹಗರಣ

# ಮುಖ್ಯಮಂತ್ರಿಗಳಿಗೆ ಶಾಸಕ ಸುನೀಲ್ ಕುಮಾರ್ ತರಾಟೆ



**ಬೆಂಗಳೂರು, ಅ.17–** ವಾಲ್ಮೀಕಿ ಜನಾಂಗದ ಸಂವಿಧಾನಬದ್ಧ ಹಣವನ್ನು ನುಂಗಿ ನೀರು ಕುಡಿದ ಆರೋಪಿ ನಾಗೇಂದ್ರನನ್ನು ವಾಲ್ಮೀಕಿ ಜಯಂತಿಯ ಹಿಂದಿನ ದಿನ ಆಲಂಘಿಸಿ ಅಕ್ಕರೆ ಸುರಿಸಿದ್ದು ಎಷ್ಟು ಸರಿ ಸಿದ್ದರಾಮಯ್ಯನವರೇ ಎಂದು ಶಾಸಕ ಸುನೀಲ್ ಕುಮಾರ್ ಮುಖ್ಯಮಂತ್ರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, 'ಮಹಾರಾಷ್ಟ್ರ ಚುನಾವಣಾ ಹೊತ್ತಿನಲ್ಲಿ ಇನ್ನು ಯಾವ ನಿಗಮಕ್ಕೆ ಕೊಳ್ಳೆ ಹೊಡೆಯೋಣ ಎಂದು ಚರ್ಚಿಸಲು ಆರೋಪಿ ನಾಗೇಂದ್ರನಿಂದ ಅಭಿನಂದನೆ ಹಾಗೂ ಸಲಹೆ ಪಡೆದರೆ' ಎಂದು ಪ್ರಶ್ನಿಸಿದ್ದಾರೆ.

ಎಲ್ಲವೂ ರಾಜ್ಯದ ಜನತೆಯ ಎದುರು ಮುಕ್ತವಾಗಿ ನಡೆದ ಘಟನಾವಳಿಗಳು. ಅಕ್ರಮದ ಸಂಬಂಧ ಜೈಲಿಗೆ ಹೋಗಿ ಬಂದ ಆರೋಪಿಯೊಬ್ಬ ಈಗ ನೇರಾನೇರ ನಿಮ ನಿವಾಸಕ್ಕೆ ಬಂದು ವಿಜಯೋತ್ಸವ ನಡೆಸಿ ಬಂದವರಂತೆ ಸನಾನ ಮಾಡುತ್ತಾರೆಂದರೆ ಏನರ್ಥ ಈ ಅಕ್ರಮಕ್ಕೆ ನಿಮ ಚಿತಾವಣೆ ಇತ್ತೇ ಹಾಗಾದರೆ ಆಂಧ್ರದ ಚುನಾವಣೆಗೆ ನಿಮ ಬಾಬ್ತಿನಿಂದ ನಾಗೇಂದ್ರ ಎಷ್ಟು ಹಣ ವರ್ಗಾವಣೆ ಮಾಡಿದರು ಎಂದು ಪ್ರಶ್ನೆ ಮಾಡಿದ್ದಾರೆ.

ಇದೇ ಅಂತರಂಗ ಶುದ್ಧಿ, ಇದೇ ಬಹಿರಂಗ ಶುದ್ಧಿ.! ಸಿಎಂ ಸಿದ್ದರಾಮಯ್ಯನವರೇ, ಶಾಸನಸಭೆಯಲ್ಲಿ ಇಡಿ ರಾಜ್ಯದ ಜನತೆಯನ್ನು ಉದ್ದೇಶಿಸಿ ಮಾತನಾಡುವಾಗ ವಾಲೀಕಿ ಅಭಿವೃದ್ಧಿ ನಿಗಮದಲ್ಲಿ ಹಗರಣ ನಡೆದಿದೆ ಎಂದು ನೀವು ಒಪ್ಪಿಕೊಂಡಿದ್ದು ಸುಳ್ಳೇ ನಿಗಮದಲ್ಲಿ ನಡೆದ ಅವ್ಯವಹಾರ ಸಂಬಂಧ ಸಚಿವ ನಾಗೇಂದ್ರ ಅವರಿಂದ ರಾಜೀನಾಮೆ ಪಡೆದಿದ್ದು ಸುಳ್ಳೇ 'ಅಕ್ರಮ ಹಣ ವರ್ಗಾವಣೆಯಾಗಿದೆ ಎಂದು ಜಾರಿ ನಿರ್ದೇಶನಾಲಯ ನಾಗೇಂದ್ರನನ್ನು ಬಂಧಿಸಿದ್ದು ಸುಳ್ಳೇ' ಎಂದು ಪ್ರಶ್ನೆಗಳ ಸುರಿಮಳೆಗೈದಿದ್ದಾರೆ.

# ಆಹಾರ ವ್ಯರ್ಥವಾಗದಂತೆ ಹೊಸ ಕಾನೂನು ರಚನೆಗೆ ರಾಜ್ಯ ಸರ್ಕಾರದ ಚಿಂತನೆ: ಸಚಿವ ಮುನಿಯಪ್ಪ

**ಬೆಂಗಳೂರು, ಅ.17–** ತಂತ್ರಜ್ಞಾನ ಮತ್ತು ಇತರೆ ಹಲವು ವಿಷಯಗಳಲ್ಲಿ ಭಾರತ ಅದೆಷ್ಟೋ ಮುಂದುವರೆಯುತ್ತಿದೆ. ಆದರೆ ದೇಶದಲ್ಲಿ ಇನ್ನೂ ಕೂಡ ಹಲವಾರು ಜನರು ಹಸಿವಿನಿಂದ ಬಳಲುತ್ತಿದ್ದಾರೆ. ಅದೆಷ್ಟೋ ಹೋಟೆಲ್‌ಗಳಲ್ಲಿ, ಸಭೆ ಸಮಾರಂಭಗಳಲ್ಲಿ ಆಹಾರವನ್ನು ವ್ಯರ್ಥ ಮಾಡುತ್ತೇವೆ. ಈ ಕಾರಣದಿಂದ ಇದೀಗ ಆಹಾರ ವ್ಯರ್ಥವಾಗದಂತೆ ಹೊಸ ಕಾನೂನು ರಚನೆಗೆ ರಾಜ್ಯ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ಸಚಿವ ಕೆ. ಎಚ್.ಮುನಿಯಪ್ಪ ತಿಳಿಸಿದರು.

ಇಂದು ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ವಿಶ್ವ ಆಹಾರ ದಿನಾಚರಣೆ ಪ್ರಯುಕ್ತ ಆಯೋಜಿಸಿದ್ದ ಸಮಾರಂಭದಲ್ಲಿ ಮಾತನಾಡಿದ ಸಚಿವರು, ಹೋಟೆಲ್‌ಗಳು ಮತ್ತು ಮದುವೆ ಮಂಟಪಗಳಲ್ಲಿ ಆಹಾರ ವ್ಯರ್ಥವಾಗುವುದನ್ನು ತಡೆಯಲು ಸರ್ಕಾರವು ಕರಡು ನಿಯಮ ರೂಪಿಸಲಿದೆ. ದೇಶದಲ್ಲಿ ವಾರ್ಷಿಕವಾಗಿ 90,000 ಕೋಟಿ ರೂ. ಮೌಲ್ಯದ ಆಹಾರ ವ್ಯರ್ಥವಾಗುತ್ತದೆ.

ಭಾರತದಲ್ಲಿ ಸುಮಾರು ಶೇ.70ರಷ್ಟು ಜನಸಂಖ್ಯೆಯು ಕೃಷಿಯ ಮೇಲೆ ಅವಲಂಬಿತವಾಗಿದೆ. ರಾಗಿಯ ಬಳಕೆಯನ್ನು ಹೆಚ್ಚಿಸಬೇಕು. ಇದು ಆರೋಗ್ಯ ಸುಧಾರಿಸಲು ಉತ್ತಮವಾಗಿದೆ. ಆಹಾರವನ್ನು ವ್ಯರ್ಥ ಮಾಡದಂತೆ ಮಕ್ಕಳಿಗೆ ಕಲಿಸುವುದು ಮತ್ತು ಆಹಾರವನ್ನು ಸರಿಯಾಗಿ ಬಳಸಿಕೊಳ್ಳುವುದರ ಬಗ್ಗೆ ಜಾಗೃತಿ ಮೂಡಿಸಬೇಕಾದ ಅನಿವಾರ್ಯತೆ ಇದೆ ಎಂದು ಹೇಳಿದ್ದಾರೆ.

## ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣ

## ಪರಪ್ಪನ ಅಗ್ರಹಾರ ಜೈಲಿನಿಂದ ಆರೋಪಿ ದೀಪಕ್ ಬಿಡುಗಡೆ

# ಹೈಕೋರ್ಟ್‌ಗೆ ದರ್ಶನ್ ಪರ ವಕೀಲ ಸುನಿಲ್‌ಕುಮಾರ್ ಅರ್ಜಿ


**ಬೆಂಗಳೂರು, ಅ.17–** ಚಿತ್ರದುರ್ಗದ ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಹಲವು ಆರೋಪಿಗಳು ಜೈಲಿನಿಂದ ಬಿಡುಗಡೆಯಾಗಿದ್ದಾರೆ. ಇದೀಗ ಈ ಒಂದು ಕೊಲೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪರಪ್ಪನ ಅಗ್ರಹಾರ ಜೈಲಿನಿಂದ A13 ಆರೋಪಿ ದೀಪಕ್ ಬಿಡುಗಡೆ ಆಗಿದ್ದಾರೆ.

ಪರಪ್ಪನ ಅಗ್ರಹಾರ ಜೈಲಿನಲ್ಲಿ ಇದ್ದಂತಹ ದೀಪಕ್ ಇಂದು ಬಿಡುಗಡೆಯಾಗಿದ್ದರೆ. ಕಳೆದ ಸೋಮವಾರ ದೀಪಕ್‌ಗೆ ಜಾಮೀನು ಮಂಜೂರು ಆಗಿತ್ತು.

ನಿನ್ನೆ ಬಿಡುಗಡೆ ಆದೇಶದ ಪ್ರತಿ ಪರಪ್ಪನ ಅಗ್ರಹಾರ ಜೈಲು ಅಧಿಕಾರಿಗಳ ಕೈ ಸೇರಿದೆ. ಹೀಗಾಗಿ ಇಂದು A13 ಆರೋಪಿ ದೀಪಕ್ ಬಿಡುಗಡೆ ಆಗಿದ್ದಾನೆ.ಇನ್ನು ಇದೇ ಪ್ರಕರಣಕ್ಕೆ ಸಂಬಂಧ ಪಟ್ಟಂತೆ ನಟ ದರ್ಶನ್ ಅವರು ಹೈಕೋರ್ಟ್ ಮೊರೆ ಹೋಗಿದ್ದಾರೆ. ಜಾಮೀನು ಕೋರಿ ಹೈಕೋರ್ಟಿಗೆ ಅವರ ಪರ ವಕೀಲ ಸುನಿಲ್ ಕುಮಾರ್ ಅರ್ಜಿ ಸಲ್ಲಿಸಿದ್ದಾರೆ. ಈ ಒಂದು ಅರ್ಜಿಯ ವಿಚಾರಣೆ ಅಕ್ಟೋಬರ್ 22ರಂದು ನಡೆಯಲಿದೆ.

ಅದೇ ರೀತಿಯಾಗಿ ಪವಿತ್ರ ಗೌಡ ಕೂಡ ಬುಧವಾರ ಹೈಕೋರ್ಟ್‌ಗೆ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದಾರೆ ಎಂದು ತಿಳಿದು ಬಂದಿದೆ.

# ರಾಮ ನಾಮ ಜಪಿಸಿರೊ



ವಾಲ್ಮೀಕಿ ಯಾರಿಗೆ ತಾನೆ ಗೊತ್ತಿಲ್ಲ. ವಾಲ್ಮೀಕಿ ಹೆಸರು ಕೇಳಿದ ತಕ್ಷಣ ನೆನಪಾಗುವದು ರಾಮಾಯಣ. ರಾಮನ ಪತ್ನಿ ತುಂಬು ಗರ್ಭಿಣಿ ಸೀತಾ ಮಾತೆಗೆ ಆಶ್ರಯ ಕೊಟ್ಟದ್ದು ಇದೇ ವಾಲ್ಮಿಕಿ ಎಂಬುದು ಎಲ್ಲರಿಗು ತಿಳಿದ ವಿಷಯ ಆದರೆ ವಾಲ್ಮಿಕಿಯ ಮೂಲ ಹೆಸರು ಹಾಗೂ ಇತಿಹಾಸ ಬಲ್ಲವರು ಬೆರಳೆಣಿಕೆಯಷ್ಟು.

ವಾಲ್ಮಿಕಿ ಜಯಂತಿಯನ್ನು ಅಕ್ಟೋಬರ್ 17ಕ್ಕೆ ಆಚರಿಸುತ್ತೆವಾದರು ವಾಲ್ಮಿಕಿಯ ಹುಟ್ಟಿದ ದಿನ ಇದೇ ಎಂಬ ನಿಖರ ಮಾಹಿತಿಗಳಿಲ್ಲ. ಬಲ್ಲ ಮೂಲಗಳ ಪ್ರಕಾರ ಶರತ್ಕಾಲದ ಹುಣ್ಣಿಮೆಯಂದು ಜನಿಸಿದರು ಎಂಬ ಮಾಹಿತಿ ಆಧಾರದ ಮೇಲೆ ನವರಾತ್ರಿಯ ನಂತರ ಬರುವ ಹುಣ್ಣಿಮೆಯಂದು ವಾಲ್ಮಿಖಿ ಜನ್ಮ ದಿನವೆಂದು ಆಚರಿಸಲಾಗುವದು.

ಮಹರ್ಷಿ ವಾಲ್ಮಿಕಿಯ ಮೂಲ ಹೆಸರು ರತ್ನಾಕರ. ಆಕಸ್ಮಿಕವಾಗಿ ತಂದೆ ತಾಯಿಯಿಂದ ಬೇರ್ಪಟ್ಟು ಕಾಡಿನಲ್ಲಿ ಕಣ್ಮರೆಯಾದ ರತ್ನಾಕರನು ಒಬ್ಬ ಬೇಟೆಗಾರನಿಗೆ ಸಿಕ್ಕನು. ಆ ಬೇಟೆಗಾರ ತನಗೆ ಗೊತ್ತಿರುವ ವಿದ್ಯೆ ಕಲಿಸಿ ವಯಸ್ಸಿಗೆ ಬಂದಾಗ ರತ್ನಾಕರನ ಮದುವೆಯನ್ನು ಮಾಡಿದನು.

ಅಲ್ಲಿಯವರೆಗೆ ಎಲ್ಲವು ಚೆನ್ನಾಗಿತ್ತು ಆದರೆ ರತ್ನಾಕರನ ಸಂಸಾರ ಬೆಳೆದಂತೆ ಆರ್ಥಿಕ ಸಂಕಷ್ಟ ಎದುರಾದಾಗ ರತ್ನಾಕರ ದರೋಡೆ ಮಾಡಲು ಆರಂಭಿಸಿದನು. ಕಾಡಿನ ದಾರಿಯಲ್ಲಿ ಹೊರಟವರ ಅಡ್ಡಗಟ್ಟಿ ಅವರ ವಸ್ತು, ಹಣ ಆಭರಣಗಳನ್ನು ಹೆದರಿಸಿ ಬೆದರಿಸಿ ದೋಚುತಿದ್ದನು. ಕೊಡದೆ ಇದ್ದರೆ ಕೊಲ್ಲಲು ಹಿಂದೆ ಮುಂದೆ ಯೋಚಿಸದೆ ಕಟುಕನಾಗಿದ್ದನು ರತ್ನಾಕರ.

ಹೀಗಿರುವಲ್ಲಿ ಒಮ್ಮೆ ಅದೇ ಕಾಡಿನ ದಾರಿಯಲ್ಲಿ ನಾರಾಯಣನ ಸ್ಮರಣೆ ಮಾಡುತ್ತಾ ಹೊರಟ ನಾರದರನ್ನು ತಡೆದು ಅವರ ಬಳಿ ಇರುವುದೆಲ್ಲವ ಕೊಡಬೇಕೆಂದು ಬೆದರಿಸಿದನು. ಲೋಕ ಸಂಚಾರಿ ನಾರದರ ಬಳಿ ತಂಬೂರಿಯ ಹೊರತು ಬೇರೆನಿತ್ತು. ಅದನ್ನೇ ಕೊಟ್ಟರು ನಾರದರು.

ತನ್ನ ಕಂಡು ಎಲ್ಲರು ಹೆದರುವಾಗ ಇದಾವ ಸನ್ಯಾಸಿ ಭಯವೇ ಇಲ್ಲದೆ ನಗುತ್ತಿರುವನು. ಅದು ಕೇವಲ ಒಂದು ತಂಬೂರಿ ಅಷ್ಟೆ ಜೊತೆಗೆ ಇರುವದು ಎಂದು ಮಾತಿಗೆಳೆದನು.

ಎಲ್ಲವನ್ನು ಭಗವಾನ್ ನಾರಾಯಣನೆ ಕೊಡುವಾಗ ನನಗೆ ಯಾಕೆ ಹಣ, ಒಡವೆ ವಸ್ತ್ರಗಳ ಬಯಕೆ ಎಂದ ನಾರದರ ಮಾತು ಕೇಳಿ ಆಶ್ಚರ್ಯವಾಯಿತು ರತ್ನಾಕರನಿಗೆ. ನಾರಾಯಣನು ಯಾರು ನನಗೂ ಎಲ್ಲವನ್ನು ಕೊಡುವನೆ ಎಂದಾಗ ಅವನ ಸ್ಮರಣೆ ಮಾಡಿದರೆ ಕೊಡುವನು ಎಂದುತ್ತರಿಸಿದರು ನಾರದರು.

ಈಗಾಗಲೇ ನೀನು ದುರ್ಮಾರ್ಗದಿಂದ ಪಾಪಗಳನ್ನು ಹೆಚ್ಚಿಸಿಕೊಂಡಿವೆ. ನಿನ್ನ ಪಾಪ ನೀನೆ ಹೊರಬೇಕು. ಆ ನಿನ್ನ ಪಾಪ ಕರ್ಮ ಕಳೆದರೆ ನಿನಗೂ ಭಗವಂತನ ದರ್ಶನವಾಗುವದು ಎಂದ ನಾರದರು ನಿನ್ನ ಪಾಪ ಕರ್ಮದಲ್ಲಿ ನಿನ್ನ ಪತ್ನಿಯ ಪಾಲು ಇರುವುದಾ ಕೇಳಿ ನೋಡು ಎಂದನು. ರತ್ನಾಕರ ಕೂಡಲೇ ಪತ್ನಿಯ ಬಳಿಗೆ ಸಾಗಿ ಕೇಳಿದಾಗ. ನಿನ್ನ ನಂಬಿ ಬಂದ ನನ್ನನ್ನು ನೋಡಿಕೊಳ್ಳುವದು ನಿನ್ನ ಕರ್ತವ್ಯ ಆದರೆ ನೀನು ಪಾಪದ ಕೆಲಸ ಮಾಡ ಸಂಪಾದಿಸದರೆ ಆ ಪಾಪದಲ್ಲಿ ನಾನಾಗಲಿ ಮಕ್ಕಳಾಗಲಿ ಪಾಲುದಾರರಲ್ಲ ಎಂದ ಹೆಂಡತಿಯ ಮಾತು ಕೇಳಿ ಈ ಜಗತ್ತಿನಲ್ಲಿ ನಾವು ಮಾಡಿದ್ದು ನಾವೇ ಅನುಭವಿಸಬೇಕು ಎಂಬ ನಾರದರ ಮಾತು ನೆನಪಾಗಿ ನಾರದರ ಬಳಿ ಬಂದು ಯಾರಿಗಾಗಿ ನಾನು ಪಾಪ ಕೃತ್ಯಗಳನ್ನು ಮಾಡಿದೆನೋ ಅವರು ಪಾಪದಲ್ಲಿ ಪಾಲುದಾರರು ಆಗುವುದಿಲ್ಲವಂತೆ. ಸನ್ಯಾಸಿಯೆ ನನಗೀಗ ಅರಿವಾಗಿದೆ ನಾನು ನನ್ನದು ಎನ್ನುವ ಭ್ರಮೆ ಕಳಚಿದೆ , ನಾನು ನನ್ನ ಪಾಪ ಕರ್ಮವ ಕಳೆದುಕೊಂಡು ಭಗವಾನ್ ನಾರಾಯಣನ ದರ್ಶನ ಪಡೆಯುವ ಬಗೆ ಹೇಗೆ ಎಂದು ಅಂಗಲಾಚಿ ಕೇಳಿದನು.

ಭಗವಾನ್ ವಿಷ್ಣುವಿನ ಅವತಾರವಾಗಿ ಈ ಭೂಮಿಯಲ್ಲಿ ಜನ್ಮ ತಳೆದ "ರಾಮ" ನ ಸ್ಮರಣೆ ಮಾಡಲು ಹೇಳುವನು ಆದರೆ ರತ್ನಾಕರನಿಗೆ ರಾಮ ಎಂಬುದನ್ನು ನುಡಿಯಲು ಆಗುವುದೇ ಇಲ್ಲ, ಭಗವಂತನ ಸ್ಮರಣೆ ಕೂಡ ಮಾಡಲಾಗುತಿಲ್ಲ ಎಂದು ದುಖಿಃಸಿದಾಗ ನಾರದರು " ಮರಾ ಮರಾ " ಎನ್ನುವಂತೆ ಹೇಳುವರು ಅಂತೆಯೆ ರತ್ನಾಕರ ಮರಾ ಮರಾ ಎನ್ನುತ್ತ ಅವನ ಬಾಯಿಂದ ರಾಮ ನಾಮ ಸ್ಮರಣೆ ಹೊರಟಿತು.

ರಾಮ ನಾಮ ಸ್ಮರಣೆಯಲ್ಲೇ ವರ್ಷಗಳು ಉರುಳಿದವು. ಹಸಿವು, ಬಾಯಾರಿಕೆ, ನಿದ್ದೆ ಮರೆತು ರಾಮ ನಾಮ ಸ್ಮರಣೆಯಲ್ಲಿ ಕಳೆದ ರತ್ನಾಕರನ ಸುತ್ತಲು ಮಣ್ಣಿನ ದಿಬ್ಬ ಬೆಳೆದಿತ್ತು. ಆ ಮಣ್ಣಿನ ದಿಬ್ಬದಿಂದ ಹೊರಬಂದ ರಾಮ ನಾಮ ಅದೇ ದಾರಿಯಲ್ಲಿ ಹೊರಟ ನಾರದರಿಗೆ ಕೇಳಿ ನಿಧಾನವಾಗಿ ದಿಬ್ಬದ ಮಣ್ಣನ್ನು ಹೊರತಗೆದರು.

ರಾಮ ನಾಮ ಸ್ಮರಣೆಯಿಂದ ರತ್ನಾಕರನಲ್ಲಿ ದಿವ್ಯ ತೇಜಸ್ಸು ಮೂಡಿತು. ದೈವ ಕಳೆ ರೂಪಗೊಂಡಿದ್ದನ್ನು ಕಂಡ ನಾರದರು ಮರು ಜನ್ಮ ಪಡೆದಂತ ರತ್ನಾಕರನಿಗೆ ಮಹರ್ಷಿ ವಾಲ್ಮಿಕಿ ಎಂಬ ನಾಮವನಿಟ್ಟರು. ಆ ಇರುವೆಗಳಿಂದಾದ ಮಣ್ಣಿನ ದಿಬ್ಬ ಇರುವ ಕಾಡಿಗೆ ತಪೋವನ ಎಂಬ ಹೆಸರು ಬಂದಿತು. ಈ ತಪೋವನ ಪಶ್ಚಿಮ ಬಂಗಾಳದ ಜಾರ್ಗ್ರಾಮ ಜಿಲ್ಲೆಯಲ್ಲಿದೆ.

ಮುಂದೆ ಇದೇ ವಾಲ್ಮಿಕಿ ಆಶ್ರಮದಲ್ಲಿ ಗರ್ಭವತಿಯಾದ ಸೀತಾ ಮಾತೆಯು ಆಶ್ರಯ ಪಡೆಯುವಳು. ಲವ ಕುಶರಿಗೆ ಜನ್ಮ ನೀಡುವಳು. ತನ್ನ ಆರಾಧ್ಯ ದೈವದ ಸತಿ ಹಾಗು ಮಕ್ಕಳಿಗೆ ಆಶ್ರಯ ನೀಡಿದ ವಾಲ್ಮಿಕಿಯು ರಾಮನ ಚರಿತೆಯನ್ನು ಬರೆಯಲಾರಂಬಿಸಿದನು. ರಾಮನ ಸಂಪೂರ್ಣ ಚರಿತೆಯನ್ನು ರಾಮಾಯಣ ಎಂಬ ಮಹಾನ್ ಕೃತಿಯಲ್ಲಿ ದಾಖಲಿಸಿದವರು ಮಹರ್ಷಿ ವಾಲ್ಮಿಕಿಯವರು.



– ಸುಮಾ ಉಮೇಶಗೌಡ

# ಭಾವಪೂರ್ಣ ನೃತ್ಯಾಭಿನಯದ ದಿವ್ಯ ನರ್ತನ

ಕನ್ನಡ ಕೃತಿಗಳನ್ನು ನೃತ್ಯಗಳಿಗೆ ಅಳವಡಿಸಿ ಅದನ್ನು ರಂಗದ ಮೇಲೆ ಸುಂದರಾಭಿನಯದೊಂದಿಗೆ ಯಶಸ್ವಿಯಾಗಿ ಸಾಕಾರಗೊಳಿಸಿದ ನರ್ತನ ವೈಖರಿಯನ್ನು ಅವಲೋಕಿಸುವುದೇ ಒಂದು ಚೆಂದ. ಹೃದಯಕ್ಕೆ ಆಪ್ತತೆ. ಪ್ರತಿಬಾರಿಯೂ ಇಂಥ ರಸಮಯ ಗಳಿಗೆಗಳನ್ನು ಸೃಷ್ಟಿಸುವ ವೈಶಿಷ್ಯದ, ತಮ್ಮ ಅಸ್ಮಿತೆಯನ್ನು ಎತ್ತಿಹಿಡಿಯುವ ನಾಟ್ಯಗುರು ವಿದುಷಿ. ಕಾವ್ಯ ದಿಲೀಪ್ ಪ್ರಯೋಗಶೀಲ ನೃತ್ಯ ಸಂಯೋಜಕಿ ಉತ್ತಮ ನೃತ್ಯಕೋವಿದೆ ಮತ್ತು ಬದ್ಧತೆಯುಳ್ಳ ನಾಟ್ಯಗುರು.

ಸಾಮಾನ್ಯವಾಗಿ ಕಾವ್ಯ, ಕನ್ನಡ ಕೃತಿಗಳಿಗೇ ಪ್ರಾಧಾನ್ಯ ನೀಡುವ ಸತ್ಸಂಪ್ರದಾಯವನ್ನು ಪಾಲಿಸಿಕೊಂಡು ಬರುತ್ತಿರುವುದು ವಿಶೇಷ. ಜೊತೆಗೆ ಆದಷ್ಟು ಕೃತಿಗಳಿಗೆ ತಾವೇ ಸೃಜನಾತ್ಮಕ– ಹಾಗೂ ಕಲಾತ್ಮಕತೆಗೆ ಒತ್ತುನೀಡಿ ವಿಶೇಷ ಬಗೆಯಲ್ಲಿ ನೃತ್ಯ ಸಂಯೋಜನೆಯನ್ನು ಮಾಡುತ್ತ ಬಂದಿರುವುದು ಕೂಡ ಗಮನಾರ್ಹ. ಅದರಂತೆ ಈ ಬಾರಿಯೂ ಅವರ ನುರಿತ ಗರಡಿಯಲ್ಲಿ ತಯಾರಾದ ಉದಯೋನ್ಮುಖ ನೃತ್ಯ ಕಲಾವಿದೆ ಶ್ರೀಮತಿ ದಿವ್ಯ ಪಾಲಾಕ್ಷ ನುರಿತ ನರ್ತಕಿಯಂತೆ ಬಹು ಆತ್ಮವಿಶ್ವಾಸದಿಂದ ಲೀಲಾಜಾಲವಾಗಿ, ಸೇವಾಸದನದಲ್ಲಿ ತಮ್ಮ ಭರತನಾಟ್ಯದ ರಂಗಪ್ರವೇಶವನ್ನು ಯಶಸ್ವಿಯಾಗಿ ನೆರವೇರಿಸಿಕೊಂಡರು.

'ಪುಷ್ಪಾಂಜಲಿ'ಯ ಮೂಲಕ ಗುರು ಹಿರಿಯರಿಗೆ, ದೇವಾನುದೇವತೆಗಳಿಗೆ, ಪ್ರೇಕ್ಷಕರಿಗೆ ಮತ್ತು ಸಂಗೀತ ಕಲಾವಿದರಿಗೆ ಗೌರವಪೂರ್ವಕ ನೃತ್ತನಮನಗಳನ್ನು ದಿವ್ಯ, ತಮ್ಮ ಖಚಿತವಾದ ಹೆಜ್ಜೆ–ಗೆಜ್ಜೆಗಳಿಂದ ಅಂಗಶುದ್ಧವಾಗಿ ನರ್ತಿಸಿ ಮೆಚ್ಚುಗೆ ಗಳಿಸಿದರು. ಗುರು ಕಾವ್ಯ ದಿಲೀಪರ ಕವಿತ್ವಂ ಧಾಟಿಯ ನಟುವಾಂಗದ ಸೊಗಡಿನಿಂದ ಪ್ರೇರಣೆ ಪಡೆದು, ಗೌರಿತನಯನನ್ನು ಗಜವದನ ಬೇಡುವೆ ಎಂದು ಪ್ರಥಮ ಪೂಜಿತ ಗಣಪತಿಯ ವಿವಿಧ ಭಾವ–ಭಂಗಿಗಳನ್ನು ಚಿತ್ರಿಸಿದರು.

ಮುಂದೆ ಮನರಂಜಿಸಿದ್ದು ಸೊಗಸಾದ ಭಂಗಿಗಳಿಂದ ಕೂಡಿದ ಶಂಕರಾಭರಣ ರಾಗದ, ಸ್ವಾತಿ ತಿರುನಾಳ್ ಮಹಾರಾಜರ ರಚನೆ 'ನೃತ್ಯತಿ ನೃತ್ಯತಿ ಶ್ರೀ ಸಾಂಬಶಿವ' ಕೃತಿ. ನಟರಾಜನ ವಿವಿಧ ಭಂಗಿಗಳನ್ನು ಆಕರ್ಷಕವಾಗಿ ಸಾಕ್ಷಾತ್ಕಾರಗೊಳಿಸಿದ ದಿವ್ಯಳ ಮಿಂಚಿನ ಸಂಚಾರದ ನೃತ್ತ ಮೇಳಕ್ಕೆ ಕಾವ್ಯ ತಮ್ಮ ಸ್ಫುಟವಾದ, ಪ್ರವಾಹೋಪಾದಿಯ ನಟುವಾಂಗದ ನಿರ್ಝರಿಯಿಂದ ವೇಗದ ಓಘ ನೀಡಿದರು. ನಂದೀಕೇಶ್ವರನ ವಿವಿಧ ಭಂಗಿಗಳ ವೈಶಿಷ್ಟ್ಯತೆಯನ್ನು ಅನಾವರಣಗೊಳಿಸಿದ ಕಲಾವಿದೆ, ಉತ್ಸಾಹದಿಂದ ನರ್ತಿಸಿ, ಶಿವಾರಾಧನೆಯನ್ನು ಭಕ್ತಿಪೂರ್ಣವಾಗಿ ನೆರವೇರಿಸಿದರು.

'ಶಬ್ದಂ' ಒಂದು ಸಾಲಿನ ಸಾಹಿತ್ಯಕ್ಕೆ ಒಂದು ಜತಿಯನ್ನು ಅಥವಾ ಕೊರ್ವೆಯನ್ನು ಸೇರಿಸಿ ಇದನ್ನು ಪ್ರಸ್ತುತಪಡಿಸಲಾಗುತ್ತದೆ. ಮೊದಲ ಬಾರಿಗೆ ಅಭಿನಯವನ್ನು ಇಲ್ಲಿ ಪರಿಚಯಿಸಲಾಗುತ್ತದೆ. ಪ್ರಶಾಂತರ ಸುಶ್ರಾವ್ಯ ವೀಣಾನಿನಾದ ಮತ್ತು ಸ್ಕಂಧಕುಮಾರರ ವೇಣುಗಾನದ ಆಮೋದದಲ್ಲಿ ಆರಂಭಗೊಂಡ ಸುಂದರಕೃತಿ, 'ಸರಸಿಜಾಕ್ಷಿಯರು ಜಳಕ ಮಾಡುತ ಇರುವ ಸಮಯದಿ.....ಕದ್ದು ನೋಡುತ್ತಿರುವುದು ನ್ಯಾಯವೇ' ಎಂಬುದಾಗಿ ಕೃಷ್ಣನ ತುಂಟಾಟ–ಹುಡುಗಾಟಗಳನ್ನು ಪ್ರಶ್ನಿಸುವ ಪರಿ, ಕನ್ನಡದ ಇಂಪಿನಲ್ಲಿ (ಕನ್ನಡಾನುವಾದ–ಅಂಬಾಳೆ ಸುಬ್ಬರಾವ್) ಸೊಗಯಿಸಿತು. ಮನನೀಯ ಸಾಹಿತ್ಯಕ್ಕೆ ಅನುಗುಣವಾಗಿ ದಿವ್ಯ, ತನ್ನ ಕಮನೀಯ ಅಭಿನಯದಲ್ಲಿ ಮತ್ತು ನೃತ್ತಗಳ ಬೆಡಗಿನಲ್ಲಿ ಕೃಷ್ಣನ ಲೀಲಾವಿನೋದಗಳಿಗೆ ಕನ್ನಡಿ ಹಿಡಿದಳು. ಕಾವ್ಯರ ದೃಶ್ಯಾತ್ಮಕ ಆಯಾಮದ ನೃತ್ಯಸಂಯೋಜನೆ, ನಾಟಕೀಯ ಗುಣಗಳಿಂದ ನೋಡುಗರನ್ನು ಆವರಿಸಿಕೊಂಡಿತು.

ವರ್ಣ– ಭರತನಾಟ್ಯದ ಹೃದಯಭಾಗ ಹಾಗೇ ಹೃದ್ಯಭಾಗವೂ ಕೂಡ. ನವರಾತ್ರಿಯ ಪ್ರಶಸ್ತ ಸಂದರ್ಭದಲ್ಲಿ ಸಪ್ತಮಾತೃಕೆಯರ ಮಹಿಮೆಯನ್ನು ಸಾಕಾರಗೊಳಿಸುವ ಈ ವರ್ಣದ ರಚನಾಕಾರರು ಜಿ. ಗುರುಮೂರ್ತಿ. ಪಾಂಡ್ಯರಾಜನ ಪುತ್ರಿ ಮೀನಾಕ್ಷಿ ಹಾಗೂ ಸುಂದರೇಶ್ವರರ ವಿವಾಹದ ಸಂಚಾರಿಯನ್ನು ಒಳಗೊಂಡ ಕೃತಿ ಪ್ರಜ್ವಲವಾಗಿ ಪ್ರಸ್ತುತಗೊಂಡಿತು. 'ದೇವಿ ಸಪ್ತಮಾತೃ ರೂಪಿಣಿ ಪಾಹಿಮಾಂ' (ರಾಗಮಾಲಿಕೆ–ಆದಿತಾಳ) ಎಂದು ದೇವಿಯ ಕೃಪೆಯನ್ನು ಬೇಡುವ ಭಕ್ತಿಪ್ರಧಾನ ವರ್ಣವನ್ನು ದಿವ್ಯ, ಬಹು ಭಕ್ತಿ ತಾದಾತ್ಮ್ಯತೆಯಿಂದ ದೇವಿಯ ಸುಪ್ರಸನ್ನ ಮನೋಹರ ರೂಪ ಹಾಗೂ ಅರಿ ಭಯಂಕರಿಯ ರುದ್ರ– ಭಯಾನಕ ಅವತಾರವನ್ನು ತನ್ನ ಸೊಗಸಾದ ಅಭಿನಯ–ಕೆಂಗಣ್ಣುಗಳ ಅಭಿವ್ಯಕ್ತಿಯ ಮೂಲಕ ಝೇಂಕರಿಸಿದಳು. ಮಿಂಚಿನ ವೇಗದ ನೃತ್ತ ಸೌಂದರ್ಯದಲ್ಲಿ, ಸುಂದರ ಅಭಿನಯ ಹೊಳಪಿನಲ್ಲಿ ಮನಸೂರೆಗೊಂಡಳು. ಕಾವ್ಯರ ಧ್ವನಿಯ ಮಾಧುರ್ಯಪೂರ್ಣ ನಟುವಾಂಗದ ಬನಿ ನಾಟ್ಯಕ್ಕೆ ಪೂರಕವಾಗಿ, ಕಲಾವಿದೆಗೆ ಸ್ಫೂರ್ತಿ ನೀಡುವ ನಿಟ್ಟಿನಲ್ಲಿ ಪ್ರಧಾನ ಪಾತ್ರ ವಹಿಸಿತು ಮತ್ತು ದಿವ್ಯಳ ಕಮನೀಯ ನರ್ತನಕ್ಕೆ ಸ್ಫೂರ್ತಿಚೇತನವಾದರು.

ಕಾವ್ಯರ ಒಂದು ವೈಶಿಷ್ಟ್ಯವೆಂದರೆ ಪ್ರತಿಕೃತಿಗೂ ತಪ್ಪದೆ ಅವರು ನಿರ್ವಹಿಸುವ ನಟುವಾಂಗದ ಸಾಂಗತ್ಯ ಗಮನಾರ್ಹ. ಶಿಷ್ಯೆಗೆ ಹಲವಾರು ತಿಂಗಳುಗಳು ತರಬೇತಿ ನೀಡುವ ಪರಿಶ್ರಮದಿಂದ ಹಿಡಿದು, ಪ್ರತಿಕೃತಿಗಳಿಗೂ ನೃತ್ಯಸಂಯೋಜಿಸಿ, ತಾಳ–ಲಯಗಳ ಸಹಕಾರಿ ಕಾರ್ಯ ಅವರ ಅಸ್ಮಿತೆ.

ಚೇತೋಹಾರಿಯಾಗಿ ನರ್ತಿಸಿದ ದಿವ್ಯಳ ಹೆಜ್ಜೆ–ಗೆಜ್ಜೆಗಳ ಮೇಳಕ್ಕೆ ತಮ್ಮ ಭಾವಪೂರಿತ ಹಾಡುಗಾರಿಕೆಯಲ್ಲಿ ಲಕ್ಷ್ಮೀ ವರುಣ್ ಅಮೋಘವಾಗಿ ಸಾಥ್ ನೀಡಿದರು. ವಿಶೇಷ ಜತಿಗಳನ್ನು ಹೆಣೆದು, ಪ್ರಸ್ತುತಿಗೆ ಮೃದಂಗ ನುಡಿಸಿದವರು ಜಿ. ಎಸ್.ನಾಗರಾಜ್.

ಪ್ರಸ್ತುತಿಯ ಉತ್ತರಾರ್ಧದಲ್ಲಿ ದಿವ್ಯ ನರ್ತಿಸಿ– ಅಭಿನಯಿಸಿದ ಪ್ರಣಯ ಕೇಂದ್ರಿತ ಭಾವನೆಯ 'ಜಾವಳಿ'ಯಲ್ಲಿ ವಾಸಿಕಸಜ್ಜಿಕಾ ನಾಯಕಿಯ ಆಸೆ–ಕನಸು–ಕಲ್ಪನೆಗಳ ( ರಚನೆ–ವೆಂಕಟಾದ್ರಿ ಶ್ಯಾಮರಾವ್ –ರಾಗ– ಬೇಹಾದ್, ಆದಿತಾಳ) ಮನಮೋಹಕ ಅಭಿವ್ಯಕ್ತಿಯಲ್ಲಿ ಇದೇನೇ ಸಖಿ ಕಾಂತನು ಮುನಿದಿರ್ಪ ಎಂದು ಕಳವಳಗೊಳ್ಳುವ ಸಂದರ್ಭವನ್ನು ದಿವ್ಯ ಪಾತ್ರದೊಳಗೆ ಪರಕಾಯ ಪ್ರವೇಶ ಮಾಡಿ ಅನುಭವಜನ್ಯವಾಗಿಸಿದಳು. ನಂತರ– ಬಾಗಿಲನು ತೆರೆದು ಸೇವೆಯನು ಕೊಡೋ ಹರಿಯೇ –ಕನಕದಾಸರ ದೇವರನಾಮವನ್ನು ಪರಿಣಾಮಕಾರಿಯಾಗಿ ನಿರೂಪಿಸಿದಳು.



ಅಂತ್ಯದಲ್ಲಿ 'ತಿಲ್ಲಾನ' ಮನೋಲ್ಲಾಸಕರವಾಗಿ ಲವಲವಿಕೆಯಿಂದ ಸಾಗಿತು. 'ಕಾಯೌ ಶ್ರೀಗೌರಿ ಕರುಣಾ ಲಹರಿ' ಮಂಗಳದೊಂದಿಗೆ ಪ್ರಸ್ತುತಿ ಸಂಪನ್ನಗೊಂಡಿತು.–

– ವೈ.ಕೆ.ಸಂಧ್ಯಾ ಶರ್ಮ



ಧಾರವಾಡ ತಾಲೂಕಿನ ಶಿವಳ್ಳಿ ಗ್ರಾಮದಲ್ಲಿ ಗುರುವಾರ ಶೀಗಿ ಹುಣ್ಣಿಮೆ ಅಂಗವಾಗಿ ರೈತ ಕುಟುಂಬಸ್ಥರು ಭೂಮಿಪೂಜೆ ಸಲ್ಲಿಸಿದರು.

### ಬೀದರ್‌ನಲ್ಲಿ ಇಎಸ್‌ಐ ಆಸ್ಪತ್ರೆ ಆರಂಭಕ್ಕೆ ಒತ್ತಡ

## ಕೇಂದ್ರ ಸಚಿವ ಮನ್ಸೂಖ್ ಮಾಂಡವಿಯಾ, ಶೋಭಾ ಕರಂದ್ಲಾಜೆಗೆ ಮನವಿ

**ಬೀದರ್, ಅ.17–** ಮಹಾರಾಷ್ಟ್ರ ಹಾಗೂ ತೆಲಂಗಾಣ ಉಭಯ ರಾಜ್ಯಗಳ ಗಡಿಯಲ್ಲಿರುವ ಬೀದರ್ ಜಿಲ್ಲೆಯಲ್ಲಿ ಕಾರ್ಮಿಕರ ಆರೋಗ್ಯದ ಹಿತದೃಷ್ಟಿಯಿಂದ ಇಎಸ್‌ಐ ಆಸ್ಪತ್ರೆ ಆರಂಭಿಸುವಂತೆ ಕೇಂದ್ರ ಸರ್ಕಾರಕ್ಕೆ ಬೀದರ್ ದಕ್ಷಿಣ ಕ್ಷೇತ್ರದ ಬಿಜೆಪಿ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಮನವಿ ಮಾಡಿದ್ದಾರೆ.

ಕೇಂದ್ರ ಕಾರ್ಮಿಕ ಹಾಗೂ ಉದ್ಯೋಗ ಖಾತೆ ಮಂತ್ರಿ ಮನ್ಸೂಕ್ ಮಾಂಡವಿಯಾ ಮತ್ತು ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ ಅವರಿಗೆ ನವದೆಹಲಿಯಲ್ಲಿ ಭೇಟಿ ಮಾಡಿ ಈ ಕುರಿತು ಮನವಿ ಪತ್ರ ಸಲ್ಲಿಸಿರುವ ಶಾಸಕ ಬೆಲ್ದಾಳೆ ಗಡಿ ಭಾಗದ ಕಾರ್ಖಾನೆಗಳು ಸೇರಿದಂತೆ ವಿವಿಧೆಡೆ ಉದ್ಯೋಗದಲ್ಲಿ ತೊಡಗಿರುವ ದುಡಿಯುವ ವರ್ಗದವರ ಆರೋಗ್ಯ ರಕ್ಷಣೆಗಾಗಿ ಇಎಸ್‌ಐ ಆಸ್ಪತ್ರೆ ಆರಂಭಿಸುವದರ ಅಗತ್ಯವಿದೆ ಎಂದು ಮನವರಿಕೆ ಮಾಡಿದ್ದಾಗಿ ತಿಳಿಸಿದರು.



ಬೀದರ್ ದಕ್ಷಿಣ ಕ್ಷೇತ್ರದ ಬಿಜೆಪಿ ಶಾಸಕ ಡಾ.ಶಲೇಂದ್ರ ಬೆಲ್ದಾಳೆ ಅವರು, ಕೇಂದ್ರ ಕಾರ್ಮಿಕ ಹಾಗೂ ಉದ್ಯೋಗ ಖಾತೆ ಮಂತ್ರಿ ಮನ್ಸೂಕ್ ಮಾಂಡವಿಯಾ ಹಾಗೂ ಕೇಂದ್ರ ಕಾರ್ಮಿಕ ಸಚಿವೆ ಶೋಭಾ ಕರಂದ್ಲಾಜೆ ಅವರಿಗೆ ನವದೆಹಲಿಯಲ್ಲಿ ಭೇಟಿ ಮಾಡಿದರು.

ಬೀದರ್ ಜಿಲ್ಲೆ ಕರ್ನಾಟಕದ ಅತೀ ಹಿಂದುಳಿದ ಪ್ರದೇಶದಲ್ಲಿ ಸೇರಿದೆ. ಜಿಲ್ಲೆ ಸುಮಾರು 20 ಲಕ್ಷ ಜನಸಂಖ್ಯೆ ಹೊಂದಿದ್ದು, ಹೆಚ್ಚಿನ ಜನರು ಕೃಷಿಯನ್ನೇ ಅವಲಂಬಿಸಿದ್ದಾರೆ. ಜಿಲ್ಲೆಯಲ್ಲಿ ಕೂಲಿ ಕಾರ್ಮಿಕರ ಸಂಖ್ಯೆ ಕೂಡ ಗಣನೀಯ ಜಾಸ್ತಿಯಿದೆ. ಬೀದರ್ ನಗರದ ಹೊರವಲಯದ ಕೊಳಾರ್‌ನಲ್ಲಿ ಕೈಗಾರಿಕಾ ವಸಾಹತು ಪ್ರದೇಶವಿದ್ದು, 1600 ಎಕರೆ ಜಮೀನಿದೆ. ಜಿಲ್ಲೆಯ ಹುಮನಾಬಾದ್ ಕೈಗಾರಿಕಾ ವಸಾಹತು ಪ್ರದೇಶದಲ್ಲಿ ಸಹ ಸುಮಾರು 800 ಎಕರೆ ಜಾಗವಿದೆ. ಈ ಪ್ರದೇಶದಲ್ಲಿ ಸಣ್ಣ ಹಾಗೂ ಮಧ್ಯಮ ಪ್ರಮಾಣದ ನೂರಾರು ಕಾರ್ಖಾನೆಗಳಿವೆ. ಇಲ್ಲಿ ಸಾವಿರಾರು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. ಈ ಕಾರ್ಮಿಕರ ಆರೋಗ್ಯದ ದೃಷ್ಟಿಯಿಂದ ಜಿಲ್ಲೆಯಲ್ಲಿ ಇಎಸ್‌ಐ ಆಸ್ಪತ್ರೆ ಆರಂಭಿಸುವುದರ ಅತ್ಯಗತ್ಯವಿದೆ ಎಂದು ಮನದಟ್ಟು ಮಾಡಿದ್ದಾರೆ.

**ಅಮೂಲ್ಯ ಸಮಯದ ವ್ಯಯ:** ಕಾರ್ಮಿಕರು ಮತ್ತವರ ಪರಿವಾರದವರಿಗೆ ಆರೋಗ್ಯ ಸಮಸ್ಯೆ ಎದುರಾದರೆ ಬೇರೆ, ಬೇರೆ ನಗರದ ಇಎಸ್ ಐ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯುವುದು ಕಷ್ಟಕರವಾಗುತ್ತಿದೆ. ಬೇರೆಡೆ ಚಿಕಿತ್ಸೆಗೆ ಹೋಗಬೇಕಾದ ಕಾರಣ ತುರ್ತು ಪರಿಸ್ಥಿತಿಯಲ್ಲಿ ಹಲವರು ತಮ್ಮ ಪ್ರಾಣ ಕಳೆದುಕೊಂಡಿದ್ದಾರೆ. ಇನ್ನು ಬೇರೆಡೆ ಕರೆದುಕೊಂಡು ಹೋಗುವುದು ಅಮೂಲ್ಯ ಸಮಯದ ವ್ಯಯದ ಜೊತೆಗೆ ಹೆಚ್ಚಿನ ಖರ್ಚು ಸಹ ಮೈಮೇಲೆ ಬರುತ್ತಿದೆ. ಇದರಿಂದ ಅಲ್ಪ ವೇತನದಲ್ಲಿ ದುಡಿಯುತ್ತಿರುವ ಕಾರ್ಮಿಕರು ಆರ್ಥಿಕ ತೊಂದರೆಗೆ ಸಿಲುಕುತ್ತಿದ್ದಾರೆ. ಹೀಗಾಗಿ ಕಾರ್ಮಿಕರ ಮತ್ತವರ ಕುಟುಂಬದ ಹಿತಕ್ಕಾಗಿ ಶೀಘ್ರ ಕ್ರಮ ಕೈಗೊಳ್ಳುವಂತೆ ಬೆಲ್ದಾಳೆ ಕೋರಿದ್ದಾರೆ.

**ಸಕಲ ಸೌಲಭ್ಯ ಇದೆ :** ಬೀದರ್ ಉತ್ತಮ ರೈಲು ಸಂಪರ್ಕ, ರಾಷ್ಟ್ರೀಯ ಹೆದ್ದಾರಿ ಸಂಪರ್ಕ ಹೊಂದಿದೆ. ಇಲ್ಲಿ ವಾಯು ಪಡೆ ಕೇಂದ್ರದ ಜೊತೆಗೆ ನಾಗರಿಕ ವಿಮಾನ ಸೌಲಭ್ಯಇದೆ. ಉತ್ತಮ ಸಂಪರ್ಕ ಜಾಲದ ಹಿನ್ನೆಲೆಯಲ್ಲಿ ಬೀದರ್ ಜಿಲ್ಲೆಯಲ್ಲಿ ಉದ್ಯಮಿಗಳು ಬಂಡವಾಳ ಹೂಡುವ ಸಾಧ್ಯತೆಗಳಿದ್ದು, ಮುಂಬರುವ ದಿನಗಳಲ್ಲಿ ದೊಡ್ಡದೊಡ್ಡ ಕೈಗಾರಿಕೆಗಳು ಸ್ಥಾಪನೆಯಾಗಿ ಸಹಸ್ರಾರುಕಾರ್ಮಿಕರಿಗೆ ಉದ್ಯೋಗ ಸಿಗಬಹುದಾಗಿದೆ. ಈ ಎಲ್ಲ ದೃಷ್ಟಿಯಿಂದ ಇಲ್ಲಿ ಸುಸಜ್ಜಿತ ಇಎಸ್‌ಐ ಆಸ್ಪತ್ರೆ ಆರಂಭಿಸಿ ಭಾಗದ ಕಾರ್ಮಿಕರ ಹಿತ, ಆರೋಗ್ಯ ಕಾಪಾಡುವಂತೆ ವಿನಂತಿಸಿದ್ದಾರೆ.

## ವಾಲ್ಮೀಕಿ ರಾಮಾಯಣ ಮೌಲ್ಯ, ಆದರ್ಶಗಳು ಜೀವನಕ್ಕೆ ಸೂಕ್ತವಾದವು: ಎಂ.ಸಿ.ಸುಧಾಕರ್

**ಚಿಕ್ಕಬಳ್ಳಾಪುರ, ಅ.17–**ಮಹರ್ಷಿ ವಾಲ್ಮೀಕಿಯವರು ಬರೆದಿರುವ ರಾಮಾಯಣದಲ್ಲಿನ ಜೀವನ ಮೌಲ್ಯಗಳು ಮತ್ತು ಆದರ್ಶಗಳು ಇಂದು ಜಗತ್ತಿನಾದ್ಯಂತ ವಿಸ್ತರಿಸಿವೆ ಹಾಗೂ ಪ್ರತಿಯೊಬ್ಬರ ಜೀವನದಲ್ಲಿ ಅಳವಡಿಸಿಕೊಳ್ಳಲು ಸೂಕ್ತವಾಗಿವೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಹೇಳಿದ್ದಾರೆ.

ಅವರಿಂದು ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.




ವಾಲ್ಮೀಕಿಯವರು ಸಾವಿರಾರು ವರ್ಷಗಳ ಹಿಂದೆ ರಚಿಸಿದ ರಾಮಾಯಣ ಮಹಾಕಾವ್ಯದ ಪ್ರಭಾವ ಇಂದು ಜಗತ್ತಿನ ಹಲವು ದೇಶಗಳಿಗೆ ವಿಸ್ತರಿಸಿದೆ. ರಾಮಾಯಣದಲ್ಲಿನ ಅನೇಕ ಮೌಲ್ಯಗಳು,ಆದರ್ಶಗಳು, ವಿಚಾರಗಳು ಇಂದಿಗೂ ಪ್ರಸ್ತುತವಾಗಿವೆ. ರಾಮಾಯಣವನ್ನು ಮತ್ತಷ್ಟು ಆಳವಾಗಿ ತಿಳಿದುಕೊಂಡು ಸಕಾರಾತ್ಮಕ ಪರಿವರ್ತನೆಗಳಿಗೆ ಅವಕಾಶ ಮಾಡಿಕೊಡಬೇಕು. ಆರೋಗ್ಯಕರ ಸಮಾಜ ನಿರ್ಮಾಣ ಮಾಡಬೇಕು ಎಂದರು. ಜಿಲ್ಲಾ ಕೇಂದ್ರದಲ್ಲಿ ವಾಲ್ಮೀಕಿ ಭವನದ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಲಾಯಿತು. ಎಸ್ ಎಸ್ ಎಲ್ ಸಿ, ಪಿಯುಸಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪ್ರೋತ್ಸಾಹಿಸಲಾಯಿತು. ಶಾಸಕ ಪ್ರದೀಪ್ ಈಶ್ವರ್ ಅಧ್ಯಕ್ಷತೆ ವಹಿಸಿದ್ದರು. ನಗರಸಭೆ ಅಧ್ಯಕ್ಷ ಗಜೇಂದ್ರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್.ಕೇಶವರೆಡ್ಡಿ ಹಾಜರಿದ್ದರು.

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ವಿವಿಧ ಜನಪದ ಮತ್ತು ಸಾಂಸ್ಕೃತಿಕ ಕಲಾ ತಂಡಗಳು ಹಾಗೂ ಪಲ್ಲಕ್ಕಿಗಳೊಂದಿಗೆ ವಾಲ್ಮೀಕಿ ಭಾವಚಿತ್ರದ ಮೆರವಣಿಗೆ ನಡೆಸಲಾಯಿತು

## ಕಿತ್ತೂರು ಉತ್ಸವ: ಅ.22 ರಂದು ಬೆಳಗಾವಿಯಲ್ಲಿ ಕುನಾಲ್ ಗಾಂಜಾವಾಲಾ, ಸಾಧು ಕೋಕಿಲ ರಸಮಂಜರಿ

**ಬೆಳಗಾವಿ, ಅ.17–**ಕಿತ್ತೂರು ಉತ್ಸವ ಹಾಗೂ ಚನ್ನಮ್ಮನ ವಿಜಯೋತ್ಸವದ 200 ವರ್ಷಾಚರಣೆ ಹಿನ್ನೆಲೆಯಲ್ಲಿ ಇದೇ ಪ್ರಥಮ ಬಾರಿಗೆ ಬೆಳಗಾವಿ ನಗರದಲ್ಲೂ ರಸಮಂಜರಿ ಹಾಗೂ ನೃತ್ಯ ಕಾಂರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ.





ರಾಷ್ಟ್ರೀಯ ಖ್ಯಾತಿಯ ಗಾಯಕ ಕುನಾಲ್ ಗಾಂಜಾವಾಲಾ ಅವರು ಕಿತ್ತೂರು ಉತ್ಸವದ ಹಿಂದಿನ ದಿನವಾದ ಅ.22 ರಂದು ಸಂಜೆ 4 ಗಂಟೆಗೆ ಬೆಳಗಾವಿಯ ಜಿಲ್ಲಾ ಕ್ರೀಡಾಂಗಣದಲ್ಲಿ ರಸಮಂಜರಿ ನಡೆಸಿಕೊಡಲಿದ್ದಾರೆ. ಅದೇ ವೇದಿಕೆಯಲ್ಲಿ ಕನ್ನಡದ ಖ್ಯಾತ ಹಾಸ್ಯ ಕಲಾವಿದ, ಸಂಗೀತ ನಿರ್ದೇಶಕರಾಗಿರುವ ಸಾಧು ಕೋಕಿಲ್ ಅವರು ಮತ್ತು ಜೀ ಕನ್ನಡ ಸರಿಗಮಪ ತಂಡದವರು ನೃತ್ಯ ಕಾರ್ಯಕ್ರಮವನ್ನು ಪ್ರಸ್ತುತಪಡಿಸಲಿದ್ದಾರೆ. ಆಕ್ಸಿಜೆನ್ ಡ್ಯಾನ್ಸ್ ಗ್ರುಪ್ ವತಿಯಿಂದ ನೃತ್ಯ; ರೇಖಾ ಹೆಗಡೆ ಮತ್ತು ತಂಡದವರಿಂದ ನೃತ್ಯ ರೂಪಕ; ಪ್ರಕಾಶ್ ಚಂದನ್ನವರ ತಂಡದಿಂದ ಜೋಗತಿ ನೃತ್ಯ ಕಾಂರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್.

## ಜಿಲ್ಲೆಯ ಅಭಿವೃದ್ಧಿಗೆ ಕಾರ್ಪೊರೇಟ್ ಕಂಪನಿಗಳು ಕೈಜೋಡಿಸಬೇಕು: ಬಿ.ಫೌಜಿಯಾ ತರನ್ನುಮ್



ಕಲಬುರಗಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಸಿಮೆಂಟ್, ಸಕ್ಕರೆ ಕಾರ್ಖಾನೆ ಹಾಗೂ ಬ್ಯಾಂಕರ್ಸ್‌ಗಳ ಸಭೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅಧ್ಯಕ್ಷತೆಯಲ್ಲಿ ಜರುಗಿತು.

**ಕಲಬುರಗಿ, ಅ.17–** ಜಿಲ್ಲೆಯ ಸರ್ವಾಂಗೀಣ ಮತ್ತು ಸಮತೋಲಿತ ಅಭಿವೃದ್ಧಿಗೆ ಜಿಲ್ಲೆಯಲ್ಲಿ ಕೆಲಸ ಮಾಡುತ್ತಿರುವ ಸಿಮೆಂಟ್, ಸಕ್ಕರೆ ಕಾರ್ಖಾನೆ ಗಳೂ ಸೇರಿದಂತೆ ಕಾರ್ಪೊರೇಟ್ ಕಂಪನಿಗಳು ಕೈಜೋಡಿಸಬೇಕೆಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹೇಳಿದರು.

ವಿಶೇಷವಾಗಿ ಶಿಕ್ಷಣ, ಆರೋಗ್ಯ, ಕ್ರೀಡೆ ಕ್ಷೇತ್ರಕ್ಕೆ ಕಂಪನಿಗಳು ಹೆಚ್ಚಿನ ಒತ್ತು ನೀಡಬೇಕು. ರಾಜ್ಯ ಸರ್ಕಾರದ ಆಶಯದಂತೆ ಶಾಲೆಗಳನ್ನು ದತ್ತು ಪಡೆಯಬೇಕು. ಸಮುದಾಯಧಾರಿತ ಮೂಲಸೌಕರ್ಯ ಬಲವರ್ಧನೆಗೂ ಆದ್ಯತೆ ನೀಡಬೇಕೆಂದ ಅವರು, ಸಮುದಾಯಧಾರಿತ ಯೋಜನೆಗಳ ಪೂರ್ಣಕ್ಕೆ ಅನುದಾನ ಕೊರತೆ ಇದ್ದಲ್ಲಿ ಸಿ.ಎಸ್.ಆರ್ ನಿಧಿ ಬಳಕೆಗೆ ಆಯಾ ಇಲಾಖೆಯವರು ಕೂಡಲೆ ಪಟ್ಟಿ ಸಲ್ಲಿಸಬೇಕೆಂದು ಸೂಚಿಸಿದರು.

ಡಾ.ಸರೋಜಿನಿ ಮಹಿಷಿ ವರದಿ ಪ್ರಕಾರ ಪ್ರತಿ ಕಾರ್ಖಾನೆಯಲ್ಲಿ 50ಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಮಿಕರಿದ್ದಲ್ಲಿ ಗ್ರೂಪ್ 'ಎ' ವೃಂದದಲ್ಲಿ ಶೇ.65, ಗ್ರೂಪ್ 'ಬಿ' ವೃಂದದಲ್ಲಿ ಶೇ.80 ಹಾಗೂ ಗ್ರೂಪ್ 'ಸಿ' ಮತ್ತು 'ಡಿ' ವೃಂದದಲ್ಲಿ ಶೇ.100 ರಷ್ಟು ಉದ್ಯೋಗ ಸ್ಥಳೀಯರಿಗೆ ನೀಡಬೇಕೆಂಬ ನಿಯಮವಿದ್ದು, ಎಲ್ಲಾ ಕಾರ್ಪೊರೇಟ್ ಕಂಪನಿಗಳು ಇದನ್ನು ಕಡ್ಡಾಯವಾಗಿ ಪಾಲಿಸಬೇಕು. ಇನ್ನು ಜಿಲ್ಲಾ ಕೈಗಾರಿಕೆ ಕೇಂದ್ರದ ಅಧಿಕಾರಿಗಳು ಕಾರ್ಖಾನೆಗಳಿಂದ ಉದ್ಯೋಗಿಗಳ ವಿವರ ಪಡೆದು ಕಾಲ ಕಾಲಕ್ಕೆ ಇದನ್ನು ಪರಿಶೀಲಿಸಬೇಕೆಂದು ಡಿ.ಐ.ಸಿ. ಜಂಟಿ ನಿರ್ದೇಶಕಿ ಸುರೇಖಾ ಮುನ್ನೋಳ್ಳಿ ಅವರಿಗೆ ಡಿ.ಸಿ ನಿರ್ದೇಶನ ನೀಡಿದರು. ಕನ್ನಡ ನಾಮಫಲಕ ಕಡ್ಡಾಯ: ಎಲ್ಲಾ ಕಾರ್ಖಾನೆಗಳ ನಾಮ ಫಲಕಗಳನ್ನು ಕಡ್ಡಾಯವಾಗಿ ಕನ್ನಡದಲ್ಲಿ ಬರೆಸಬೇಕು. ಈ ಸಂಬಂಧ ಸರ್ಕಾರಿ ಆದೇಶವನ್ನು ಚಾಚುತಪ್ಪದೆ ಪಾಲಿಸಬೇಕೆಂದು ಡಿ.ಸಿ ಕಾರ್ಪೊರೇಟ್ ಪ್ರತಿನಿಧಿಗಳಿಗೆ ಸೂಚಿಸಿದರು.

ಐ.ಟಿ.ಎಫ್ ಟೆನಿಸ್ ಟೂರ್ನಿಗೆ ಸಹಕರಿಸಿ: ಬರುವ ನವೆಂಬರ್ 17 ರಿಂದ 24ರ ವರೆಗೆ ಕಲಬುರಗಿ ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಐ.ಟಿ.ಎಫ್ ಅಂತರಾಷ್ಟ್ರೀಯ ಮಟ್ಟದ ಲಾನ್ ಟೆನಿಸ್ ಟೂರ್ನಾಮೆಂಟ್ ಆಯೋಜಿಸಲಾಗಿದೆ. ಕಳೆದ ವರ್ಷ ಟೂರ್ನಿ ಯಶಸ್ಸಿಗೆ ಸಹಕರಿಸಿದ್ದಕ್ಕೆ ಕಂಪನಿ ಪ್ರತಿನಿಧಿಗಳಿಗೆ ಅಭಿನಂದನೆ ಸಲ್ಲಿಸಿದ ಜಿಲ್ಲಾಧಿಕಾರಿಗಳು, ಈ ವರ್ಷ ಸಹ ತಮ್ಮ ಸಹಕಾರ ಅಗತ್ಯ ಇದೆ ಎಂದರು.

## ಇಡಿ, ಸಿಬಿಐ ಭಯಕ್ಕೆ ರೆಡ್ಡಿ ಬಿಜೆಪಿ ಸೇರ್ಪಡೆ: ನಾಗೇಂದ್ರ

**ಬಳ್ಳಾರಿ, ಅ.17–** ಜನಾರ್ದನ ರೆಡ್ಡಿ ಅವರು ಕೆಆರ್ ಪಿಪಿ ಪಕ್ಷ ಕಟ್ಟಿದಾಗ ಬಿಜೆಪಿ ವಿರುದ್ಧ ಎಷ್ಟು ಅರೋಪ ಮಾಡಿದ್ದರು. ಬಿಜೆಪಿ ಮೇಲಿನ ಭಯದಿಂದ ಕೊಮುವಾದಿ ಪಕ್ಷಕ್ಕೆ ಸೇರಿದ್ದಾರೆ. ಇಡಿ, ಸಿಬಿಐ ಭಯಕ್ಕೆ ರೆಡ್ಡಿ ಬಿಜೆಪಿ ಸೇರಿದ್ದಾರೆ ಎಂದು ಮಾಜಿ ಸಚಿವ, ಶಾಸಕ ಬಿ ನಾಗೇಂದ್ರ ಹೇಳಿದರು.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನಾರ್ದನ ರೆಡ್ಡಿ ಸಂಡೂರಿನಲ್ಲಿ ಮನೆ ಅಲ್ಲ ಅರಮನೆ ಮಾಡಿದರೂ ಕಾಂಗ್ರೆಸ್ ಗೆಲುವು ಫಿಕ್ಸ್. ಜನಾರ್ದನ ರೆಡ್ಡಿ ಬಳ್ಳಾರಿಗೆ ಬಂದಿರುವುದು ನಮ್ಮ ಪಕ್ಷದ ಮೇಲೆ ಯಾವ ಪರಿಣಾಮ ಬೀರಲ್ಲ. ವಾಲ್ಮೀಕಿ ಸಮುದಾಯದ ಮಗನಾಗಿ ವಾಲ್ಮೀಕಿ ಜಯಂತಿ ದಿನ ವಾಲ್ಮೀಕಿ ಹಗರಣ ಎನ್ನುವ ಶಬ್ದ ಬಳಸಿ ಮಾತಾಡಲು ಬೇಸರವಾಗುತ್ತಿದೆ. ನಾವು ಯಾವುದೇ ಹಗರಣ ಮಾಡಿಲ್ಲ. ಇದೆಲ್ಲ ಬಿಜೆಪಿ ಕುತಂತ್ರ. ಸಿಬಿಐ, ಇಡಿ ಬಳಸಿ ಸರ್ಕಾರ ಅಸ್ಥಿರ ಮಾಡುವ ಪ್ರಯತ್ನಿದಿಂದ ನನ್ನನ್ನು ಟಾರ್ಗೆಟ್ ಮಾಡಲಾಗಿದೆ. ಈ ಪ್ರಕರಣದಿಂದ ಆರೋಪ ಮುಕ್ತನಾಗುವೆ ಎಂದರು.

### ಕಲಬುರಗಿ ಜೈಲಿನಲ್ಲಿ ರಾಜಾತಿಥ್ಯ ಆರೋಪ

## ಜಿಲ್ಲಾ ಕೇಂದ್ರ ಕಾರಾಗೃಹಕ್ಕೆ ಎಡಿಜಿಪಿ ಮಾಲಿನಿ ಭೇಟಿ



ಕಲಬುರಗಿ ಜಿಲ್ಲಾ ಕೇಂದ್ರ ಕಾರಾಗೃಹಕ್ಕೆ ಎಡಿಜಿಪಿ ಮಾಲಿನಿ ಕೃಷ್ಣಮೂರ್ತಿ ಅವರು ಭೇಟಿ ನೀಡಿದರು.

**ಕಲಬುರಗಿ, ಅ.17–** ಇಲ್ಲಿನ ಕೇಂದ್ರ ಕಾರಾಗೃಹದಲ್ಲಿ ಕೈದಿಗಳಿಗೆ ರಾಜಾತಿಥ್ಯ ಆರೋಪ ಹಿನ್ನೆಲೆಯಲ್ಲಿ ಬಂದಿಖಾನೆ ಎಡಿಜಿಪಿ ಮಾಲಿನಿ ಕೃಷ್ಣಮೂರ್ತಿ ಕೇಂದ್ರ ಕಾರಾಗೃಹಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕಾರಾಗೃಹದಲ್ಲಿ ಕೈದಿಗಳು ಮೋಜು ಮಸ್ತಿ ಮಾಡಿ ವೈಭವಯುತ ಜೀವನ ನಡೆಸುತ್ತಿದ್ದಾರೆಂಬ ವರದಿಯ ವಿಡಿಯೋ ಮಾಧ್ಯಮಗಳ ಮೂಲಕ ವೈರಲ್ ಆದ ಹಿನ್ನೆಲೆಯಲ್ಲಿ ಎಡಿಜಿಪಿ ಭೇಟಿ ನೀಡಿದರು. ಕಲಬುರಗಿ ಕೇಂದ್ರ ಕಾರಾಗೃಹ ದಲ್ಲಿನ ಘಟನೆಯನ್ನು ಬಹಳ ಗಂಭೀರವಾಗಿ ಪರಿಗಣಿಸಿದ್ದೇವೆ. ಹೀಗಾಗಿಯೇ ಬೆಂಗಳೂರಿನಿಂದ ಇಲ್ಲಿಗೆ ಬರಲಾಗಿದೆ ಎಂದು ಭೇಟಿ ನಂತರ ಮಾಧ್ಯಮದವರೊಂದಿಗೆ ಮಾತನಾಡಿ ಹೇಳಿದರು.

ಎಲ್ಲಾ ಸಿಬ್ಬಂದಿಯಿಂದ ಎಲ್ಲ ಆಯಾಮಗಳಿಂದ ಸಂಪೂರ್ಣ ಮಾಹಿತಿ ಪಡೆದಿದ್ದೇನೆ. ಇದರಲ್ಲಿ ಯಾರನ್ನೂ ರಕ್ಷಣೆ ಮಾಡುವುದಿಲ್ಲ. ಪ್ರಮುಖವಾಗಿ ಪ್ರಾಥಮಿಕ ತನಿಖೆಗೂ ಆದೇಶ ನೀಡಿದ್ದೇನೆ. ಪ್ರಾಥಮಿಕ ವರದಿ ಬಂದ ತಕ್ಷಣವೇ ಕ್ರಮ ಕೈಗೊಳ್ಳುತ್ತೇವೆ ಎಂದು ಎಡಿಜಿಪಿ ಸ್ಪಷ್ಟಪಡಿಸಿದರು.

10 ದಿನದಲ್ಲಿ ವರದಿ ಸಲ್ಲಿಸುವಂತೆ ಸೆಂಟ್ರಲ್ ಜೈಲ್ ಮುಖ್ಯ ಅಧೀಕ್ಷಕರಿಗೆ ಸೂಚಿಸಲಾಗಿದೆ. ಕಾರಾಗೃಹದಲ್ಲಿ ಇಲ್ಲಿಯವರೆಗೆ 2ಉ ಜಾಮರ್ ಇದ್ದವು, ಅದನ್ನು 5ಉ ಮಾಡುತ್ತೇವೆ. ಅದರಂತೆ ಈಗಾಗಲೇ ಘಟನೆ ಬಗ್ಗೆ ಏಳು ಜನರ ವಿರುದ್ಧ ಎಫ್ ಐಆರ್ ಸಹ ದಾಖಲಾಗಿದೆ. ನಮ್ಮವರದ್ದು ಇದರಲ್ಲಿ ತಪ್ಪಿಲ್ಲ ಎಂದು ಹೇಳಲ್ಲ. ಯಾರದೇ ತಪ್ಪಿದ್ದರೂ ಕ್ರಮ ಖಚಿತ ಎಂದು ಖಡಕ್ ಆಗಿ ಹೇಳಿದರು.

### ಏಕಾಏಕಿ ಹಾಲಿನ ಬೆಲೆ ಇಳಿಸಿ ರೈತರಿಗೆ ಶಾಕ್

## ಸಿಎಂ ಹೇಳಿದ್ದೊಂದು, ಹಾಲು ಒಕ್ಕೂಟ ಮಾಡಿದ್ದು ಮತ್ತೊಂದು!



**ಹಾಲಿನ ಬೆಲೆ ಪರಿಷ್ಕರಣೆ ಖಂಡಿಸಿ ಪ್ರತಿಭಟನೆ**

**ದಿಢೀರ್ ಆಗಿ 6 ರೂಪಾಯಿ ಹಾಗೂ 8 ರೂಪಾಯಿ ಇಳಿಕೆ ಮಾಡಿ ರೈತರನ್ನ ಮತ್ತಷ್ಟು ಬೀದಿಗೆ ತಳ್ಳಿದ್ದಾರೆ, ಇದರಿಂದ ರೈತರಿಗೆ ಸಾಕಷ್ಟು ತೊಂದರೆ ಆಗುತ್ತಿದೆ. ಈಗಾಗಲೇ ಎಲ್ಲಾ ಬೆಲೆಗಳು ಏರಿಕೆ ಆಗಿದ್ದು, ಜೀವನ ನಡೆಸುವುದೇ ಕಷ್ಟವಾಗಿದೆ. ಹೀಗಿರುವಾಗ ದೇಶದ ಬೆನ್ನುಲುಬಾಗಿರುವ ಅನ್ನದಾತರಿಗೆ ನೆರವಾಗುವ ಹಾಲಿನ ದರ ಇಳಿಕೆ ಮಾಡಿ ಅನ್ಯಾಯ ಮಾಡುತ್ತಿದ್ದಾರೆ ಎಂದು ಹಾಲಿನ ದರ ಹೆಚ್ಚಳಕ್ಕೆ ಅಧಿಕಾರಿಗಳಿಗೆ ರೈತರು ಮನವಿ ಸಲ್ಲಿಸಿದ್ದಾರೆ.**

ಬೀದರ್, ಅ. 17: ಇತ್ತೀಚೇಗಷ್ಟೇ ಸಿಎಂ ಸಿದ್ದರಾಮಯ್ಯ ಅವರು ಹಾಲಿನ ಬೆಲೆ ಹೆಚ್ಚಳ ಮಾಡಿ ಆ ಹಣವನ್ನು ನೇರವಾಗಿ ರೈತರಿಗೆ ನೀಡಲಾಗುವುದು ಎಂದು ಹೇಳಿದ್ದರು. ಇದರೊಂದಿಗೆ ರಾಜ್ಯದ ಜನರಲ್ಲಿ ಮತ್ತೆ ದರ ಏರಿಕೆಯ ಆತಂಕ ಎದುರಾಗಿತ್ತು. ಆದರೆ ಹಾಲಿನ ಬೆಲೆ ಹೆಚ್ಚಳಕ್ಕೆ ಕೆಎಂಎಫ್ ಬ್ರೇಕ್ ಹಾಕಿತ್ತು.

ಈ ವರ್ಷ ಬಹುತೇಕ ಈ ಬಗ್ಗೆ ಯೋಚನೆ ಬೇಡ ಅನ್ನೋ ತೀರ್ಮಾನ ಮಾಡಿದೆ ಎನ್ನಲಾಗಿತ್ತು. ಇದರ ನಡುವೆಯೇ ರೈತರಿಗೆ ಮತ್ತೊಂದು ಶಾಕ್ ಎದುರಾಗಿದ್ದು. ಕಲಬುರಗಿ, ಬೀದರ್ ಹಾಗೂ ಯಾದಗಿರಿ ಜಿಲ್ಲೆಯ ಹಾಲು ಉತ್ಪಾದಕರ ಒಕ್ಕೂಟ ಹಾಲಿನ ದರ ಪರಿಷ್ಕರಣೆ ಮಾಡಿ ರೈತರಿಗೆ ಬಿಗ್ ಶಾಕ್ ನೀಡಿದ್ದು. ಈ ಸಂಬಂಧ ದರ ಪರಿಷ್ಕಣೆಯನ್ನು ಖಂಡಿಸಿ ರೈತರು ಪ್ರತಿಭಟನೆ ನಡೆಸಿದ್ದಾರೆ.

ಹೌದು, ಕಲಬುರಗಿ, ಬೀದರ್ ಹಾಗೂ ಯಾದಗಿರಿ ಜಿಲ್ಲೆಯ ಹಾಲು ಉತ್ಪಾದಕರ ಒಕ್ಕೂಟದಿಂದ ಹಾಲಿನ ದರ ಇಳಿಕೆ ಖಂಡಿಸಿ ರೈತರು ಪ್ರತಿಭಟನೆ ನಡೆಸಿದ್ದಾರೆ. ಬೀದರ್ ನಗರದ ಹಾಲು ಉತ್ಪಾದಕರ ಕಚೇರಿ ಬಳಿ ರೈತರು ಪ್ರತಿಭಟನೆ ನಡೆಸಿ ಅಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗಿದ್ದಾರೆ. ಅಕ್ಟೋಬರ್‌ಗೂ ಮುನ್ನ ಹಸುವಿನ ಹಾಲಿಗೆ ಪ್ರತಿ ಲೀಟರ್‌ಗೆ 35 ರೂಪಾಯಿ, ಎಮ್ಮೆ ಹಾಲಿಗೆ 48 ರೂಪಾಯಿ ನೀಡ್ತಿದ್ದರು. ಆದರೆ ದರ ಪರಿಷ್ಕರಣೆ ಬಳಿಕ ಹಸುವಿನ ಹಾಲಿಗೆ 29 ರೂಪಾಯಿ ಹಾಗೂ ಎಮ್ಮೆ ಹಾಲಿಗೆ 40 ರೂಪಾಯಿ ನೀಡ್ತಿದ್ದಾರೆ. ಎರಡ್ಮೂರು ದಿನಗಳಲ್ಲಿ ಹಾಲಿನ ದರ ಹೆಚ್ಚಳ ಮಾಡದಿದ್ದರೆ ಉಗ್ರ ಪ್ರತಿಭಟನೆ ಮಾಡುವುದಾಗಿ ರೈತರು ಎಚ್ಚರಿಕೆ ನೀಡಿದ್ದಾರೆ.

### ಹುಬ್ಬಳ್ಳಿ ಹಿಂಸಾಚಾರ ಆರೋಪಿಗಳಿಗೆ ಸರ್ಕಾರ ಕ್ಲೀನ್ ಚಿಟ್ ನೀಡಿದ್ದರೆ

## ನ್ಯಾಯಾಲಯದಲ್ಲಿ ಆರೋಪಿಗಳ ಪರ ವಾದ ಮಂಡಿಸಲಿ: ಸಿ.ಟಿ.ರವಿ

**ಕಲಬುರಗಿ, ಅ.17–** ಹುಬ್ಬಳ್ಳಿಯಲ್ಲಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ನಡೆಸಿದ ಕಿಡಿಗೇಡಿಗಳು ಅಮಾಯಕರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕ್ಲೀನ್‌ಚಿಟ್ ನೀಡಿದ್ದರೆ, ಇವರ ಪರವಾಗಿ ನ್ಯಾಯಾಲಯದಲ್ಲಿ ಸಿಎಂ ಅವರೇ ವಾದ ಮಂಡಿಸಲಿ ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ ರವಿ ಅವರು ಹೇಳಿದರು.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಇಡಿ ಚಾರ್ಜ್ ಶೀಟ್ ಸಲ್ಲಿಕೆ ಮಾಡಿದೆ ಎಂಬುದರಿಂದ ಹಿಡಿದು ವಾಲ್ಮೀಕಿ ಹಗರಣದ ಕೋಟ್ಯಂತರ ರೂ. ಅಕ್ರಮವಾಗಿ ಚುನಾವಣೆಗೆ ಬಳಕೆ ಆಗಿದೆ ಅನ್ನೋದು ಈಗಾಗಲೇ ಸಾಬೀತಾಗಿದೆ. ಹಾಗಾಗಿ, ಈ ಬಗ್ಗೆ ರಾಜ್ಯದ ಜನರ ಚಿತ್ತ ಬೇರೆಡೆ ಸೆಳೆಯಲು ಹುಬ್ಬಳ್ಳಿ ಗಲಭೆಕೋರರು ಹಾಗೂ ಹಿಜಾಬ್ ಪರ ಹೋರಾಟಗಾರರ ವಿರುದ್ಧ ಹಾಕಲಾಗಿದ್ದ ಎಲ್ಲ ಪ್ರಕರಣಗಳನ್ನು ರಾಜ್ಯ ಸರ್ಕಾರ ವಾಪಸ್ ಪಡೆದಿದೆ ಎಂದು ಹೇಳಿದರು.

ಮೈಸೂರಿನ ಮುಡಾ ಪ್ರಕರಣ ತಮ್ಮ ಕುತ್ತಿಗೆಗೆ ಸುತ್ತಿಕೊಳ್ಳುತ್ತದೆ ಎಂಬುದು ಸಹ ಮುಖ್ಯಮಂತ್ರಿಗಳಿಗೆ ಈಗಾಗಲೇ ಮನದಟ್ಟಾಗಿದೆ. ಇದೆಲ್ಲವನ್ನೂ ವಿಷಯಾಂತರ ಮಾಡಲು ಅವರು ಶತಪ್ರಯತ್ನ ಮಾಡುತ್ತಿದ್ದಾರೆ. ಹುಬ್ಬಳ್ಳಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಿದವರ ಪರವಾಗಿ ತಾವಿರುವುದಾಗಿ ಹೇಳುವ ಸಿಎಂ, ಆಂಜನೇಯಸ್ವಾಮಿಯ ಮೇಲೆ ಕಲ್ಲು ತೂರಾಟ ಮಾಡಿದವರ ಪರವಾಗಿಯೂ ಇದ್ದೇವೆ ಎನ್ನುತ್ತಿದ್ದಾರೆ. ಅಷ್ಟೇ ಅಲ್ಲ, ಕುಕ್ಕರ್ ಬ್ಲಾಸ್ಟ್ ಮಾಡಿದವರು ತಮ್ಮ ಬ್ರದರ್ಸ್ ಎನ್ನುತ್ತಾರೆ.

ಬಿಜೆಪಿಯವರು ಅಲ್ಪಸಂಖ್ಯಾತರನ್ನು ಟಾರ್ಗೆಟ್ ಮಾಡುತ್ತಿದ್ದಾರೆ ಎನ್ನುವ ಇವರಿಗೆ ಸಿಸಿಟಿವಿ ದೃಶ್ಯಾವಳಿಗಳು ದೇವಸ್ಥಾನ ಮತ್ತು ಪೊಲೀಸರ ಮೇಲೆ ಕಲ್ಲು ತೂರಾಟ ಮಾಡಿರುವುದಕ್ಕೆ ಸಾಕ್ಷಿ ಎನಿಸುತ್ತಿಲ್ಲವೇ?



ಪೊಲೀಸರು ಮತ್ತು ದೇವರ ಮೂರ್ತಿಗಳ ಮೇಲೆ ಕಲ್ಲು ತೂರುವವರು ಅಮಾಯಕರು ಎಂದು ಸ್ವತಃ ಮುಖ್ಯಮಂತ್ರಿಗಳು ಹೇಳಿಕೆ ನೀಡುತ್ತಾರೆ. ಹಾಗಾದರೆ, ನೀವು ಮುಖ್ಯಮಂತ್ರಿ ಮಾತ್ರವಲ್ಲ, ನ್ಯಾಯವಾದಿ ಸಹ ಆಗಿರುವುದರಿಂದ ಎಲ್ಲವನ್ನೂ ತನಿಖೆ ಮಾಡಿ ನೋಡೋಣ ಎಂದು ಸವಾಲು ಹಾಕಿದರು.

ಬಹುತೇಕ ಸಚಿವರು ಸಂಪುಟ ಸಭೆಗೆ ಬರುವುದು ಉಪ್ಪಿಟ್ಟು ತಿನ್ನಲು, ಕಾಫಿ ಕುಡಿಯಲು ಮಾತ್ರ, ಸಂಪುಟ ಸಭೆಯಲ್ಲಿ ಬರುವ ವಿಚಾರಗಳ ಬಗ್ಗೆ ಅವರು ಯೋಚಿಸುವುದಿಲ್ಲ. ಯಾವ ದಾಖಲೆಗಳಿಗೆ ಸಹಿ ಹಾಕುತ್ತಿದ್ದಾರೆ ಎಂಬುದನ್ನು ಓದದೆ ಒಪ್ಪಿಗೆ ನೀಡಲು ಸಚಿವ ಸಂಪುಟ ಸಭೆಗೆ ಹಾಜರಾಗುತ್ತಾರೆಂದು ವ್ಯಂಗ್ಯವಾಡಿದರು.

ಇದೇ ವೇಳೆ ಸಿ.ಟಿ.ರವಿ ವಿರುದ್ಧದ ಪ್ರಕರಣವನ್ನೂ ಕೈಬಿಡಲಾಗಿದೆ ಎಂದ ಸಚಿವ ಪ್ರಿಯಾಂಕ್ ಖರ್ಗೆ ಹೇಳಿಕೆಗೆ ತಿರುಗೇಟು ನೀಡಿದ ಅವರು, ಚಾಲೆಂಜ್ ಮಾಡ್ತೀನಿ ನನ್ನ ಮೇಲೆ ಯಾವ ಕೇಸ್ ಇದೆ ಯಾವ ಕೇಸ್ ವಾಪಸ್ ಪಡೆದಿದ್ದರೆಂದು ಹೇಳಲಿ. ನಾನು ಕೇಸ್ ವಾಪಸ್ ಪಡೆಯರಿ ಎಂದು ಅರ್ಜಿ ಹಾಕಿದ್ನಾ? ಕೇಸ್ ವಾಪಸ್ ಪಡೆದಿದ್ದರೆ ರಾಜೀನಾಮೆ ನೀಡಿ ರಾಜಕೀಯ ಸನ್ಯಾಸತ್ವ ಸ್ವೀಕಾರ ಮಾಡುತ್ತೇನೆ. ಕೇಸ್ ವಾಪಸ್ ಸುಳ್ಳಾದರೆ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡಲಿ. ಧೈರ್ಯವಿದ್ದರೆ ನನ್ನ ಚಾಲೇಂಜ್ ಸ್ವೀಕಾರ ಮಾಡಲಿ ಎಂದು ಸಿ.ಟಿ.ರವಿ ಸವಾಲು ಹಾಕಿದರು.

## ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣವನ್ನು ಸರ್ಕಾರ ದೋಚಿದೆ: ರೆಡ್ಡಿ

**ಬಳ್ಳಾರಿ, ಅ.17–** ವಾಲ್ಮೀಕಿ ಜನಾಂಗದ ಅಭಿವೃದ್ಧಿಗಾಗಿ ಹಾಗು ಏಳ್ಗೆಗೆ ಮಾಜಿ ಸಿಎಂ ಯಡಿಯೂರಪ್ಪ ನವರು ವಾಲ್ಮೀಕಿ ಅಭಿವೃದ್ಧಿ ನಿಗಮ ಸ್ಥಾಪನೆ ಮಾಡಿದರು. ಅಂತಹ ವಾಲ್ಮೀಕಿ ನಿಗಮದ ಹಣವನ್ನು ಕಾಂಗ್ರೆಸ್ ಸರ್ಕಾರ ದೋಚಿದೆ ಎಂದು ಶಾಸಕ ಗಾಲಿ ಜನಾರ್ದನ ರೆಡ್ಡಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ, ನಾಗೇಂದ್ರ ಬಿಡುಗಡೆ ಸಮಯದಲ್ಲಿ ಕಾಂಗ್ರೆಸ್ ಪಕ್ಷದ ಸರ್ಕಾರಗಳನ್ನು ಬೀಳಿಸಲು ನಮ್ಮನ್ನು ಬಂಧಿಸಿದ್ದಾರೆ ಎಂದು ಆರೋಪಿಸಿದ್ದಾರೆ. ಅವರ ಮಾತು ಕೇಳಿ ಇಡೀ ಬಳ್ಳಾರಿ ಜನ ನಗುವ ಪರಿಸ್ಥಿತಿ ಬಂದಿದೆ. 2011 ಸೆಪ್ಟಂಬರ್ ನಲ್ಲಿ ನನ್ನನ್ನು ಜೈಲಿಗೆ ಹಾಕಿದ್ದು ಯುಪಿಎ ಸರ್ಕಾರ. 2012 ರಲ್ಲಿ ನಾಗೇಂದ್ರ ಬಂಧನವಾದರು. ಆಗ ಯಾವ ಸರ್ಕಾರ ಇತ್ತು, ಯುಪಿಎ ಸರ್ಕಾರ ಇರಲಿಲ್ಲವೇ? ಎಂದು ರೆಡ್ಡಿ ಪ್ರಶ್ನಿಸಿದರು.2012 ರಲ್ಲಿ ಆನಂದ್ ಸಿಂಗ್, ಸುರೇಶ್ ಬಾಬು, ನಾಗೇಂದ್ರ, ಸತೀಶ್ ಶೈಲ್ ಸೇರಿ ಐದು ಶಾಸಕರನ್ನು ಬಂಧಿಸಲಾಯಿತು. ನಾಗೇಂದ್ರ ಬಂಧನಾವಾದಾಗ ಯುಪಿಎ ಸರ್ಕಾರವಿತ್ತು, ಆಗ ನಾಗೇಂದ್ರ ಎರಡು ವರ್ಷ



ಜೈಲಿನಲ್ಲಿದ್ದರು. ಹೀಗಾಗಿ ಹಿಂದೆ ಯುಪಿಎ ಸರ್ಕಾರ ಬಂಧನ ಮಾಡಿದ್ದನ್ನು ನಾಗೇಂದ್ರ ಮರೆಯ ಬಾರದು. ಈ ರೀತಿ ಹುಚ್ಚುಚ್ಚಾಗಿ ಮಾತಾಡಬಾರದು, ಮಾತಾಡಿದರೆ ನಾನು ಜನತೆ ಮುಂದೆ ಎಲ್ಲವನ್ನೂ ಬಿಚ್ಚಿಡುವೆ ಎಂದು ರೆಡ್ಡಿ ಹೇಳಿದರು.

ನಾಗೇಂದ್ರ ಮೇಲೆ ದೊಡ್ಡ ದೊಡ್ಡ ಆರೋಪವಿದೆ ಎಂದು ಚಾರ್ಜ್ ಶೀಟ್ ನೋಡಿದರೆ ಗೊತ್ತಾಗ್ತದೆ. ಬಿಜೆಪಿ ಮೇಲೆ ಗೂಬೆ ಕೂರಿಸಿ ಹೀರೋಯಿಸಂ ತೋರಿಸೋಕೆ ಹೋಗಬೇಡಿ. ವಾಲ್ಮೀಕಿ ನಿಗಮದ ಹಣವನ್ನು ವೈಯಕ್ತಿಕವಾಗಿ ಬಳಿಸಿದ್ದಾರೆ. ವಿಮಾನ ಪ್ರಯಾಣ, ಪೆಟ್ರೋಲ್ ಡಿಸೆಲ್, ಮನೆ ವಿದ್ಯುತ್ ಬಿಲ್, ಲ್ಯಾಂಬರ್ಗಿನಿ ಕಾರ್‌ಗೆ ತೆಗೆದುಕೊಂಡಿದ್ದರು. ಸಾಕ್ಷಿ ಸಮೇತ, ಬ್ಯಾಂಕ್ ನವರು ದಾಖಲೆ ಮುಂದಿಟ್ಟುಕೊಂಡು ಸೀಜ್ ಮಾಡಲಾಗಿದೆ. 2024ರ ಲೋಕಸಭಾ ಚುನಾವಣೆಯಲ್ಲಿ ಬಳ್ಳಾರಿ ಕೊಪ್ಪಳ ರಾಯಚೂರಿಗೆ ಖರ್ಚು ಮಾಡಿದ್ದಾರೆ. 14 ಕೋಟಿಗೂ ಹೆಚ್ಚು ಹಣವನ್ನು ಬಳ್ಳಾರಿಯ ಮೂವರು ಶಾಸಕರಿಗೆ ಹಣ ಹಂಚಲು ಕೊಟ್ಟಿದ್ದಾರೆ. ನಾರಾ ಭರತ್ ರೆಡ್ಡಿ, ಗಣೇಶ್, ಎನ್.ಟಿ. ಶ್ರೀನಿವಾಸ್ ಗೆ 14 ಕೋಟಿಗೂ ಹೆಚ್ಚು ಹಣ ಹಂಚಲು ಕೊಟ್ಟಿದ್ದಾರೆ ಒಬ್ಬೊಬ್ಬ ಕಾರ್ಯಕರ್ತರಿಗೆ ತಲಾ ಹತ್ತು ಸಾವಿರ ಕೊಟ್ಟಿದ್ದಾರೆ. 20.19 ಕೋಟಿ ನಾಲ್ಕು ಕೋಟಿ ಮದ್ಯ ಖರೀದಿ, 50 ಲಕ್ಷ ಓಡಾಟಕ್ಕೆ ಖರ್ಚು ಮಾಡಿದ್ದಾರೆ. ಇದೆಲ್ಲವೂ ಇಡಿ ಚಾರ್ಜ್ ಶೀಟ್‌ನಲ್ಲಿ ಉಲ್ಲೇಖಿಸಿದೆ ಎಂದು ರೆಡ್ಡಿ ಲೇವಡಿ ಮಾಡಿದರು.

# ವಕ್ಫ್ ಕಾಯ್ದೆ ರದ್ದತಿಗೆ ಆಗ್ರಹಿಸಿ ಯತ್ನಾಳ್ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ

**ವಿಜಯಪುರ, ಅ.17–** ವಕ್ಫ್ ಕಾಯ್ದೆ ರದ್ದತಿಗೆ ಆಗ್ರಹಿಸಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ನೇತೃತ್ವದಲ್ಲಿ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಯುತ್ತಿದೆ. ನಗರದ ಶ್ರೀಸಿದ್ದೇಶ್ವರ ದೇವಸ್ಥಾನ ಹತ್ತಿರ ವಕ್ಫ್ ಕಾಯ್ದೆ ವಿರೋಧಿಸಿ ಹೋರಾಟ ಹಮ್ಮಿಕೊಳ್ಳಲಾಗಿದೆ. ಸಂಸದ ರಮೇಶ ಜಿಗಜಿಣಗಿ, ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹಾಗೂ ನಮೋ ಬ್ರಿಗೇಡ್‌ನ ಚಕ್ರವರ್ತಿ ಸೂಲಿಬೆಲೆ ಪಾಲ್ಗೊಂಡಿದ್ದರು.

ಸಾರ್ವಜನಿಕರ, ರೈತರ, ಸಂಘ–ಸಂಸ್ಥೆಗಳ, ದೇವಸ್ಥಾನಗಳ, ಸರ್ಕಾರಿ ಆಸ್ತಿ, ಜಮೀನುಗಳನ್ನು ವಕ್ಫ್ ಆಸ್ತಿ ಎಂದು ಉತಾರೆಯಲ್ಲಿ ನಮೂದಿಸುವುದನ್ನು ಕೈಬಿಡುವಂತೆಯೂ ಒತ್ತಾಯಿಸಿ ಪ್ರತಿಭಟನೆ ಜರುಗಿತು. ಕಪ್ಪು ಪಟ್ಟಿ ಕಟ್ಟಿಕೊಂಡು ಪ್ರತಿಭಟನೆಯಲ್ಲಿ ವಿವಿಧ ನಾಯಕರು, ಮುಖಂಡರು ಭಾಗಿಯಾಗಿದ್ದು, ಸಮಾವೇಶದ ಬಳಿಕ ಜಿಲ್ಲಾಧಿಕಾರಿ ಕಚೇರಿಯವರೆಗೆ ತೆರಳಿ ರಾಷ್ಟ್ರಪತಿ, ಪ್ರಧಾನಿ ಮತ್ತು ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.


ವಿಜಯಪುರದಲ್ಲಿ ವಕ್ಫ್ ಕಾಯ್ದೆ ರದ್ದತಿಗೆ ಆಗ್ರಹಿಸಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ನೇತೃತ್ವದಲ್ಲಿ ಬೃಹತ್ ಪ್ರತಿಭಟನಾ ಸಭೆ ನಡೆಇತು. ಶಾಸಕ ಸಿಟಿ ರವಿ. ಚಕ್ರವರ್ತಿ ಸೂಲಿಬೆಲೆ ಅವರೂ ಇದ್ದರು.

ಪ್ರತಿಭಟನಾ ಸಭೆಯಲ್ಲಿ ವಕ್ಫ್ ಆಸ್ತಿ ವಿರುದ್ಧ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ವಕ್ಫ್ ಆಸ್ತಿ ಹೊಡೆದವರು ಯಾರು ಎಂದು ಲಿಸ್ಟ್ ಬಿಡುಗಡೆ ಮಾಡಿದರು. ಬಸನಗೌಡ ಯತ್ನಾಳ್ ಜೊತೆಗೆ ಸಿಟಿ ರವಿ ಮುಂತಾದ ಬಿಜೆಪಿ ನಾಯಕರೂ ಕೈ ಜೋಡಿಸಿದ್ದರು. ವಿಜಯಪುರದಲ್ಲಿ ವಕ್ಫ್ ಆಸ್ತಿ ಕಬಳಿಕೆ ಮಾಡಲು ಸರ್ವೆ ಮಾಡಲು ಸಚಿವ ಜಮೀರ್ ಅಹ್ಮದ್ ಆದೇಶ ನೀಡುತ್ತಿದ್ದರು. ಸುಮಾರು 10 ಸಾವಿರ ಎಕರೆ ಪ್ರದೇಶ ವಕ್ಫ್ ಆಸ್ತಿಗೆ ಸೇರ್ಪಡೆಗೊಳಿಸಲು ಆಸ್ತಿ ಮಾಲಿಕರಿಗೆ ನೋಟಿಸ್ ನೀಡಿದ ಬೆನ್ನಲ್ಲೇ ಬೃಹತ್ ಪ್ರತಿಭಟನೆ ನಡೆದಿದೆ. ಈ ಪ್ರತಿಭಟನಾ ಸಮಾವೇಶದಲ್ಲಿ ಮಾತನಾಡಿದ ಬಸನಗೌಡ ಪಾಟೀಲ್ ಯತ್ನಾಳ್, ಕಾಂಗ್ರೆಸ್ ನ ಯಾವೆಲ್ಲಾ ನಾಯಕರು ವಕ್ಫ್ ಆಸ್ತಿಯನ್ನು ಕಬಳಿಸಿದ್ದಾರೆ ಎಂದು ಲಿಸ್ಟ್ ಕೊಟ್ಟರು. ಇದನ್ನ ನಾವು ಹೇಳಿದ್ದಲ್ಲ ವಕ್ಫ್ ಬೋರ್ಡ್ ಮಾಜಿ ಅಧ್ಯಕ್ಷ ಅನ್ವರ್ ಮನ್ನಿಪ್ಪಾಡಿ ಹೇಳಿರೋದು ಎಂದರು.

ಅನ್ವರ್ ಅವರು ಹೇಳಿರುವ ಪ್ರಕಾರ ಕರ್ನಾಟಕದಲ್ಲಿ ವಕ್ಫ್ ಆಸ್ತಿ 2 ಲಕ್ಷ 31 ಸಾವಿರ ಕೋಟಿ ಹಗರಣವಾಗಿದೆ ಎನ್ನುತ್ತಾರೆ. 20 ಸಾವಿರ ಎಕರೆ ಮುಸ್ಲಿಂ ನಾಯಕರೇ ಹೊಡೆದುಕೊಂಡಿದ್ದಾರೆ. ರೆಹಮಾನ್ ಖಾನ್, ಜಾಫರ್ ಶರೀಫ್, ಎನ್ ಎ ಹ್ಯಾರಿಸ್, ಕಮರುಲ್ ಇಸ್ಲಾಂ, ಖನೀಜಾ ಫಾತಿಮ್, ಸಿಎಂ ಇಬ್ರಾಹಿಂ, ಮಲ್ಲಿಕಾರ್ಜುನ ಖರ್ಗೆ ಸಹಿತ ಎಲ್ಲರೂ ವಕ್ಫ್ ಆಸ್ತಿ ಹೊಡೆದುಕೊಂಡವರು. ಇವರೆಲ್ಲಾ ಮುಸ್ಲಿಮರನ್ನು ಉದ್ದಾರ ಮಾಡ್ತೀನಿ ಎಂದು ಹೇಳುವವರು. ಆದರೆ ಅವರ ಹೆಸರಿನಲ್ಲಿ ವಕ್ಫ್ ಆಸ್ತಿ ಹೊಡೆದುಕೊಂಡಿದ್ದಾರೆ ಎಂದು ಯತ್ನಾಳ್ ಆರೋಪಿಸಿದ್ದಾರೆ.

## ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು, ಜೈಲಿಗೆ ಹೋಗ್ತಾರೆ

# ರಾಜ್ಯದಲ್ಲಿ ಸರ್ಕಾರ ಬಿದ್ದು ಕಾಂಗ್ರೆಸ್ ಮುಳುಗುತ್ತೆ: ಶರಣು ಸಲಗರ್



**ಬೀದರ್, ಅ.17–** ಮುಡಾ ಹಗರಣದಲ್ಲಿ ಲೋಕಾಯುಕ್ತ ತನಿಖೆಯ ಸಂಕಷ್ಟ ಎದುರುರಿಸುತ್ತಿರುವ ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ನಾಯಕರು ಆಗ್ರಹಿಸುತ್ತಲೇ ಇದ್ದಾರೆ. ಇದೀಗ ಬೀದರ್ ಜಿಲ್ಲೆಯ ಬಸಕಲ್ಯಾಣ ಕ್ಷೇತ್ರದ ಶಾಸಕ ಶರಣು ಸಲಗರ್ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿದ್ದಾರೆ.

ಬೀದರ್‌ನಲ್ಲಿ ಮಾತನಾಡಿದ ಶರಣು ಸಲಗರ್, ಮುಡಾ ಹಗರಣದಲ್ಲಿ 140 ಕಿಲೋ ಮೀಟರ್ ಕ್ರಮಿಸಿ ಹೋರಾಟ ಮಾಡಿದ್ದೇವೆ. ಮುಡಾದಲ್ಲಿ 60–40 ಇದ್ದಿದ್ದನ್ನ, 50–50 ಮಾಡಿದ್ದೇ ಸಿದ್ದರಾಮಯ್ಯ ಅಂತ ಆರೋಪಿಸಿದರು. ದುಬಾರಿ ಮೌಲ್ಯದ ಜಾಗವನ್ನ ಪಡೆಯಬೇಕಂತಲೇ ಈ ರೀತಿ ಸಿದ್ದರಾಮಯ್ಯ ನಾಟಕ ಮಾಡಿದ್ದಾರೆ. ಸಿದ್ದರಾಮಯ್ಯ ನಾಟಕ ಮಾಡ್ತಾ ಇದ್ದಾರೆ, ಹಾಡಹಗಲೇ ಕಳ್ಳತನ ಮಾಡಿದ್ದಾರೆ. ಮುಡಾ ಹಗರಣ ಪ್ರೊಸಿಡಿಂಗ್ ಆಗುವ ಸಮಯದಲ್ಲಿ ಯತೀಂದ್ರ ಕೂಡಾ ಮೆಂಬರ್ ಆಗಿದ್ರು. ಸಿದ್ದರಾಮಯ್ಯ ನೋಡಿದ್ರೆ ಇಡೀ ದೇಶ, ರಾಜ್ಯದ ಜನತೆಗೆ ವಾಕರಿಕೆ ಬರುತ್ತೆ ಅಂತ ಶರಣು ಸಲಗರ್ ವ್ಯಂಗ್ಯವಾಡಿದ್ರು.

ಸಿದ್ದರಾಮಯ್ಯ ಅವರನ್ನ ಇಡಿ ಯಾವುದೇ ಕಾರಣಕ್ಕೂ ಬಿಡಲ್ಲ. ಸಿದ್ದರಾಮಯ್ಯ ರಾಜೀನಾಮೆ ನೀಡಿ ಜೈಲಿಗೆ ಹೋಗ್ತಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವೇ ಮುಳುಗಿ ಹೋಗುತ್ತೆ. ಸಿದ್ರಾಮಯ್ಯ ರಾಜೀನಾಮೆ ಕೊಡದಿದ್ರೆ ಮತ್ತೆ ಹೋರಾಟ ಮಾಡ್ತೀವಿ, ರಾಜ್ಯದ 7 ಕೋಟಿ ಜನರಿಗೆ ನ್ಯಾಯ ಕೊಡಿಸುತ್ತೇವೆ ಎಂದು ಹೇಳಿದರು.

ರಾಜೀನಾಮೆ ನೀಡಲು ಸಿಎಂ ಸಿದ್ದು ಹಿಂದೇಟು ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಸಿದ್ದ ರಾಮಯ್ಯಗೆ ಅಧಿಕಾರ ವ್ಯಾಮೋಹ ಹೆಚ್ಚಾಗಿದೆ. ಸಿದ್ರಾಮಯ್ಯ ರಾಜೀನಾಮೆ ನೀಡಿದ್ರೆ ದೇಶದಲ್ಲೇ ಕಾಂಗ್ರೆಸ್ ಮುಳುಗಿ ಹೋಗುವ ಭಯವಿದೆ. ಯಾಕೆಂದ್ರೆ ಇಡೀ ದೇಶದಲ್ಲೇ ಸಿದ್ರಾಮಯ್ಯ ಕಾಂಗ್ರೆಸ್‌ನ ಎಟಿಎಂ ಆಗಿದ್ದಾರೆ. ಮಾನ, ಮರ್ಯಾದೆ, ನೀತಿಗೆಟ್ಟವರು ಎಲ್ಲರೂ ಸಿದ್ರಾಮಯ್ಯ ಬೆನ್ನಿಗೆ ನಿಂತಿದ್ದಾರೆ ಎಂದು ಶರಣು ಸಲಗರ್ ವಾಗ್ದಾಳಿ ನಡೆಸಿದರು.

ಇಡಿ ಭಯದಿಂದ ತಪ್ಪಿಸಿಕೊಳ್ಳಲು ಪತ್ನಿ 65 ಕೋಟಿ ಕೊಟ್ರೆ ಸೈಟ್ ವಾಪಸ್ ಕೊಡ್ತೀನಿ ಅಂತಾ ಹೇಳಿದ್ರಿ. ಆದರೆ ಈಗ ನಿಮ್ಮ ಧರ್ಮಪತ್ನಿಯವರು ವಾಪಸ್ ಕೊಡ್ತೀನಿ ಅಂತಾ ಪತ್ರ ಬರೆದಿದ್ದಾರೆ. ಜನರಿಗೆ ಎಮೋಷನಲ್ ಬ್ಲಾಕ್‌ಮೇಲ್ ಮಾಡ್ಬೇಕು ಅಂತಾ ಪತ್ರ ಬರೆಸಿದ್ದೀರಿ. ಇಡಿ ಭಯದಿಂದ ತಪ್ಪಿಸಿಕೊಳ್ಳಲು ಪತ್ರ ಬರೆಸಿದ್ದಾರೆ. ನನ್ನ ಹೆಂಡತಿ ತಪ್ಪು ಮಾಡಿದ್ದಾಳೆ ಬೇಕಿದ್ರೆ ಅವರಿಗೆ ಶಿಕ್ಷೆ ಕೊಡಿ ಎನ್ನುವ ಪ್ರಯತ್ನ ಮಾಡ್ತಿದ್ದೀರಿ ಎಂದೂ ಸಲಗರ ಹೇಳಿದರು.

# ಒಳಮೀಸಲಾತಿ ವರ್ಗೀಕರಣ ಶೀಘ್ರ ಅನುಷ್ಠಾನಕ್ಕೆ ಆಗ್ರಹಿಸಿ ಬೃಹತ್ ಪ್ರತಿಭಟನೆ

**ಕಲಬುರಗಿ, ಅ.17–** ಒಳ ಮೀಸಲಾತಿ ವರ್ಗೀಕರಣ ಶೀಘ್ರವಾಗಿ ಅನುಷ್ಠಾನಗೊಳಿಸಲು ಮತ್ತು ವಿವಿಧ ಇಲಾಖೆಯ ಸರ್ಕಾರಿ ನೇಮಕಾತಿಗಳನ್ನು ತಡೆ ಹಿಡಿಯಲು ಆಗ್ರಹಿಸಿ ಮಾದಿಗ ಸಮಾಜದ ಸಂಘಟನೆಗಳ ಒಕ್ಕೂಟದಿಂದ ನಗರದ ಡಾ.ಬಾಬಾ ಸಾಹೇಬ ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ ಜಿಲ್ಲಾದಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಸರ್ವೋಚ್ಚನ್ಯಾಯಾಲದಯದ ತೀರ್ಪಿನಂತೆ ಕೂಡಲೇ ಸುಗ್ರಿವಾಜ್ಞೆ ಮೂಲಕ ಒಳ ಮೀಸಲಾತಿಯನ್ನು ಜಾರಿಗೊಳಿಸುವುದರ ಮೂಲಕ ಮತ್ತು ವಿವಿಧ ಇಲಾಖೆಯ ಸರ್ಕಾರಿ ನೇಮಕಾತಿಗಳನ್ನು ತಡೆ ಹಿಡಿಯುವುದರ ಮೂಲಕ ಮಾದಿಗ ಸಮಾಜಕ್ಕೆ ನ್ಯಾಯ ದೊರಕಿಸಿ ಕೊಡಬೇಕು ಎಂದು ಪ್ರತಿಭಟನಾ ಕಾರರು ಆಗ್ರಹಿಸಿದರು.


ಕಲಬುರಗಿಯಲ್ಲಿ ಮಾದಿಗ ಸಮಾಜದ ಸಂಘಟನೆಗಳ ಒಕ್ಕೂಟದಿಂದ ಒಳಮೀಸಲಾತಿ ವರ್ಗೀಕರಣ ಅನುಷ್ಠಾನಕ್ಕೆ ಆಗ್ರಹಿಸಿ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು.

ಸಮಾಜದ ಮುಖಂಡರಾದ ಪರಮೇಶ್ವರ ಖಾನಾಪುರ, ಶ್ಯಾಮ್ ನಾಟೇಕರ್, ಗೋಪಾಲ ಕಟ್ಟಿಮನಿ, ರಾಜು ವಾಡೇಕರ್, ನಾಗರಾಜ ಗುಂಡಗುರ್ತಿ, ರಮೇಶ ವಾಡೇಕರ್, ದಶರಥ ಕಲಗುರ್ತಿ, ಮಲ್ಲಿಕಾರ್ಜುನ ಜಿನ್ನಕೇರಿ, ಗೋಪಾಲಕೃಷ್ಣ, ವಿಜಯ ಕುಮಾರ ಅಡಕಿ, ರಂಜೀತ್ ಮೂಲಿ ಮನಿ, ಚಂದ್ರಕಾಂತ ನಾಟೀಕರ್, ಯುವ ಮುಖಂಡರಾದ ದತ್ತು ಭಾಸಗಿ, ರಾಜು ಕಟ್ಟಿಮನಿ, ಮಲ್ಲಿ ಕಾರ್ಜುನ ಎಂ.ಸರಡಗಿ, ಸಚಿನ್ ಕಟ್ಟಿಮನಿ, ಮಲ್ಲಿಕಾರ್ಜುನ ದಿನ್ನಿ, ಶ್ರೀಕಾಂತ ಮಾಶಳ, ಶ್ರೀಮಂತ ಭಂಡಾರಿ, ಶಂಭುಲಿಂಗ, ಬಾಗಪ್ಪ, ಮಲ್ಲಿಕಾರ್ಜುನ ಬಮ್ಮನಹಳ್ಳಿ, ವಿಜಯಕುಮಾರ ಅಡಕೆ, ರಾಜು ಮುಕಣ್ಣ, ಮಾರುತಿ ಮುಗಚಿ, ಮಲ್ಲಪ್ಪ ಚಿಗನೂರ, ಅಮೃತ ಸಾಗರ, ರೇವಣಸಿದ್ದ, ವಿಠ್ಠಲ್, ರವಿ ಬೇಳಮಂಗಿ, ಪ್ರಕಾಶ, ಬಂಡೇಶ, ರಂಜಿತ್, ಮನೋಹರ, ಗುಂಡಪ್ಪ, ಶಿವುಕುಮಾರ, ಹಣಮಂತ, ಅನೀಲ, ರಾಜು, ಸಚೀನ ಸೇರಿದಂತೆ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.



ಕೋಲಾರದಲ್ಲಿ ಗುರುವಾರ ಮಹರ್ಷಿ ವಾಲ್ಮೀಕಿ ಜಯಂತಿ ಮೆರವಣಿಗೆ ಜನರನ್ನು ಆಕರ್ಷಿಸಿತು.

## ಮಹರ್ಷಿ ವಾಲ್ಮೀಕಿ ಬರೆದ ಮಹಾನ್ ಗ್ರಂಥ ಸಂಪೂರ್ಣ ರಾಮಾಯಣ ನಾಡಿನ ಕೀರ್ತಿ ಹೆಚ್ಚಿಸಿದೆ- ಮೀನಳ್ಳಿ ತಾಯಣ್ಣ



**ಬಳ್ಳಾರಿ, ಅ.17–** ಬಳ್ಳಾರಿ ಜೆಡಿಎಸ್ ಕಛೇರಿಯಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವವನ್ನು ಅತ್ಯಂತ ಅದ್ದೂರಿ ಸಂಭ್ರಮದಿಂದ ಆಚರಿಸಲಾಯಿತು.

ಜೆಡಿಎಸ್ ಜಿಲ್ಲಾಧ್ಯಕ್ಷರಾದ ಮೀನಳ್ಳಿ ತಾಯಣ್ಣರವರು ಮತ್ತು ಪಕ್ಷದ ಮುಖಂಡರ ನೇತೃತ್ವದಲ್ಲಿ ಎಲ್ಲಾರೂ ಭಾಗವಹಿಸಿ, ಶ್ರೀ ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮತ್ತು ಶ್ರೀ ಮಹರ್ಷಿ ವಾಲ್ಮೀಕಿ ಪುತ್ತಳಿಗೆ ಹೋಗಿ ಮಾಲಾರ್ಪಣೆ ಮಾಡಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷರಾದ ಮೀನಳ್ಳಿ ತಾಯಣ್ಣ ಶ್ರೀ ಮಹರ್ಷಿ ವಾಲ್ಮೀಕಿ ಅವರ ಬಗ್ಗೆ ಮಾತನಾಡಿ ಅವರ ತತ್ವ ಮತ್ತು ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು.

ಶ್ರೀ ಮಹರ್ಷಿ ವಾಲ್ಮೀಕಿ ಅವರ ಬರೆದಿರುವ ಮಹಾನ್ ಗ್ರಂಥವಾದ "ಸಂಪೂರ್ಣ ರಾಮಾಯಣ" ಎಂಬ ಪುಸ್ತಕವು ನಾಡಿನ ಕೀರ್ತಿಯನ್ನು ಹೆಚ್ಚಿಸಿದೆ, ಹಾಗೂ ಸರ್ವಜನಾಂಗದ ಒಳಿತಿಗಾಗಿ ಶ್ರಮಿಸಿದ ಮಹಾನ್ ವ್ಯಕ್ತಿ ಎಂದು ಸ್ಮರಿಸಿದರು.

# ಮುಂದಿನ ಜನ್ಮ ಇದ್ದರೆ ವಾಲ್ಮೀಕಿ ಜನಾಂಗದಲ್ಲಿ ಜನಿಸುವೆ–ನಾರಾ ಭರತ್‌ರೆಡ್ಡಿ

**ಬಳ್ಳಾರಿ, ಅ.17–** ಹಲವು ಜನ್ಮಗಳ ಪುಣ್ಯ ಇದ್ದವರು ವಾಲ್ಮೀಕಿ ಜನಾಂಗದಲ್ಲಿ ಜನಿಸಲು ಸಾಧ್ಯ, ನನಗೆ ಮುಂದಿನ ಜನ್ಮದಲ್ಲಿ ಮನುಷ್ಯನಾಗಿ ಜನಿಸಲು ಅವಕಾಶ ಸಿಕ್ಕರೆ ನಾನು ವಾಲ್ಮೀಕಿ ಜನಾಂಗದಲ್ಲಿ ಹುಟ್ಟುವೆ ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್‌ರೆಡ್ಡಿ ಹೇಳಿದರು. ಬಳ್ಳಾರಿ ಜಿಲ್ಲಾಡಳಿತದ ವತಿಯಿಂದ ಏರ್ಪಡಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿಯಲ್ಲಿ ಭಾಗಿಯಾಗಿ ಮಾತನಾಡಿದರು.

ಕಾರ್ಯಕ್ರಮದ ಬ್ಯಾನರಿನಲ್ಲಿ ನಾಗೇಂದ್ರ ಅವರು ಮಾಜಿ ಸಚಿವರು ಎಂದು ಮುದ್ರಿಸಿದ್ದಾರೆ, ಆದರೆ ನಾಗೇಂದ್ರ ಅವರು ಯಾವತ್ತಿಗೂ ನಮಗೆ ಸಚಿವರೇ,ಮುಂದಿನ ವಾಲ್ಮೀಕಿ ಜಯಂತಿ ವೇಳೆಗೆ ಅವರು ಮತ್ತೆ ಸಚಿವರಾಗಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಮಾಯಣದ ಆಂಜನೇಯ ಲಂಕೆಗೆ ಬೆಂಕಿ ಹಾಕಿದಂತೆ, ನಾಗೇಂದ್ರ ಅಣ್ಣ ಅವರು ತಮ್ಮ ವಿರುದ್ಧ ಷಡ್ಯಂತ್ರ ಮಾಡಿದವರನ್ನು ಸುಡಲಿದ್ದಾರೆ ಎಂದ ಶಾಸಕ ನಾರಾ ಭರತ್ ರೆಡ್ಡಿ ಕೆಲವರು ಕುತಂತ್ರ ಮಾಡುವ ಮೂಲಕ ಅವರನ್ನು ಸಂಕಷ್ಟಕ್ಕೆ ಸಿಲುಕಿಸಿದ್ದಾರೆ ಎಂದರು.ನಾಗೇಂದ್ರ ಅವರು ತಮ್ಮ ಸೋದರನ ಮಾತು ಕೇಳುತ್ತಾರೋ ಇಲ್ಲವೋ ಗೊತ್ತಿಲ್ಲ. ಆದರೆ ನನ್ನ ಮಾತಿಗೆ ಅಷ್ಟು ಬೆಲೆ ನೀಡುತ್ತಾರೆ. ಹೀಗಾಗಿ ಅವರು ಎಲ್ಲೇ ಇರಲಿ, ಹೇಗೇ ಇರಲಿ ಅವರ ಜೊತೆ ನಾನು ನಿಲ್ಲುವೆ. ಇಂದು ಕನಕ ದುರ್ಗಮ್ಮ ದೇವಸ್ಥಾನಕ್ಕೆ ಪೂಜೆಗೆ ಹೋದಾಗ ಆ ತಾಯಿಯಲ್ಲಿ ನಾನು ಬೇಡಿಕೊಂಡಿದ್ದೇನೆ; ನಾಗೇಂದ್ರ ಅಣ್ಣನವರು ಮತ್ತೆ ಸಚಿವರಾಗುವಂತೆ ಆಶೀರ್ವಾದ ಮಾಡು ತಾಯಿ ಎಂದು ಬೇಡಿಕೊಂಡಿದ್ದೇನೆ ಎಂದು ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು. ಮಹರ್ಷಿ ವಾಲ್ಮೀಕಿ ಅವರನ್ನು ಕೇವಲ ವರ್ಷಕ್ಕೊಮ್ಮೆ ಸ್ಮುತಿ ಮಾಡುವುದಲ್ಲ, ರಾಮಾಯಣ ಕೃತಿ ನೀಡಿದ ಮಹರ್ಷಿ ವಾಲ್ಮೀಕಿ ದೈವ ಸಮಾನರು, ನಾವು ಏಕಲವ್ಯನ ಹಾಗೆ ಕೆಲಸ ಮಾಡಬೇಕು ಎಂದರು.



ಹಲವು ಜನ್ಮದ ಪುಣ್ಯದ ಫಲವಾಗಿ ವಾಲ್ಮೀಕಿ ಜನಾಂಗದಲ್ಲಿ ಹುಟ್ಟಲು ಸಾಧ್ಯ, ನನಗೆ ಮುಂದಿನ ಜನ್ಮ ಎಂಬುದಿದ್ದರೆ ವಾಲ್ಮೀಕಿ ಸಮುದಾಯದಲ್ಲಿ ಜನಿಸುವೆ ಎಂದು ಅವರು ಹೇಳಿದರು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ 22 ವಾರ್ಡಿನ ಗಾಂಧಿ ನಗರ ಮಾರ್ಕೆಟ್ ಬಳಿ ವಾಲ್ಮೀಕಿ ಸಮುದಾಯದ ಮುಖಂಡರು ಏರ್ಪಡಿಸಿದ್ದ ಅನ್ನಸಂತರ್ಪಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಮಾಜಿ ಸಚಿವ ಬಿ.ನಾಗೇಂದ್ರ ಅವರ ನಿವಾಸಕ್ಕೆ ತೆರಳಿ ಉಭಯ ಕುಶಲೋಪರಿ ವಿಚಾರಿಸಿದರು. ಕನಕ ದುರ್ಗಮ್ಮ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ಬಳಿಕ ಮಹರ್ಷಿ ವಾಲ್ಮೀಕಿ ವೃತ್ತದಲ್ಲಿರುವ ಮಹರ್ಷಿ ವಾಲ್ಮೀಕಿ ಮೂರ್ತಿಗೆ ಮಾಲಾರ್ಪಣೆ ಮಾಡಿದರು.

## ಬಳ್ಳಾರಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಉಚಿತವಾಗಿ ಡಯಾಲಿಸಸ್ ಸೇವೆ ಪಡೆಯಲು ಸೂಚನೆ

# ಡಯಾಲಿಸಸ್ ಸೇವೆಗಳ ನೀಡುವಿಕೆ ಕುರಿತ ಸಮನ್ವಯ ಸಭೆಯಲ್ಲಿ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ

**ಬಳ್ಳಾರಿ,ಅ.17–** ಮೂತ್ರಪಿಂಡ ತೊಂದರೆಗೊಳಗಾದವರಿಗೆ ಡಯಾಲಿಸಸ್ ಸೇವೆ ಪಡೆಯಲು ಬಳ್ಳಾರಿ ವೈದ್ಯಕೀಯ ಮತ್ತು ಸಂಶೋಧನಾ ಮಹಾವಿದ್ಯಾಲಯ (ಬಿಮ್ಸ್), ಬಳ್ಳಾರಿ ಜಿಲ್ಲಾ ಆಸ್ಪತ್ರೆ ಮತ್ತು ಸಂಡೂರು, ಸಿರುಗುಪ್ಪ ಸಾರ್ವಜನಿಕ ಆಸ್ಪತ್ರೆಗಳ ಡಯಾಲಿಸಸ್ ಕೇಂದ್ರಗಳಲ್ಲಿ ಉಚಿತವಾಗಿ ಡಯಾಲಿಸಸ್ ಸೇವೆ ನೀಡಲಾಗುತ್ತಿದ್ದು, ಇದರ ಸೇವೆ ಪಡೆದುಕೊಳ್ಳಲು ಸಾರ್ವಜನಿಕರಿಗೆ ಸೂಚಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ರಾಷ್ಟ್ರೀಯ ಪ್ರಧಾನಮಂತ್ರಿ ಡಯಾಲಿಸಸ್ ಸೇವೆಗಳ ಅನುಷ್ಠಾನ ಕಾರ್ಯಕ್ರಮದಡಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬಳ್ಳಾರಿ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ (ಬಿಮ್ಸ್) ಹಾಗೂ ಖಾಸಗಿ ಡಯಾಲಿಸಸ್ ಆಸ್ಪತ್ರೆಗಳ ಅಧಿಕಾರಿ ಗಳು ಮತ್ತು ವೈದ್ಯರೊಂದಿಗೆ ಡಯಾಲಿಸಸ್ ಸೇವೆಗಳ ನೀಡುವಿಕೆ ಕುರಿತು ಬುಧವಾರದಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಏರ್ಪಡಿದ್ದ ಸಮನ್ವಯ ಸಭೆಯಲ್ಲಿ ತಜ್ಞರೊಂದಿಗೆ ಚರ್ಚಿಸಿ ಅವರು ಮಾತನಾಡಿದರು.



ಡಯಾಲೈಸರ್ ಮತ್ತು ಬ್ಲಡ್ ಟ್ಯೂಬಿಂಗ್‌ನ್ನು ಒಬ್ಬರಿಗೆ ಬಳಸಿರುವುದನ್ನು ಪುನಃ ಅದೇ ವ್ಯಕ್ತಿಗೆ 5 ರಿಂದ 6 ಬಾರಿ ಬಳಸಲು ವೈದ್ಯಕೀಯವಾಗಿ ಅವಕಾಶವಿದ್ದು, ಸಾರ್ವಜನಿಕರು ಯಾವುದೇ ತಪ್ಪು ವದಂತಿಗಳಿಗೆ ಕಿವಿಗೊಡದೇ ಡಯಾಲಿಸಸ್ ಸೇವೆಯನ್ನು ಉಚಿತವಾಗಿ ಪಡೆಯಬಹುದು. ಸಾರ್ವಜನಿಕರು ಖಾಸಗಿ ಆಸ್ಪತ್ರೆಗೆ ತೆರಳಿ ಹಣವೆಚ್ಚ ಮಾಡುವ ಅಗತ್ಯತೆ ಇರುವುದಿಲ್ಲ ಎಂಬುದನ್ನು ಮನವರಿಕೆ ಮಾಡಬೇಕು ಎಂದು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಬಿಮ್ಸ್‌ನಲ್ಲಿ 13 ಹಾಗೂ ಜಿಲ್ಲಾ ಆಸ್ಪತ್ರೆಯಲ್ಲಿ 08, ಸಂಡೂರು ಸಾರ್ವಜನಿಕ ಆಸ್ಪತ್ರೆಯಲ್ಲಿ 2 ಮತ್ತು ಸಿರುಗುಪ್ಪ ಸಾರ್ವಜನಿಕ ಆಸ್ಪತ್ರೆಯಲ್ಲಿ 2 ಡಯಾಲಿಸಸ್ ಯಂತ್ರಗಳು ಲಭ್ಯವಿದ್ದು, ಕೇಂದ್ರ ಹಾಗೂ ರಾಜ್ಯ ಸರಕಾರ ಜಂಟಿಯಾಗಿ ಬಿಪಿಎಲ್ ಮತ್ತು ಎಪಿಎಲ್ ಕುಟುಂಬಗಳಿಗೆ ಉಚಿತ ಸೇವೆಯನ್ನು ನೀಡಲಾಗುತ್ತದೆ ಎಂದರು.

## ಬಳ್ಳಾರಿಯಲ್ಲಿ ಸಡಗರದ ವಾಲ್ಮೀಕಿ ಜಯಂತಿ

# ಸರ್ವಕಾಲಿಕ ಪೂಜನೀಯ ರಾಮಾಯಣ ಕಾವ್ಯ ರಚಿಸಿದವರು ಮಹರ್ಷಿ ವಾಲ್ಮೀಕಿ: ಬಿ.ನಾಗೇಂದ್ರ

**ಬಳ್ಳಾರಿ,ಅ.17–** ಜಗತ್ತಿನ ಸುಪ್ರಸಿದ್ಧ ಮಹಾಕಾವ್ಯ ರಾಮಾಯಣ ರಚಿಸಿ ಮಹಾಪುರುಷ ಶ್ರೀರಾಮನ ಆದರ್ಶ ಜೀವನರೂಪದ ಪರಿಕಲ್ಪನೆ ತಿಳಿಸಿಕೊಟ್ಟಂತಹ ಮಹರ್ಷಿ ವಾಲ್ಮೀಕಿ ಪೂಜ್ಯರು ಅಪಾರ ಜ್ಞಾನ ಭಂಡಾರ ಹೊಂದಿದ್ದರು ಎಂದು ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಹೇಳಿದರು.



ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ, ವಾಲ್ಮೀಕಿ ಗುರುಗಳು ಮಹಾನ್ ಋಷಿ, ಪ್ರಸಿದ್ಧ ಕವಿ ಮಾತ್ರವಲ್ಲದೇ ಉತ್ತಮ ಆಡಳಿತಗಾರರಾಗಿದ್ದವರು. ಶಿಕ್ಷಣ, ಸಂಸ್ಕೃತಿ, ಸಾಮಾಜಿಕ ನ್ಯಾಯದ ಪರಿಕಲ್ಪನೆ ಇಟ್ಟುಕೊಂಡು ರಾಮಾಯಣದಲ್ಲಿ ಉತ್ತಮ ಆಡಳಿತ ರೂಪುದರ್ಶನ ನೀಡಿದ್ದಾರೆ. ಮಹರ್ಷಿ ವಾಲ್ಮೀಕಿ ಅವರು, ರಚಿಸಿದ ರಾಮಾಯಣ ಕೃತಿಯ ಮೂಲಕ ಪಿತೃತ್ವ, ಮಾತೃತ್ವ ಹಾಗೂ ಸತಿ–ಪತಿ ನಡುವಿನ ಸಂಬಂಧದ ಕುರಿತ ಜೀವನ ಸಾರವನ್ನು ತಿಳಿಸಿಕೊಟ್ಟವರು ವಾಲ್ಮೀಕಿ. ವಾಲ್ಮೀಕಿ ಸಮುದಾಯ ದವರು ಮುಂದಿನ ದಿನಮಾನಗಳಲ್ಲಿ ಆರ್ಥಿಕ ಮತ್ತು ಸಾಮಾಜಿಕವಾಗಿ ಅಭಿವೃದ್ಧಿ ಹೊಂದಬೇಕು. ಬಳ್ಳಾರಿನಗರ ಶಾಸಕ ನಾರಾ ಭರತ್ ರೆಡ್ಡಿ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು ರಚಿಸಿದ ರಾಮಾಯಣದಿಂದ ಇಂದು ನಾವೆಲ್ಲರೂ ಆದರ್ಶ ಪುರುಷ ಶ್ರೀರಾಮನನ್ನು ಜಪಿಸುತ್ತಿದ್ದೇವೆ. ವಾಲ್ಮೀಕಿ ಅವರ ಸಿದ್ಧಾಂತ ನಾವೆಲ್ಲರೂ ಪಾಲಿಸೋಣ ಎಂದು ಹೇಳಿದರು.

ಯುವಕರು ಶ್ರೀ ಮಹರ್ಷಿ ವಾಲ್ಮೀಕಿ ಅವರು ಹಾಕಿಕೊಟ್ಟ ದಾರಿದೀಪದಲ್ಲಿ ನಡೆದು, ಅಭಿವೃದ್ಧಿ ಪಥದತ್ತ ಸಾಗಿ ಸಮಾಜಕ್ಕೆ ಕೊಡುಗೆ ನೀಡಬೇಕು ಎಂದರು. ಡಾ.ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಮಾತನಾಡಿ, ಮಹಾಋಷಿ ವಾಲ್ಮೀಕಿ ಅವರ ರಾಮಾಯಣದಲ್ಲಿನ ಒಳ್ಳೆ ವಿಚಾರ–ಸಂದೇಶಗಳನ್ನು ಪ್ರತಿಯೊಬ್ಬರ ಜೀವನದಲ್ಲಿ ಅಳವಡಿಸಿ ಕೊಳ್ಳಬೇಕು ಎಂದು ಕರೆ ನೀಡಿದರು.

ವಾಲ್ಮೀಕಿ ಸಮುದಾಯದ ಮಹಾನ್ ವ್ಯಕ್ತಿಗಳಾದ ಬಿಚ್ಚುಗತ್ತಿ ಭರ್ಮಣ್ಣ, ವೀರ ಮದಕರಿ ನಾಯಕ, ಹನುಮಪ್ಪ ನಾಯಕ ಹಾಗೂ ಗುಡೇಕೋಟೆಯ ಸಂಸ್ಥಾನ, ಕೂಡ್ಲಿಗಿಯ ಜರ್ಮಲಿ ಸಂಸ್ಥಾನವನ್ನು ಈ ದಿನ ಸ್ಮರಿಸಬೇಕಿದೆ ಎಂದು ಅಭಿಪ್ರಾಯ ಪಟ್ಟರು.

## ನರೇಗಾ ಕಾಮಗಾರಿಯಲ್ಲಿ ಮಕ್ಕಳ ಬಳಕೆ

# ಅಧಿಕಾರಿಗಳಿಗೆ ಸಮನ್ಸ್ ಜಾರಿ: ಬಾಲ ನ್ಯಾಯಮಂಡಳಿಯಲ್ಲಿ ವಿಚಾರಣೆ

**ರಾಯಚೂರು, ಅ. 17–** ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಜಾಲಹಳ್ಳಿ ಗ್ರಾಪಂ ವ್ಯಾಪ್ತಿಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಕಾಮಗಾರಿಯೊಂದರಲ್ಲಿ ಮಕ್ಕಳನ್ನು ಬಳಸಿಕೊಂಡ ಆರೋಪದ ಹಿನ್ನೆಲೆಯಲ್ಲಿ ನಾಲ್ವರು ಅಧಿಕಾರಿಗಳಿಗೆ ರಾಜ್ಯ ಮಕ್ಕಳ ಹಕ್ಕುಗಳ ಆಯೋಗವು ಸಮನ್ಸ್ ಜಾಯಿರಿಗೊಳಿಸಿದೆ.

ಜಿಲ್ಲೆಯ ಜಾಲಹಳ್ಳಿ ಗ್ರಾಪಂ ವ್ಯಾಪ್ತಿಯಲ್ಲಿ ಕೈಗೊಂಡ ನರೇಗಾ ಯೋಜನೆಯ ಕಾಮಗಾರಿಯಲ್ಲಿ ಮಕ್ಕಳ ಬಳಕೆ ಮಾಡಿಕೊಂಡಿರುವ ಬಗ್ಗೆ ಜಾಲಹಳ್ಳಿಯ ಸಾಮಾಜಿಕ ಕಾರ್ಯಕರ್ತ ಅಮರೇಶ ನಾಯಕ ಹಾಗೂ ವಕೀಲ ರಾಜಾವಾಸುದೇವ ನಾಯಕ ಅವರು ದೂರು ಸಲ್ಲಿಸಿದ್ದರು. ದೂಯಿರಿನ್ವಯ ಜಾಲಹಳ್ಳಿ ಗ್ರಾಪಂ ಹಿಂದಿನ ಪಿಡಿಓ ಮಹೇಶ್ವರಿ, ತಾಪಂ ಇಓ ಬಸವರಾಜ ಹಟ್ಟಿ, ತಾಪಂ ಯೋಜನಾ ನಿರ್ದೇಶಕ ಅಣ್ಣರಾವ್ ನಾಯಕ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ರಕ್ಷಣಾಧಿಕಾರಿಗೂ ಸಮನ್ಸ್ ಜಾರಿಗೊಳಿಸಲಾಗಿದೆ. ಅಲ್ಲದೇ ಅಕ್ಟೋಬರ್ 18ರಂದು ರಾಯಚೂಯಿರಿನ ಸರ್ಕಾರಿ ವೀಕ್ಷಣಾಲಯ, ಬಾಲನ್ಯಾಯ ಮಂಡಳಿಯಲ್ಲಿ ನಡೆಯುವ ವಿಚಾ ರಣೆಗೂ ಹಾಜರಾಗುವಂತೆ ಸೂಚಿಸಿದೆ. ಉದ್ಯೋಗ ಖಾತ್ರಿ ಯೋಜನೆಯಡಿ ಕಾಮಗಾರಿವೊಂದರಲ್ಲಿ ಮಕ್ಕಳನ್ನು ಬಳಸಿಕೊಳ್ಳಲಾಗಿದೆ. ನರೇಗಾದ ಎನ್‌ಎಂಎಂಎಸ್ ತಂತ್ರಾಂಶದಲ್ಲಿ ಹಾಜರಾತಿ ಹಾಕಿರುವ ಬಗ್ಗೆ ಏಪ್ರಿಲ್ 6ರಂದು ಫೋಟೊ ಅಪ್‌ಲೋಡ್ ಮಾಡಲಾಗಿದೆ ಎಂದು ಏ.13ರಂದು ಸಾಮಾಜಿಯಿಕ ಕಾರ್ಯಕರ್ತ ಅಮರೇಶ ನಾಯಕ ದಾಖಲೆ ಸಮೇತ ದೂರು ನೀಡಿದ್ದರು. ನರೇಗಾ ಯೋಜನೆಯಡಿ ತಾಲೂಕಿನಲ್ಲಿ ನಕಲಿ ದಾಖಲೆ ಸೃಷ್ಟಿಸಿ ಭಾರಿ ಅವ್ಯವಹಾರ ಮಾಡಿದ ಆರೋಪಗಳಿವೆ. ವರ್ಷದ ಹಿಂದೆ ರಾಜ್ಯ ಮಟ್ಟದ ಸಾಮಾಜಿಕ ಲೆಕ್ಕ ಪರಿಶೋಧನಾ ತಂಡ ಭೇಟಿ ನೀಡಿ ತಾಲೂಕಿನ ಎಲ್ಲ 33 ಗ್ರಾಪಂಗಳಲ್ಲಿ ತನಿಖೆ ಕೈಗೊಂಡಿತ್ತು. ಇದರಲ್ಲಿ ಸುಮಾರು 49 ಕೋಟಿ ಹಣವನ್ನು ನಕಲಿ ಉದ್ಯೋಗ ಚೀಟಿ ಕುಟುಂಬಗಳಿಗೆ ಜಮೆ ಮಾಡಲಾಗಿತ್ತು. ನಕಲಿ ಸಂಸ್ಥೆಗಳಿಗೆ ಬಿಒಸಿ ಹಣ ಜಮಾ ಮಾಡಿದ್ದು ಸೇರಿ ಸುಮಾರು 200 ಕೋಟಿ ರೂ. ಅನುದಾನ ದುರ್ಬಳಕೆವಾಗಿರುವ ಬಗ್ಗೆ ವರದಿಯಲ್ಲಿ ಉಲ್ಲೇಖಿಸಲಾಗಿತ್ತು.

ವರದಿ ಆಧಾರಿಸಿ ತಾಪಂ ಅಂದಿನ ಇಒ ಪಂಪಾಪತಿ ಹಿರೇಮಠ ಹಾಗೂ ಯೋಜನಾ ನಿರ್ದೇಶಕ ಬಸಣ್ಣ ನಾಯಕ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಾಗಿತ್ತು. ಅಲ್ಲದೆ 33 ಗ್ರಾಪಂಗಳ ಎಲ್ಲ ಪಿಡಿಒಗಳನ್ನು ಅಮಾನತು ಮಾಡಲಾಗಿತ್ತು. ಆದರೆ, ಈ ಅವ್ಯವಹಾರದಲ್ಲಿ ಯಾವುದೇ ಒಬ್ಬ ಗ್ರಾಪಂ ಅಧ್ಯಕ್ಷರ ವಿರುದ್ಧ ಕ್ರಮ ತೆಗೆದುಕೊಳ್ಳದೇ ವಿಪರ್ಯಾಸ ಎಂಬುವುದು ಸಾರ್ವಜನಿಕರು ಆರೋಪಿಸುತ್ತಾರೆ.



ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕು ಜಾಲಹಳ್ಳಿ ಗ್ರಾಪಂ ಕಾರ್ಯಾಲಯ.

### ಅಧಿಕಾರಿಗಳ ವರ್ತನೆಯೂ ಬದಲಾವಣೆಯಾಗಿಲ್ಲ

ದೇವದುರ್ಗ ತಾಲ್ಲೂಕಿನಾದ್ಯಂತ ನರೇಗಾ ಯೋಜನೆಯಡಿ ಕೋಟ್ಯಂತರ ಅನುದಾನ ಅವ್ಯವಹಾರ ನಡೆದಿದ್ದು, 38ಕ್ಕೂ ಅಧಿಕ ಅಧಿಕಾರಿಗಳು ಅಮಾನತುಗೊಂಡರೂ ಈಗಿನ ಅಧಿಕಾರಿಗಳಿಗೆ ಎಚ್ಚೆತ್ತುಕೊಂಡಿಲ್ಲ. ಜಾಲಹಳ್ಳಿ ಗ್ರಾಪಂ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಮಕ್ಕಳನ್ನು ಬಳಸಿಕೊಂಡಿದ್ದೇ ಇದಕ್ಕೆ ಸಾಕ್ಷಿಯಾಗಿದೆ. ಈ ಬಗ್ಗೆ ಮಕ್ಕಳ ಆಯೋಗಕ್ಕೆ ದೂರು ನೀಡಲಾಗಿತ್ತು. ಈ ಹಿನ್ನೆಲೆಯಲ್ಲಿ ನಾಲ್ವರು ಅಧಿಕಾರಿಗಳಿಗೆ ಸಮನ್ಸ್ ಜಾರಿಗೊಳಿಸಲಾಗಿದೆ.

–ರಾಜಾ ವಾಸುದೇವ ನಾಯಕ ವಕೀಲ
ದೂರುದಾರ ಜಾಲಹಳ್ಳಿ.

# ಭಾರತ-ಕೆನಡಾ ಸಂಬಂಧಕ್ಕೆ ಆಗಿರುವ ಹಾನಿಯ ಹೊಣೆ ಜಸ್ಟಿನ್ ಟ್ರುಡೊ ಮೇಲಿದೆ: ಎಂಇಎ

**ನವದೆಹಲಿ,ಅ.17:** 'ಭಾರತ-ಕೆನಡಾ ನಡುವಣ ರಾಜತಾಂತ್ರಿಕ ಸಂಬಂಧಕ್ಕೆ ಆಗಿರುವ ಹಾನಿಯ ಹೊಣೆಗಾರಿಕೆಯು ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ಅವರ ಮೇಲಿದೆ' ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಗುರುವಾರ ತಿಳಿಸಿದೆ. 'ಖಾಲಿಸ್ತಾನಿ ಪ್ರತ್ಯೇಕತಾವಾದಿ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಯಲ್ಲಿ ಭಾರತದ ಏಜೆಂಟ್ಗಳ ಪಾತ್ರ ಇದೆ ಎಂದು ಆರೋಪಿಸಿದಾಗ ನನ್ನಲ್ಲಿ ಯಾವುದೇ ಬಲವಾದ ಪುರಾವೆಗಳು ಇರಲಿಲ್ಲ. ಗುಪ್ತಚರ ಮಾಹಿತಿ ಮಾತ್ರ ಇತ್ತು' ಎಂದು ಟ್ರುಡೊ ಬುಧವಾರ ಹೇಳಿಕೆ ಕೊಟ್ಟಿದ್ದರು. ಚುನಾವಣಾ ಪ್ರಕ್ರಿಯೆಗಳಲ್ಲಿ ಹಾಗೂ ಪ್ರಜಾತಾಂತ್ರಿಕ ಸಂಸ್ಥೆಗಳಲ್ಲಿ ವಿದೇಶಿ ಶಕ್ತಿಗಳ ಹಸ್ತಕ್ಷೇಪ ಕುರಿತ ವಿಚಾರಣೆ ನಡೆಸುತ್ತಿರುವ ತನಿಖಾ ಆಯೋಗದ ಮುಂದೆ ಟ್ರುಡೊ ಅವರು ಒಟ್ಟಾವದಲ್ಲಿ ಹೇಳಿಕೆ ನೀಡಿದ ಬೆನ್ನಲ್ಲೇ ಗುರುವಾರ ಬೆಳಿಗ್ಗೆ ವಿದೇಶಾಂಗ ವ್ಯವಹಾರಗಳ ಸಚಿವಾಲಯವು ಪ್ರಕಟಣೆ ಹೊರಡಿಸಿದೆ. 'ನಾವು ನಿರಂತವಾಗಿ ಹೇಳುತ್ತಾ ಬಂದಿರುವುದನ್ನು ಟ್ರುಡೊ ಅವರ ಮಾತುಗಳು ದೃಢಪಡಿಸುತ್ತವೆ. ನಮ್ಮ ರಾಜತಾಂತ್ರಿಕ ಅಧಿಕಾರಿಗಳ ವಿರುದ್ಧದ ಗಂಭೀರ ಆರೋಪಗಳನ್ನು ಪುಷ್ಟೀಕರಿಸುವಂತಹ ಯಾವುದೇ ಪುರಾವೆಗಳನ್ನು ಕೆನಡಾ ಇದುವರೆಗೂ ಒದಗಿಸಿಲ್ಲ' ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. 'ಕೆನಡಾದ ದರ್ಪದ ನಡವಳಿಕೆಯಿಂದಾಗಿ ಉಭಯ ದೇಶಗಳ ನಡುವಣ ಸಂಬಂಧಕ್ಕೆ ಹಾನಿ ಉಂಟಾಗಿದ್ದು, ಅದರ ಸಂಪೂರ್ಣ ಹೊಣೆಗಾರಿಕೆಯು ಟ್ರುಡೊ ಅವರ ಮೇಲಿದೆ' ಎಂದಿದ್ದಾರೆ.

'ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಕುರಿತು ಭಿನ್ನಾಭಿಪ್ರಾಯ ಹೊಂದಿರುವ ಕೆನಡಾ ಪ್ರಜೆಗಳ ಬಗ್ಗೆ ಮಾಹಿತಿಯನ್ನು ಭಾರತದ ರಾಜತಾಂತ್ರಿಕರು ಸಂಗ್ರಹಿಸಿ, ಅದನ್ನು ಭಾರತ ಸರ್ಕಾರದ ಉನ್ನತ ಹುದ್ದೆಗಳಲ್ಲಿ ಇರುವವರಿಗೆ ಹಾಗೂ ಲಾರೆನ್ಸ್ ಬಿಷ್ಣೋಯಿ ಗ್ಯಾಂಗ್‌ನಂತಹ ಕ್ರಿಮಿನಲ್ ಸಂಘಟನೆಗಳಿಗೆ ರವಾನಿಸುತ್ತಿದ್ದಾರೆ' ಎಂದು ಆರೋಪಿಸಿದ್ದಾರೆ.


**ಕೆನಡಾ ಕ್ರಮ ಕೈಗೊಂಡಿಲ್ಲ:**

ಲಾರೆನ್ಸ್ ಬಿಷ್ಣೋಯಿ ಗ್ಯಾಂಗ್ನ ಸದಸ್ಯರು ಸೇರಿದಂತೆ ಹಲವರ ಬಗ್ಗೆ ನಾವು ಕೆನಡಾ ಸರ್ಕಾರದೊಂದಿಗೆ ಮಾಹಿತಿ ಹಂಚಿಕೊಂಡಿದ್ದೇವೆ ಮತ್ತು ಅವರನ್ನು ಬಂಧಿಸಲು ಅಥವಾ ಕಾನೂನಿನ ಪ್ರಕಾರ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಕೇಳಿಕೊಂಡಿದ್ದೇವೆ' ಎಂದು ರಣಧೀರ್ ಜೈಸ್ವಾಲ್ ಹೇಳಿದ್ದಾರೆ. 'ಆದರೆ ಅವರ ವಿರುದ್ಧ ಕೆನಡಾ ಯಾವುದೇ ಕ್ರಮ ಕೈಗೊಂಡಿಲ್ಲ. ಇದು ನಿಜಕ್ಕೂ ಅಚ್ಚರಿ ಉಂಟುಮಾಡಿದೆ' ಎಂದಿದ್ದಾರೆ. 'ನಾವು ಯಾರನ್ನು ಗಡೀಪಾರು ಮಾಡುವಂತೆ ಮತ್ತು ಯಾರ ಮೇಲೆ ಕ್ರಮ ತೆಗೆದುಕೊಳ್ಳುವಂತೆ ಕೇಳಿಕೊಂಡಿದ್ದೇವೋ ಅವರು ಮಾಡಿರುವ ಅಪರಾಧ ಕೃತ್ಯಗಳಿಗಾಗಿ ಕೆನಡಾ ಪೊಲೀಸರು ಭಾರತವನ್ನು ದೂಷಿಸುತ್ತಿದ್ದಾರೆ' ಎಂದು ಟೀಕಿಸಿದ್ದಾರೆ.

# ಹಮಾಸ್ ಮುಖ್ಯಸ್ಥ ಹತ್ಯೆ: ಅ.7ರ ದಾಳಿಯ ಸೂತ್ರಧಾರನ ಹುಟ್ಟಡಗಿಸಿದ ಇಸ್ರೇಲ್

ದಕ್ಷಿಣ ಗಾಜಾದಲ್ಲಿ ಕಾರ್ಯಾಚರಣೆ ನಡೆಸುತ್ತಿದ್ದ ಇಸ್ರೇಲಿ ಪಡೆಗಳು ಹಮಾಸ್ ನಾಯಕ ಯಾಹ್ಯಾ ಸಿನ್ವಾರ್ ನನ್ನು ಹತ್ಯೆ ಮಾಡಿರುವುದಾಗಿ ಇಸ್ರೇಲಿ ಮಂತ್ರಿಗಳಿಗೆ ಮಾಹಿತಿ ನೀಡಿರುವುದಾಗಿ ಪರಿಸ್ಥಿತಿಯ ಬಗ್ಗೆ ತಿಳಿದ ಇಬ್ಬರು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಮಾಹಿತಿ ನೀಡಿದವರ ಹೆಸರನ್ನು ಬಹಿರಂಗಪಡಿಸದೆ, ಗಾಜಾ ಯುದ್ಧಕ್ಕೆ ಕಾರಣವಾದ ಇಸ್ರೇಲ್ ಮೇಲೆ ಕಳೆದ ಅಕ್ಟೋಬರ್‌ನಲ್ಲಿ ವಿಧ್ವಂಸಕ ದಾಳಿಯ ಸೂತ್ರಧಾರ ಯಾಹ್ಯಾ ಸಿನ್ವಾರ್ ಮೃತಪಟ್ಟಿರುವುದಾಗಿ ಮಾಹಿತಿ ನೀಡಿದ್ದಾರೆ.



**ಇಸ್ರೇಲ್‌ನ ಪ್ರಮುಖ ಶತ್ರುವಾಗಿದ್ದ ಸಿನ್ವಾರ್**

ಮಿಲಿಟರಿಯಿಂದ ಯಾವುದೇ ತಕ್ಷಣದ ದೃಢೀಕರಣವಿಲ್ಲ, ಇದು ಮೊದಲು ಇಸ್ರೇಲ್ನ ಮೋಸ್ಟ್ ವಾಂಟೆಡ್ ಶತ್ರು ಸಿನ್ವಾರ್, ಗಾಜಾ ಪಟ್ಟಿಯ ಕಾರ್ಯಾಚರಣೆಯ ಸಂದರ್ಭದಲ್ಲಿ ಕೊಲ್ಲಲ್ಪಟ್ಟ ಮೂವರ ಪೈಕಿ ಈತನೂ ಇರುವ ಸಾಧ್ಯತೆಯನ್ನು ಪರಿಶೀಲಿಸುತ್ತಿರುವುದಾಗಿ ಮಿಲಿಟರಿ ಮಾಹಿತಿ ನೀಡಿದೆ. "ಈ ಹಂತದಲ್ಲಿ ಭಯೋತ್ಪಾದಕರ ಗುರುತನ್ನು ಖಚಿತಪಡಿಸಲು ಸಾಧ್ಯವಿಲ್ಲ" ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

**ಉಗ್ರರು ಹತ್ಯೆಯಾದ ಕಟ್ಟಡದಲ್ಲಿಲಲ್ಲ ಒತ್ತೆಯಾಳುಗಳು**

ಮೂವರು ಉಗ್ರರು ಹತ್ಯೆಯಾದ ಕಟ್ಟಡದಲ್ಲಿ ಯಾವುದೇ ಇಸ್ರೇಲಿ ಒತ್ತೆಯಾಳುಗಳು ಇರುವ ಲಕ್ಷಣಗಳಿಲ್ಲ ಎಂದು ಅವರು ತಿಳಿಸಿದ್ದಾರೆ. ಹಮಾಸ್ನಿಂದ ತಕ್ಷಣವೇ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಭದ್ರತಾ ಸಮಸ್ಯೆಗಳ ಬಗ್ಗೆ ಸಾಮಾನ್ಯವಾಗಿ ಪ್ರಕಟಿಸುವ ಹಮಾಸ್-ಸಂಯೋಜಿತ ವೆಬ್ಸೈಟ್ ಅಲ್-ಮಜ್ದ್, ಸಿನ್ವಾರ್ ಬಗ್ಗೆ ಗುಂಪಿನಿಂದಲೇ ಮಾಹಿತಿಗಾಗಿ ಕಾಯಬೇಕೆಂದು ಪ್ಯಾಲೆಸ್ಟೀನಿಯಾದವರನ್ನು ಒತ್ತಾಯಿಸಿದೆ ಮತ್ತು ಇಸ್ರೇಲಿ ಮಾಧ್ಯಮಗಳಲ್ಲಿ ಈ ಮಾಹಿತಿ ಬರದೆ ಇರುವಂತೆ ತಡೆಯುವ ಗುರಿಯನ್ನು ಕೂಡ ಅವರು ಹೊಂದಿದ್ದಾರೆ ಎಂದು ಮಿಲಿಟರಿ ಪಡೆಗಳು ತಿಳಿಸಿವೆ.

**101 ಮಂದಿ ಒತ್ತೆಯಾಳುಗಳು**

ಈ ಕಾರ್ಯಾಚರಣೆ ಸಂದರ್ಭದಲ್ಲಿ ಸಿನ್ವಾರ್ ಆಕಸ್ಮಿಕವಾಗಿ ಸಿಕ್ಕಿಬಿದ್ದಿದ್ದು, ಸಾಮಾನ್ಯ ದಾಳಿಯಲ್ಲಿ ಮೃತಪಟ್ಟಿರುವುದಾಗಿ ಇಸ್ರೇಲಿ ಮಾಧ್ಯಮ ವರದಿ ಮಾಡಿದೆ.

ಇತ್ತೀಚಿನ ದಿನಗಳಲ್ಲಿ ತನ್ನ ಶತ್ರುಗಳ ಪ್ರಮುಖ ನಾಯಕನಾಗಿರುವ ಈತ ಉನ್ನತ ಮಟ್ಟದ ಹತ್ಯೆಗಳಲ್ಲಿ ಪ್ರಮುಖ ಪಾಲುದಾರನಾಗಿದ್ದು, ಈತನ ಹತ್ಯೆ ಮಾಡಲು ಇಸ್ರೇಲಿ ಮಿಲಿಟರಿ ಮತ್ತು ಪ್ರಧಾನಿ ಬೆಂಜಮಿನ್ ನೆತನ್ಯಾಹುಗೆ ಪ್ರಮುಖ ಕಾರಣವಾಗಿದೆ . ಗಾಜಾದಲ್ಲಿ ಇನ್ನೂ 101 ಇಸ್ರೇಲಿ ಮತ್ತು ವಿದೇಶಿ ಒತ್ತೆಯಾಳುಗಳ ಕುಟುಂಬಗಳು ಸಿನ್ವಾರ್ ಸಾವಿನ ಸುದ್ದಿಯನ್ನು ಸ್ವಾಗತಿಸಿದರು ಆದರೆ ಒತ್ತೆಯಾಳುಗಳನ್ನು ಮನೆಗೆ ಕರೆತರುವಂತೆ ಮನವಿ ಮಾಡಿದ್ದಾರೆ.

**ಒಪ್ಪಂದದ ಮೂಲಕ ಒತ್ತೆಯಾಳುಗಳ ಬಿಡುಗಡೆಗೆ ಎಂದ ಹಮಾಸ್**

ಎಲ್ಲಾ 101 ಒತ್ತೆಯಾಳುಗಳ ಬಿಡುಗಡೆಗೆ ತಕ್ಷಣದ ಒಪ್ಪಂದವನ್ನು ಅನುಸರಿಸುವ ಮೂಲಕ ಮಿಲಿಟರಿ ಸಾಧನೆಯನ್ನು ರಾಜತಾಂತ್ರಿಕವಾಗಿ ನಿಯಂತ್ರಿಸಲು ನಾವು (ಹಮಾಸ್) ಇಸ್ರೇಲಿ ಸರ್ಕಾರ, ವಿಶ್ವ ನಾಯಕರು ಮತ್ತು ಮಧ್ಯಸ್ಥಿಕೆ ದೇಶಗಳಿಗೆ ಕರೆ ನೀಡುತ್ತೇವೆ ಎಂದು ಹಮಾಸ್ ಹೇಳಿದೆ.

**ಬೈಬಲ್ ಉಲ್ಲೇಖಿಸಿದ ರಕ್ಷಣಾ ಸಚಿವ**

ಇಸ್ರೇಲಿ ರಕ್ಷಣಾ ಸಚಿವ ಯೋವ್ ಗ್ಯಾಲಂಟ್ ಅವರು ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್ನಲ್ಲಿ ಬೈಬಲ್‌ನ ಉಲ್ಲೇಖದೊಂದಿಗೆ ಸಂದೇಶವನ್ನು ಪೋಸ್ಟ್ ಒಂದನ್ನು ಮಾಡಿದ್ದು, ನೀವು ನಿಮ್ಮ ಶತ್ರುಗಳನ್ನು ಹಿಂಬಾಲಿಸುವಿರಿ ಮತ್ತು ಅವರು ನಿಮ್ಮ ಮುಂದೆ ಕತ್ತಿಯಿಂದ ಬೀಳುವರು ಎಂದು ಬರೆದುಕೊಂಡಿದ್ದಾರೆ.

ಪೋಸ್ಟ್‌ನಲ್ಲಿ ಕಳೆದ ತಿಂಗಳು ಬೈರುತ್‌ನಲ್ಲಿ ಹತ್ಯೆಗೀಡಾದ ಹಿಜ್ಬುಲ್ಲಾ ಮಾಜಿ ನಾಯಕ ಹಸನ್ ನಸ್ರಲ್ಲಾ ಮತ್ತು ಆಗಸ್ಟ್‌ನಲ್ಲಿ ಕೊಲ್ಲಲ್ಪಟ್ಟ ಮಾಜಿ ಹಮಾಸ್ ಮಿಲಿಟರಿ ಮುಖ್ಯಸ್ಥ ಮೊಹಮ್ಮದ್ ಡೀಫ್ ಅವರ ಚಿತ್ರಗಳನ್ನು ಹೊಂದಿದ್ದು, ಅವರ ನಡುವೆ ಮೂರನೇ ಚಿತ್ರಕ್ಕಾಗಿ ಖಾಲಿ ಜಾಗವಿದ್ದು, ಈಗ ಆ ಮೂರನೇ ಸ್ಥಳವನ್ನೂ ಕೂಡ ಪೂರ್ಣಗೊಳಿಸಲಾಗಿದೆ.

# ಗಾಜಾ ಶಾಲೆಯ ಮೇಲೆ ಇಸ್ರೇಲ್ ದಾಳಿ; 28 ಬಲಿ



**ಗಾಜಾ,ಅ.17:** ಉತ್ತರ ಗಾಜಾಪಟ್ಟಿಯ ಶಾಲೆಯೊಂದರಲ್ಲಿ ನಿರಾಶ್ರಿತರಿಗೆ ಆಶ್ರಯ ಕಲ್ಪಿಸಿದ್ದ ಶಾಲೆಯ ಮೇಲೆ ಇಸ್ರೇಲ್ ಸೇನೆ ಗುರುವಾರ ದಾಳಿ ನಡೆಸಿದೆ. ಈ ವೇಳೆ ಮಕ್ಕಳೂ ಸೇರಿದಂತೆ ಕನಿಷ್ಠ 28 ಮಂದಿ ಪ್ಯಾಲೆಸ್ಟೀನಿಯರು ಮೃತಪಟ್ಟಿದ್ದಾರೆ ಎಂದು ಗಾಜಾ ಆರೋಗ್ಯ ಇಲಾಖೆ ತಿಳಿಸಿದೆ. ಇದಕ್ಕೆ ಪ್ರತಿಕ್ರಿಯಿಸಿರುವ ಇಸ್ರೇಲ್, ಉಗ್ರರನ್ನು ಗುರಿಯಾಗಿಸಿ ದಾಳಿ ನಡೆಸಿದ್ದಾಗಿ ಹೇಳಿಕೆ ಬಿಡುಗಡೆ ಮಾಡಿದೆ. ದಾಳಿಯಲ್ಲಿ ಸಾಕಷ್ಟು ಮಂದಿ ಗಾಯಗೊಂಡಿದ್ದಾರೆ ಎಂದು ಗಾಜಾ ಆರೋಗ್ಯ ಇಲಾಖೆಯ ಅಧಿಕಾರಿ ಮೆದ್ಹತ್ ಅಬ್ಬಾಸ್ ಎಂಬವರು ತಿಳಿಸಿದ್ದಾರೆ. 'ಬೆಂಕಿ ನಂದಿಸಲು ನೀರೂ ಇಲ್ಲ. ಏನೇನೂ ಉಳಿದಿಲ್ಲ. ಇದು ಕಗ್ಗೊಲೆ' ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. 'ನಾಗರಿಕರು, ಮಕ್ಕಳು ಹತ್ಯೆಯಾಗಿದ್ದು, ಸುಟ್ಟು ಕರಕಲಾಗಿದ್ದಾರೆ' ಎಂದು ನೊಂದುಕೊಂಡಿದ್ದಾರೆ. ಇಸ್ರೇಲ್ ಸೇನೆ, 'ಜಬಲಿಯಾದಲ್ಲಿರುವ ಅಬು ಹುಸ್ಸೇನ್ ಶಾಲೆಯು ನಿರಾಶ್ರಿತರ ನೆಲೆಯಾಗಿತ್ತು. ಅಲ್ಲಿ ಹಮಾಸ್ ಹಾಗೂ ಇಸ್ಲಾಮಿಕ್ ಜಿಹಾದ್ ಸಂಘಟನೆಗಳ ಉಗ್ರರು ಸಕ್ರಿಯರಾಗಿದ್ದರು. ದಾಳಿ ನಡೆದ ಸಂದರ್ಭದಲ್ಲಿ ಶಾಲೆಯ ಆವರಣದಲ್ಲಿ ಸಾಕಷ್ಟು ಉಗ್ರರು ಇದ್ದರು' ಎಂದು ಹೇಳಿದೆ.

# ಹಸೀನಾ ಬಂಧನಕ್ಕೆ ಗಡುವು ವಿಧಿಸಿದ ನ್ಯಾಯಮಂಡಳಿ

**ಢಾಕಾ,ಅ.17:** ಬಾಂಗ್ಲಾದೇಶದ ಅಂತಾರಾಷ್ಟ್ರೀಯ ಅಪರಾಧಗಳ ನ್ಯಾಯಮಂಡಳಿಯು ಗುರುವಾರ ಮಾಜಿ ಪ್ರಧಾನಿ ಶೇಖ್ ಹಸೀನಾ ಸೇರಿದಂತೆ 45 ಮಂದಿ ಇತರರ ವಿರುದ್ಧ ಬಂಧನ ವಾರಂಟ್ ಹೊರಡಿಸಿದೆ. ಇತ್ತೀಚಿನ ಸಾಮೂಹಿಕ ವಿದ್ಯಾರ್ಥಿ ಚಳವಳಿಯ ಸಂದರ್ಭದಲ್ಲಿ ಮಾನವೀಯತೆಯ ವಿರುದ್ಧದ ಅಪರಾಧಗಳಿಗೆ ಸಂಬಂಧಿಸಿದಂತೆ ಅವಾಮಿ ಲೀಗ್ನ ಉನ್ನತ ನಾಯಕರ ಮೇಲೆ ಬಂಧನ ವಾರಂಟ್ ಹೊರಡಿಸಲಾಗಿದೆ. ಬಂಧನ ವಾರಂಟ್‌ಗಳನ್ನು ಕೋರಿ ಪ್ರಾಸಿಕ್ಯೂಷನ್ ನ್ಯಾಯಮಂಡಳಿಗೆ ಎರಡು ಅರ್ಜಿಗಳನ್ನು ಸಲ್ಲಿಸಿದ ನಂತರ ನ್ಯಾಯಮೂರ್ತಿ ಎಂಡಿ ಗೋಲಂ ಮೊರ್ತುಜಾ ಮಜುಂದಾರ್ ನೇತೃತ್ವದ ನ್ಯಾಯಮಂಡಳಿ ಈ ಆದೇಶವನ್ನು ನೀಡಿದೆ ಎಂದು ಮುಖ್ಯ ಪ್ರಾಸಿಕ್ಯೂಟರ್ ಮುಹಮ್ಮದ್ ತಾಜುಲ್ ಇಸ್ಲಾಂ ಹೇಳಿರುವುದಾಗಿ ಡೈಲಿ ಸ್ಟಾರ್ ವರದಿ ಮಾಡಿದೆ. ಹಸೀನಾ ಸೇರಿದಂತೆ 46 ಮಂದಿಯನ್ನು ನವೆಂಬರ್ 18 ರೊಳಗೆ ಬಂಧಿಸಿ ತನ್ನ ಮುಂದೆ ಹಾಜರುಪಡಿಸುವಂತೆ ನ್ಯಾಯಪೀಠವು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದೆ ಎಂದು ವರದಿ ಮಾಡಲಾಗಿದೆ. ಆಗಸ್ಟ್‌ನಲ್ಲಿ, ಬಾಂಗ್ಲಾದೇಶದ ಮಧ್ಯಂತರ ಸರಕಾರವು ಅಂತಾರಾಷ್ಟ್ರೀಯ ಅಪರಾಧಗಳ ನ್ಯಾಯಮಂಡಳಿಯಲ್ಲಿ ಹಸೀನಾ ನೇತೃತ್ವದ ಸರಕಾರದ ವಿರುದ್ಧ ವಿದ್ಯಾರ್ಥಿಗಳ ಇತ್ತೀಚಿನ ಸಾಮೂಹಿಕ ಚಳವಳಿಯ ಸಂದರ್ಭದಲ್ಲಿ ಹತ್ಯೆಗಳಲ್ಲಿ ಭಾಗಿಯಾಗಿರುವವರನ್ನು ವಿಚಾರಣೆಗೆ ಒಳಪಡಿಸುವುದಾಗಿ ಹೇಳಿದೆ. ಜುಲೈ ಮಧ್ಯದಲ್ಲಿ ಸರಕಾರಿ ಉದ್ಯೋಗಗಳಲ್ಲಿ ವಿವಾದಾತ್ಮಕ ಕೋಟಾ ವ್ಯವಸ್ಥೆಯ ವಿರುದ್ಧ ವಿದ್ಯಾರ್ಥಿಗಳು ನಡೆಸಿದ ಬೃಹತ್ ಪ್ರತಿಭಟನೆ, ಹಸೀನಾ ಸರಕಾರದ ಪತನದ ನಂತರ ದೇಶಾದ್ಯಂತ ಭುಗಿಲೆದ್ದ ಹಿಂಸಾಚಾರದಲ್ಲಿ ಬಾಂಗ್ಲಾದೇಶದಲ್ಲಿ ಸಾವನ್ನಪ್ಪಿದವರ ಸಂಖ್ಯೆ 600 ಕ್ಕೂ ಹೆಚ್ಚು ಎಂದು ತಿಳಿದು ಬಂದಿದೆ.



# ಗಾಜಾಗೆ ಆಹಾರ ನೆರವಿಗೆ ಅಡ್ಡಿ: ವಿಶ್ವಸಂಸ್ಥೆ

**ವಿಶ್ವಸಂಸ್ಥೆ,ಅ.17:** ಗಾಜಾಗೆ ನೆರವು ತಲುಪಿಸಲು ಮತ್ತು ಯುದ್ಧ ವಲಯದಾದ್ಯಂತ ಅದನ್ನು ವಿತರಿಸಲು ಅಡೆತಡೆಗಳಿವೆ. ಅಕ್ಟೋಬರ್ 2 ಮತ್ತು ಅಕ್ಟೋಬರ್ 15ರ ನಡುವಿನ ಅವಧಿಯಲ್ಲಿ ಯಾವುದೇ ಆಹಾರ ನೆರವು ಉತ್ತರ ಗಾಜಾ ಪ್ರವೇಶಿಸಿಲ್ಲ ಎಂದು ವಿಶ್ವಸಂಸ್ಥೆ ಹೇಳಿದೆ.

ಗಾಝಾಕ್ಕೆ ಆಹಾರ ತಲುಪಿಸುವ ಕಾರ್ಯಕ್ಕೆ ಇಸ್ರೇಲ್ ಮತ್ತು ಗಾಝಾದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದು ಕಾರಣವಾಗಿದೆ ಎಂದು ವಿಶ್ವಸಂಸ್ಥೆ ದೂಷಿಸಿದೆ.

ಉತ್ತರ ಗಾಝಾದಲ್ಲಿನ ಹೀನಾಯ, ಅಸಹನೀಯ ಸ್ಥಿತಿಯನ್ನು ಗಮನಿಸಿದರೆ ಮಾನವೀಯ ನೆರವು ಒದಗುತ್ತಿಲ್ಲ ಎಂಬುದು ಸ್ಪಷ್ಟವಾಗಿದೆ ಎಂದು ವಿಶ್ವಸಂಸ್ಥೆ ನೆರವು ವಿತರಣೆ ಏಜೆನ್ಸಿಯ ಮುಖ್ಯಸ್ಥೆ ಜಾಯ್ಸ್ ಎಂಸುಯ ಹೇಳಿದ್ದಾರೆ.

ಗಾಜಾದಲ್ಲಿ ಕಳೆದ 2 ವಾರಗಳಲ್ಲಿ ಇಸ್ರೇಲ್ನೊಂದಿಗೆ ಸಮನ್ವಯಗೊಳಿಸಲಾದ 286 ಮಾನವೀಯ ನೆರವಿನ ಕಾರ್ಯಾಚರಣೆಯಲ್ಲಿ ಮೂರನೇ ಒಂದು ಭಾಗದಷ್ಟು ಮಾತ್ರ ಸುಸೂತ್ರವಾಗಿ ನಡೆದಿದೆ. ಅಕ್ಟೋಬರ್ 12ರಂದು ಉತ್ತರ ಗಾಝಾದ 2 ಆಸ್ಪತ್ರೆಗಳಿಗೆ ಮಾನವೀಯ ತಂಡವೊಂದು ಭೇಟಿ ನೀಡಿದ್ದು ಗಂಭೀರ ಅಸ್ವಸ್ಥಗೊಂಡಿದ್ದ 12ಕ್ಕೂ ಅಧಿಕ ರೋಗಿಗಳನ್ನು ಗಾಜಾ ನಗರದ ಅಲ್‌ಶಿಫಾ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ ಎಂದವರು ವಿಶ್ವಸಂಸ್ಥೆ ಭದ್ರತಾ ಮಂಡಳಿಗೆ ಮಾಹಿತಿ ನೀಡಿದ್ದಾರೆ.


ವಿಶ್ವಸಂಸ್ಥೆ ಭದ್ರತಾ ಮಂಡಳಿ ಸಭೆಯನ್ನುದ್ದೇಶಿಸಿ ಮಾತನಾಡಿದ ವಿಶ್ವಸಂಸ್ಥೆಗೆ ಅಮೆರಿಕದ ರಾಯಭಾರಿ ಲಿಂಡಾ ಥಾಮಸ್-ಗ್ರೀನ್‌ಫೀಲ್ಡ್ ಗಾಜಾ ಮತ್ತು ಪಶ್ಚಿಮದಂಡೆಯಲ್ಲಿ ಇಸ್ರೇಲ್‌ನ ಕ್ರಮಗಳನ್ನು ಅಮೆರಿಕ ಗಮನಿಸುತ್ತಿದೆ ಮತ್ತು ಉತ್ತರ ಗಾಜಾಪಟ್ಟಿಯಲ್ಲಿ 'ಉಪವಾಸ ಕೆಡಹುವ ಕಾರ್ಯನೀತಿ'ಯನ್ನು ಇಸ್ರೇಲ್ ಹೊಂದಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳಲು ಬದ್ಧವಾಗಿದೆ' ಎಂದು ಹೇಳಿದ್ದಾರೆ.

'ಅದು ತಮ್ಮ ನೀತಿಯಲ್ಲ ಮತ್ತು ಆಹಾರ ಹಾಗೂ ಇತರ ಅಗತ್ಯ ವಸ್ತುಗಳ ಪೂರೈಕೆಯನ್ನು ತಡೆಯುವುದಿಲ್ಲ ಎಂದು ಇಸ್ರೇಲ್ ಸರಕಾರ ಹೇಳಿದೆ. ಅವರ ಕೃತ್ಯ ಹಾಗೂ ಹೇಳಿಕೆಗಳು ಹೊಂದಿಕೆಯಾಗುತ್ತವೆಯೇ ಎಂಬ ಬಗ್ಗೆ ನಾವು ನಿಗಾ ವಹಿಸಿದ್ದೇವೆ. ತಕ್ಷಣದಿಂದಲೇ ಗಾಝಾಕ್ಕೆ ಆಹಾರ ಹಾಗೂ ಇತರ ವಸ್ತುಗಳ ಪೂರೈಕೆಯನ್ನು ಹೆಚ್ಚಿಸಬೇಕು. ಲಸಿಕೆ ಹಾಕಿಸಲು ಹಾಗೂ ಮಾನವೀಯ ನೆರವು ವಿತರಣೆಗೆ ಅವಕಾಶ ಮಾಡಿಕೊಡಲು ಗಾಜಾದ್ಯಂತ ಮಾನವೀಯ ವಿರಾಮದ ಅಗತ್ಯವಿದೆ ಎಂದವರು ಹೇಳಿದ್ದಾರೆ.

ಪ್ಯಾಲೆಸ್ತೀನ್ ಪ್ರದೇಶದಲ್ಲಿ ಮಾನವೀಯ ಪರಿಸ್ಥಿತಿಯನ್ನು ಸುಧಾರಿಸಲು ಮುಂದಿನ 30 ದಿನಗಳಲ್ಲಿ ಕ್ರಮಗಳನ್ನು ಕೈಗೊಳ್ಳಬೇಕು ಅಥವಾ ಅಮೆರಿಕದ ಮಿಲಿಟರಿ ನೆರವಿನ ಮೇಲೆ ಸಂಭಾವ್ಯ ನಿರ್ಬಂಧಗಳನ್ನು ಎದುರಿಸಬೇಕು ಎಂದು ಅಕ್ಟೋಬರ್ 15ರಂದು ಇಸ್ರೇಲ್‌ಗೆ ಗಡು ವಿಧಿಸಿರುವುದಾಗಿ ಅಮೆರಿಕದ ಅಧಿಕಾರಿಗಳು ಹೇಳಿದ್ದಾರೆ.

# ಜೆಎಸ್‌ಡಬ್ಲ್ಯು ಸ್ಪೋರ್ಟ್ಸ್ ನಿರ್ದೇಶಕರಾಗಿ ಬಿಸಿಸಿಐ ಮಾಜಿ ಅಧ್ಯಕ್ಷ ಸೌರವ್ ಗಂಗೂಲಿ ನೇಮಕ

**ನವದೆಹಲಿ,ಅ.17:** ಭಾರತ ಕ್ರಿಕೆಟ್ ತಂಡದ ಮಾಜಿ ನಾಯಕ ಹಾಗೂ ಬಿಸಿಸಿಐ ಮುಖ್ಯಸ್ಥ ಸೌರವ್ ಗಂಗೂಲಿ ಅವರು ಜಿಂದಾಲ್ ಸೌತ್ ವೆಸ್ಟ್ ಸ್ಪೋರ್ಟ್ಸ್‌ನ ಕ್ರಿಕೆಟ್ ನಿರ್ದೇಶಕರಾಗಿ ನೇಮಕಗೊಂಡಿದ್ದಾರೆ. 2019 ರಲ್ಲಿ ಡೆಲ್ಲಿ ಕ್ಯಾಪಿಟಲ್ಸ್‌ಗೆ ಸಲಹೆಗಾರರಾಗಿ ಸೇರಿದ ಗಂಗೂಲಿ, ಈಗ ಐಪಿಎಲ್ ಮತ್ತು ಡಬ್ಲ್ಯುಪಿಎಲ್‌ನಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡ ಮತ್ತು ಎಸ್‌ಎಟಿ 20 ಲೀಗ್‌ನಲ್ಲಿ ಪ್ರಿಟೋರಿಯಾ ಕ್ಯಾಪಿಟಲ್ಸ್ ಸೇರಿದಂತೆ ಜೆಎಸ್‌ಡಬ್ಲ್ಯು ಸ್ಪೋರ್ಟ್ಸ್‌ನ ಎಲ್ಲಾ ಕ್ರಿಕೆಟ್ ಆಸ್ತಿಗಳ ಮೇಲ್ವಿಚಾರಣೆ ನಡೆಸಲಿದ್ದಾರೆ. ಅಧಿಕೃತ ಪ್ರಕಟಣೆಯ ನಂತರ ಮಾತನಾಡಿದ ಗಂಗೂಲಿ, "ಜೆಎಸ್‌ಡಬ್ಲ್ಯು ಗ್ರೂಪ್ ಮತ್ತು ಜಿಂದಾಲ್ ಕುಟುಂಬವನ್ನ ವೈಯಕ್ತಿಕವಾಗಿ ಮತ್ತು ವೃತ್ತಿಪರವಾಗಿ ತಿಳಿದುಕೊಳ್ಳುವ ಸಂತೋಷವನ್ನ ನಾನು ಹೊಂದಿದ್ದೇನೆ, ಇದು ಇದನ್ನು ಸುಲಭ ನಿರ್ಧಾರವನ್ನಾಗಿ ಮಾಡಿದೆ. ಜೆಎಸ್‌ಡಬ್ಲ್ಯು ಸ್ಪೋರ್ಟ್ಸ್ ಮಂಡಳಿಯಾದ್ಯಂತ ದೂರದೃಷ್ಟಿಯ ಕೆಲಸಗಳನ್ನು ಮಾಡುತ್ತಿದೆ, ಮತ್ತು ಅದರ ಎಲ್ಲಾ ಕ್ರಿಕೆಟ್ ಯೋಜನೆಗಳಿಗೆ ನನ್ನ ಅನುಭವವನ್ನು ನೀಡಲು ನನಗೆ ಸಂತೋಷವಾಗಿದೆ" ಎಂದರು.



# ಪ್ರಜ್ಞಾನಂದ ಎದುರು ಪರಾಭವಗೊಂಡ ಮಾಸ್ಟರ್ ವಿಶ್ವನಾಥನ್ ಆನಂದ್

ಬೆಂಗಳೂರು: ಮಂಗಳವಾರ ಡಬ್ಲ್ಯುಆರ್ ಮಾಸ್ಟರ್ಸ್ ಚೆಸ್ ಕ್ವಾರ್ಟರ್ ಫೈನಲ್ ನಲ್ಲಿ ಮಾಸ್ಟರ್ ವಿಶ್ವನಾಥನ್ ಆನಂದ್ ಅವರು ಪ್ರಜ್ಞಾನಂದ ಎದುರು ಪರಾಭವಗೊಂಡಿದ್ದಾರೆ. ಕಪ್ಪು ಕಾಯಿಗಳೊಂದಿಗೆ ಆಡಿದ ವಿಶ್ವನಾಥನ್ ಆನಂದ್ ಒಡ್ಡಿದ ಎಲ್ಲ ಸವಾಲುಗಳನ್ನೂ ಸಮರ್ಥವಾಗಿ ಹಿಮ್ಮೆಟ್ಟಿಸುವಲ್ಲಿ 19 ವರ್ಷದ ಪ್ರಜ್ಞಾನಂದ ಯಶಸ್ವಿಯಾದರು. ಕೇವಲ 10 ನಿಮಿಷಗಳನ್ನು ಹೊಂದಿದ್ದ ಪ್ರಜ್ಞಾನಂದ ಗೆಲ್ಲಲೇಬೇಕಾದ ಸ್ಥಿತಿಯಲ್ಲಿದ್ದರೆ, ಕೇವಲ ಆರು ನಿಮಿಷಗಳನ್ನು ಹೊಂದಿದ್ದ ವಿಶ್ವನಾಥನ್ ಆನಂದ್ ಅವರಿಗೆ ಸೆಮಿಫೈನಲ್ ಪ್ರವೇಶಿಸಲು ಕೇವಲ ಡ್ರಾ ಸಾಕಾಗಿತ್ತು. ಆದರೆ, ತಮ್ಮ ಬಿಳಿ ಕಾಯಿಗಳನ್ನು ಸಮರ್ಥವಾಗಿ ಮುನ್ನಡೆಸಿದ ಪ್ರಜ್ಞಾನಂದ, ವಿಶ್ವನಾಥನ್ ಆನಂದ್ ಅವರನ್ನು ಮಣಿಸುವಲ್ಲಿ ಯಶಸ್ವಿಯಾದರು.



# ಡೆನ್ಮಾರ್ಕ್ ಓಪನ್: ಎಂಟರ ಘಟ್ಟಕ್ಕೆ ಸಿಂಧು

**ಒಡೆನ್ಸ್,ಅ.17:** ಹಿನ್ನಡೆಯಿಂದ ಚೇತರಿಸಿಕೊಂಡ ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿ.ವಿ.ಸಿಂಧು, ವಿಶ್ವದ ಏಳನೇ ಕ್ರಮಾಂಕದ ಆಟಗಾರ್ತಿ ಹಾನ್ ಹ್ಯು ಮೇಲೆ ಜಯಗಳಿಸಿ ಡೆನ್ಮಾರ್ಕ್ ಓಪನ್ ಸೂಪರ್ 750 ಬ್ಯಾಡ್ಮಿಂಟನ್ ಟೂರ್ನಿಯ ಕ್ವಾಟರ್‌ಫೈನಲ್‌ಗೆ ಮುನ್ನಡೆದರು.

ಗುರುವಾರ ನಡೆದ ಎರಡನೇ ಸುತ್ತಿನ ಪಂದ್ಯದಲ್ಲಿ 18ನೇ ಕ್ರಮಾಂಕದ ಸಿಂಧು 18-21, 21-12, 21-16 ರಿಂದ ಮಾಜಿ ವಿಶ್ವ ಚಾಂಪಿಯನ್ ಹಾನ್ ಹ್ಯು ಅವರನ್ನು ಹಿಮ್ಮೆಟ್ಟಿಸಿದರು. ಪಂದ್ಯ 63 ನಿಮಿಷ ನಡೆಯಿತು.

ಮೇ ತಿಂಗಳು ಮಲೇಷ್ಯಾ ಮಾಸ್ಟರ್ಸ್ ಟೂರ್ನಿಯಲ್ಲಿ ಇದೇ ಆಟಗಾರ್ತಿಯನ್ನು ಸೋಲಿಸಿದ ನಂತರ ಇದು ವಿಶ್ವದ ಅಗ್ರ 10ರಲ್ಲಿರುವ ಆಟಗಾರ್ತಿಯೊಬ್ಬರ ಮೇಲೆ ಸಿಂಧು ಸಾಧಿಸಿದ ಮೊದಲ ಗೆಲುವಾಗಿದೆ.

ತನ್ಮೂಲಕ ಸಿಂಧು, ಹಾನ್ ವಿರುದ್ಧ ಎಂಟು ಮುಖಾಮುಖಿಯಲ್ಲಿ ಏಳನೇ ಬಾರಿ ಗೆದ್ದಂತಾಯಿತು.

ಭಾರತದ ಆಟಗಾರ್ತಿ ಕ್ವಾಟರ್‌ಫೈನಲ್‌ನಲ್ಲಿ ಇಂಡೊನೇಷ್ಯಾದ ಜಾರ್ಜಿಯಾ ಮರಿಸ್ಕಾ ತುಂಜುಂಗ್ ಅಥವಾ ಡೆನ್ಮಾರ್ಕ್‌ನ ಮಿಯಾ ಬ್ಲಿಚ್‌ಫೆಲ್ಟ್ ಅವರನ್ನು ಎದುರಿಸಲಿದ್ದಾರೆ. ಮರಿಸ್ಕಾ ಅವರು ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ತಮ್ಮದಾಗಿಸಿಕೊಂಡಿದ್ದರು.

ಈ ಟೂರ್ನಿಯಲ್ಲಿ ಸಿಂಧು ಅವರನ್ನು ಬಿಟ್ಟರೆ ಸಿಂಗಲ್ಸ್, ಡಬಲ್ಸ್‌ನಲ್ಲಿ ಭಾರತದ ಉಳಿದ ಸ್ಪರ್ಧಿಗಳು ಹೊರಬಿದ್ದಿದ್ದಾರೆ.



# 6 ಬಾರಿಯ ವಿಶ್ವಚಾಂಪಿಯನ್ಸ್ ಆಸ್ಟ್ರೇಲಿಯಾ ಮಣಿಸಿ ಇತಿಹಾಸ ಸೃಷ್ಟಿಸಿದ ದಕ್ಷಿಣ ಆಫ್ರಿಕಾ: ಸತತ 2ನೇ ಬಾರಿಗೆ ಫೈನಲ್ ಪ್ರವೇಶ



**ದುಬೈ,ಅ.17:** 2024 ರ ಐಸಿಸಿ ಮಹಿಳಾ ಟಿ 20 ವಿಶ್ವಕಪ್‌ನ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಆರು ಬಾರಿಯ ವಿಶ್ವಚಾಂಪಿಯನ್ ಆಸ್ಟ್ರೇಲಿಯಾ ತಂಡವನ್ನು ಬಗ್ಗುಬಡಿದ ದಕ್ಷಿಣ ಆಫ್ರಿಕಾ ಮಹಿಳಾ ತಂಡ ಫೈನಲ್ ಪ್ರವೇಶಿಸಿದೆ. ಗುರುವಾರ ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ 8 ವಿಕೆಟ್‌ಗಳಿಂದ ಆಸ್ಟ್ರೇಲಿಯಾ ಮಣಿಸಿದ ದಕ್ಷಿಣ ಆಫ್ರಿಕಾ ಸತತ 2ನೇ ಟಿ20 ವಿಶ್ವಕಪ್ ಫೈನಲ್ ಪ್ರವೇಶಿಸಿದೆ.

ಸೆಮಿಫೈನಲ್‌ನಲ್ಲಿ ಆಸೀಸ್ ಮಣಿಸುವ ಮೂಲಕ ಕಳೆದ ಟಿ20 ವಿಶ್ವಕಪ್ ಫೈನಲ್ ಸೋಲಿಗೂ ಸೇಡು ತೀರಿಸಿಕೊಂಡಿದೆ.

ನಾಯಕ ಅಲಿಸ್ಸಾ ಹೀಲಿ ಅನುಪಸ್ಥಿತಿಯಲ್ಲಿ ಕಣಕ್ಕಿಳಿದಿದ್ದ ಆಸ್ಟ್ರೇಲಿಯಾ ತಂಡ ಟಾಸ್ ಸೋತು ಬ್ಯಾಟಿಂಗ್‌ಗೆ ಇಳಿಯಿತು. ಆದರೆ ನಿರೀಕ್ಷಿತ ಆರಂಭ ಪಡೆಯುವಲ್ಲಿ ವಿಫಲವಾಯಿತು. 2ನೇ ಓವರ್‌ನಲ್ಲೇ ಗ್ರೇಸ್ ಹ್ಯಾರಿಸ್ (3) ವಿಕೆಟ್ ಕಳೆದುಕೊಂಡಿತು. 3ನೇ ಓವರ್‌ನಲ್ಲಿ 3ನೇ ಕ್ರಮಾಂಕಕ್ಕೆ ಬಡ್ತಿ ಪಡೆದು ಬಂದ ಆಲ್ರೌಂಡರ್ ಜಾರ್ಜಿಯಾ ವಾರ್ಹಾಮ್ 5 ರನ್‌ಗೆ ವಿಕೆಟ್ ಒಪ್ಪಿಸಿದರು.

18ಕ್ಕೆ 2 ವಿಕೆಟ್ ಕಳೆದುಕೊಂಡು ಸಂಕಷ್ಟದಲ್ಲಿದ್ದ ಆಸ್ಟ್ರೇಲಿಯಾ ತಂಡಕ್ಕೆ ಬೆತ್ ಮೂನಿ ಹಾಗೂ ನಾಯಕಿ ತಹ್ಲಿಯಾ ಮೆಕ್ಗ್ರಾತ್ 3ನೇ ವಿಕೆಟ್‌ಗೆ 50 ರನ್‌ಗಳ ಜೊತೆಯಾಟ ನೀಡಿದರು. ಆದರೆ ವಿಕೆಟ್ ಉಳಿಸಿಕೊಳ್ಳುವ ಮನಸ್ಥಿತಿಯಲ್ಲಿ ಬ್ಯಾಟಿಂಗ್ ಸಾಕಷ್ಟು ಎಸೆತಗಳನ್ನ ವ್ಯರ್ಥ ಮಾಡಿಕೊಂಡರು. ಮೆಕ್ಗ್ರಾತ್ 33 ಎಸೆತಗಳನ್ನ ಎದುರಿಸಿ 3 ಬೌಂಡರಿ ಸಹಿತ ಕೇವಲ 27ರನ್ನಗಳಿಸಿ ವಿಕೆಟ್ ಒಪ್ಪಿಸಿದರು. ಇದು ಆಸ್ಟ್ರೇಲಿಯಾ ತಂಡದ ಮೊತ್ತಕ್ಕೆ ದೊಡ್ಡ ಪೆಟ್ಟು ನೀಡಿತು. ಇವರ ಜೊತೆಗೂಡಿ ಆಡಿ ಬೆತ್ ಮೂನಿ ಕೂಡ 42 ಎಸೆತಗಳಲ್ಲಿ 44 ರನ್‌ಗಳಿಸಿದರು. ಆರಂಭಿರಾಗಿ ಬಂದು 17 ನೇ ಓವರ್ ವರೆಗೂ ಆಡಿದ ಮೂನಿ ಕೇವಲ ಸಿಡಿಸಿದ್ದು 2 ಬೌಂಡರಿ ಮಾತ್ರ.

ಕೊನೆಯಲ್ಲಿ ಚುಕುಕಾಗಿ ಆಡಿದ ಎಲಿಸ್ ಪೆರ್ರಿ 23 ಎಸೆತಗಲ್ಲಿ 2 ಬೌಂಡರಿ ಸಹಿತ 31 ರನ್ ಗಳಿಸಿ ಕೊನೆಯ ಎಸೆತದಲ್ಲಿ ವಿಕೆಟ್ ಒಪ್ಪಿಸಿದರೆ, ಲಿಚ್ಫೀಲ್ಡ್ 9 ಎಸೆತಗಳಲ್ಲಿ 3 ಬೌಂಡರಿ ಸಹಿತ ಅಜೇಯ 16 ರನ್‌ಗಳಿಸಿ 134 ರನ್ನಗಳ ಸ್ಪರ್ಧಾತ್ಮಕ ಮೊತ್ತ ದಾಖಲಿಸಲು ಆಸ್ಟ್ರೇಲಿಯಾಗೆ ನೆರವಾದರು.

ದಕ್ಷಿಣ ಆಫ್ರಿಕಾ ಪರ ಅಯಬೊಂಗಾ ಖಾಕ24ಕ್ಕೆ 2, ಮ್ಲಾಬಾ 31ಕ್ಕೆ 1, ಮರಿಜಾನ್ ಕಾಪ್ 24ಕ್ಕೆ 1 ವಿಕೆಟ್ ಪಡೆದರು ಮಿಂಚಿದರು. 135ರನ್‌ಗಳ ಗುರಿ ಬೆನ್ನಟ್ಟಿದ ದಕ್ಷಿಣ ಆಫ್ರಿಕಾ ತಂಡ 2 ವಿಕೆಟ್ ಕಳೆದುಕೊಂಡು ಇನ್ನು 16 ಎಸೆತಗಳಿರುವಂತೆ ಜಯ ಸಾಧಿಸಿತು. ಚೇಸಿಂಗ್ ಮೊದಲ ವಿಕೆಟ್ ಬೇಗ ಕಳೆದುಕೊಂಡರು, 2ನೇ ವಿಕೆಟ್‌ಗೆ ಅದ್ಭುತ ಜೊತೆಯಾಟ ಸಾಧಿಸಿ ಗೆಲುವು ಸಾಧಿಸಿತು. ಇನ್ನಿಂಗ್ಸ್ ಆರಂಭಿಸಿದ್ದ ತಜ್ಮಿನ್ ಬ್ರಿಟ್ಸ್ 15ರನ್ನಗಳಿಸಿ ವಿಕೆಟ್ ಒಪ್ಪಿಸಿದರು. ಆದರೆ ನಾಯಕಿ ಲೌರಾ ವೋಲ್ವಾರ್ಡ್ಟ್ ಜೊತೆಗೂಡಿದ ಅನ್ನೇಕ್ ಬೋಸ್ಚ್ 96ರನ್ನಗಳ ಜೊತೆಯಾಟ ನೀಡಿದರು. ನಾಯಕಿ ಲೌರಾ 37 ಎಸೆತಗಳಲ್ಲಿ 3 ಬೌಂಡರಿ, 1 ಸಿಕ್ಸರ್ ಸಹಿತ 42ರನ್ ಗಳಿಸಿ 14 ರನ್ ಬೇಕಿದ್ದಾಗ ಔಟಾದರು.

ಬೋಸ್ಚ್ 48 ಎಸೆತಗಳಲ್ಲಿ 8 ಬೌಂಡರಿ ಹಾಗೂ ಒಂದು ಸಿಕ್ಸರ್ ಸಹಿತ ಅಜೇಯ 74ರನ್‌ಗಳಿಸಿ ತಂಡವನ್ನ ಗೆಲುವಿನ ಗಡಿ ದಾಟಿಸಿದರು.

# ಇಂದು ಪ್ರೊ ಕಬಡ್ಡಿ ಲೀಗ್ ಆರಂಭ



**ಹೊಸದಿಲ್ಲಿ,ಅ.17:** ಬಹು ನಿರೀಕ್ಷಿತ 11ನೇ ಆವೃತ್ತಿಯ ಪ್ರೊ ಕಬಡ್ಡಿ ಲೀಗ್‌ಗೆ(ಪಿಕೆಎಲ್)ಶುಕ್ರವಾರದಂದು ಹೈದರಾಬಾದ್‌ನಲ್ಲಿ ತೆಲುಗು ಟೈಟಾನ್ಸ್ ಹಾಗೂ ಬೆಂಗಳೂರು ಬುಲ್ಸ್ ನಡುವಿನ ಹೈಪ್ರೊಫೈಲ್ ಪಂದ್ಯದ ಮೂಲಕ ಚಾಲನೆ ಸಿಗಲಿದೆ.

ಮೊದಲ ಪಂದ್ಯದ ಮುನ್ನಾದಿನವಾದ ಗುರುವಾರ ಹೈದರಾಬಾದ್‌ನ ಬಂಜಾರ ಹಿಲ್ಸ್‌ನಲ್ಲಿ ಹೊಸ ಪಿಕೆಎಲ್ ಋತುವನ್ನು ಅಧಿಕೃತವಾಗಿ ಉದ್ಘಾಟಿಸಲಾಯಿತು.

ಈ ವೇಳೆ ಕಬಡ್ಡಿ ಲೀಗ್‌ನ ಆಯುಕ್ತ ಅನುಪಮ್ ಗೋಸ್ವಾಮಿ ಜೊತೆಗೆ ತಂಡದ ನಾಯಕರಾದ ಪವನ್ ಸೆಹ್ರಾವತ್(ತೆಲುಗು ಟೈಟಾನ್ಸ್) ಹಾಗೂ ಪ್ರದೀಪ್ ನರ್ವಾಲ್(ಬೆಂಗಳೂರು ಬುಲ್ಸ್)ಉಪಸ್ಥಿತರಿದ್ದರು. ಉಳಿದ 10 ತಂಡಗಳ ನಾಯಕರು ಸಂಭ್ರಮದಲ್ಲಿ ಭಾಗಿಯಾದರು.

ಈ ಬಾರಿ ಸಾಂಪ್ರದಾಯಿಕ 12 ನಗರಗಳ ಬದಲಿಗೆ ಮೂರು ನಗರಗಳಲ್ಲಿ ಲೀಗ್ ನಡೆಯಲಿದ್ದು, ಇದು ಸ್ಪರ್ಧಾವಳಿಗೆ ಹೊಸ ಆಯಾಮ ನೀಡುವ ಸಾಧ್ಯತೆಯಿದೆ.

ಹಾಲಿ ಚಾಂಪಿಯನ್ ಪುಣೇರಿ ಪಲ್ಟನ್ ತಂಡ ಕಳೆದ ಬಾರಿ ಮಿಂಚಿದ್ದ ಅಸ್ಲಾಂ ಇನಾಂದಾರ್ ಸಹಿತ ಬಹುತೇಕ ಆಟಗಾರರನ್ನು ಉಳಿಸಿಕೊಂಡಿದೆ. ತಮಿಳ್ ತಲೈವಾಸ್ 2.15 ಕೋ.ರೂ. ನೀಡಿ ಸಚಿನ್ ತನ್ವರ್‌ರನ್ನು ತನ್ನ ತೆಕ್ಕೆಗೆ ಸೇರಿಸಿಕೊಂಡಿದೆ.

ಪ್ರಸಕ್ತ ಲೀಗ್‌ನಲ್ಲಿ ಬೆಂಗಳೂರು ಬುಲ್ಸ್, ಹರ್ಯಾಣ ಸ್ಟೀಲರ್ಸ್, ಬಂಗಾಳ ವಾರಿಯರ್ಸ್, ದಬಾಂಗ್ ಡೆಲ್ಲಿ, ಗುಜರಾತ್ ಜಯಂಟ್ಸ್, ಜೈಪುರ ಪಿಂಕ್ ಪ್ಯಾಂಥರ್ಸ್, ಪಾಟ್ನಾ ಪೈರೇಟ್ಸ್, ಪುಣೇರಿ ಪಲ್ಟನ್, ತಮಿಳ್ ತಲೈವಾಸ್, ತೆಲುಗು ಟೈಟಾನ್ಸ್, ಯು ಮುಂಬಾ ಹಾಗೂ ಯುಪಿ ಯೋಧಾಸ್ ತಂಡಗಳು ಭಾಗವಹಿಸಲಿವೆ.